ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 135
6-11-2025 ಗುರುವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 135

## ಆ ಕಣ್ಣೀರು ಅಪ್ಪನಿಗಾಗಿ, ಅಪ್ಪನಿಗಾದ ಅವಮಾನಕ್ಕಾಗಿ, ಅವಮಾನವಾದ ನೆಲದಲ್ಲೇ ತಂದೆ ಹೆಮ್ಮೆ ಪಡುವಂತೆ ಮಾಡಿದ ಮಗಳು

ಅಪ್ಪ ಎಂದರೆ ಆಕಾಶ.. ಹೆಣ್ಣು ಮಕ್ಕಳ ಪಾಲಿಗಂತೂ ಅಪ್ಪನೇ ಹೀರೋ.. ಅಪ್ಪನೇ ಸರ್ವಸ್ವ.. ಅಂತಹ ಅಪ್ಪನಿಗೆ ಅವಮಾನವಾದರೆ ಯಾವ ಮಗಳು ತಾನೇ ಸಹಿಸಿಯಾಳು..?

ಮಗಳ ಕ್ರಿಕೆಟ್ ಭವಿಷ್ಯಕ್ಕಾಗಿ ತಮ್ಮ ಜೀವನವನ್ನೇ ಸವೆಸಿದ ತಂದೆ ಅವರು.. ಬದುಕು ಕಟ್ಟಿಕೊಳ್ಳಬೇಕಾದ ವಯಸ್ಸಿನಲ್ಲಿ ಮಗಳಿಗೆ ಕ್ರಿಕೆಟ್ ಭವಿಷ್ಯ ಕಟ್ಟಿಕೊಡಲು ನಿಂತಿದ್ದ ತಂದೆ.. ಅದೆಷ್ಟೋ ದಿನಗಳನ್ನು ನಿದ್ದೆಯಿಲ್ಲದೆ ಕಳೆದಿದ್ದ ತಂದೆಗೆ ಕ್ರಿಕೆಟ್ ಮೈದಾನದಲ್ಲಿ ಮಗಳ ಪ್ರತಿ ಹೆಜ್ಜೆಯೂ ಹೊಸ ಭರವಸೆ ಮೂಡಿಸುತ್ತಿತ್ತು. 17 ವರ್ಷ ತುಂಬುವ ಮೊದಲೇ ಏಕದಿನ ಕ್ರಿಕೆಟ್'ನಲ್ಲಿ ಮಗಳು ದ್ವಿಶತಕ (ದೇಶೀಯ ಕ್ರಿಕೆಟ್) ಬಾರಿಸಿ ಬಿಟ್ಟಳು. ಇವಳು ನಿಸ್ಸಂದೇಹವಾಗಿ ಖಟಿ-ಜುಚಿ ಟಚಿಣಜಡುಚಿಟ ಎಂದು ತಂದೆಗೆ ಮೊದಲ ಬಾರಿ ಅನ್ನಿಸಿದ್ದು ಆಗಲೇ.

ಅದೇ ಮಗಳು ಜೀವನದ ಅತ್ಯಂತ ಶ್ರೇಷ್ಠ, ಭಾರತೀಯ ಮಹಿಳಾ ಕ್ರಿಕೆಟ್ ಇತಿಹಾಸದಲ್ಲೇ ಅಗ್ರಗಣ್ಯ ಇನ್ನಿಂಗ್ಸ್ ಒಂದನ್ನು ಆಡಿ ಭಾರತ ತಂಡವನ್ನು ಏಕದಿನ ವಿಶ್ವಕಪ್ ಫೈನಲ್'ಗೆ ಮುನ್ನಡೆಸಿದ್ದಾಳೆ. ಪಂದ್ಯ ಗೆದ್ದು ಕೊಟ್ಟ ಕ್ಷಣ ಆಕೆಯ ಕಣ್ಣಲ್ಲಿ ಹರಿದ ಕಣ್ಣೀರು, ಭಾವನೆಗಳ ಕಟ್ಟೆಯೊಡೆದ ಪರಿ ಆನಂದಭಾಷ್ಪವೂ ಹೌದು, ಅವಳ ಎದೆಯಲ್ಲಿ ಮಡುಗಟ್ಟಿದ್ದ ಹತಾಶೆ, ಆಕ್ರೋಶದ ಸಾಕ್ಷಿಯೂ ಹೌದು.

ಜೆಮಿಮಾ ರಾಡ್ರಿಗ್ಸ್.. ಮುಂಬೈ ಹುಡುಗಿಯ ಮೂಲ ಕರಾವಳಿ ಜಿಲ್ಲೆ ಮಂಗಳೂರು. ತಂದೆ ಇವಾನ್ ರಾಡ್ರಿಗ್ಸ್ ಮಂಗಳೂರಿನವರು. ಮುಂಬೈನಲ್ಲಿ ನೆಲೆಸಿರುವ ಕರಾವಳಿ ಕುಟುಂಬದಲ್ಲಿ ಹುಟ್ಟಿದವಳು ಜೆಮಿಮಾ. ತಂದೆ-ತಾಯಿ ಕೋಚಿಂಗ್ ಕ್ಲಾಸ್'ಗಳನ್ನು ನಡೆಸುತ್ತಾ ಮಗಳ ಕ್ರಿಕೆಟ್ ಭವಿಷ್ಯಕ್ಕೆ ಬುನಾದಿ ಹಾಕಿದ್ದರು.

17ನೇ ವರ್ಷಕ್ಕೆ ಮೊದಲ ಬಾರಿ ಭಾರತ ತಂಡಕ್ಕೆ ಆಯ್ಕೆಯಾದಾಗ ಜೆಮಿಮಾ ರಾಡ್ರಿಗ್ಸ್ ಜೊತೆ ಮಾತನಾಡಿದ್ದೆ. "ಭಾರತ ಪರ ಏಕದಿನ ದ್ವಿಶತಕ ಬಾರಿಸಬೇಕೆಂಬ ಕನಸಿದೆ" ಎಂದಿದ್ದಳು. ಮಿಥಾಲಿ ರಾಜ್ ಅವರಿಗೆ **perfect replacement** ಇವಳೇ ಎಂದು ಆಗಲೇ ಅನ್ನಿಸಿತ್ತು.

ಭಾರತ ತಂಡಕ್ಕೆ ಪದಾರ್ಪಣೆ ಮಾಡುತ್ತಿದ್ದಂತೆ ಜೆಮಿಮಾ ರಾಡ್ರಿಗ್ಸ್'ಗೆ ಮುಂಬೈ ಜಿಮ್ಖಾನ



ಕ್ಲಬ್'ನ ಸದಸ್ಯತ್ವ ಸಿಕ್ಕಿತ್ತು.

ಕ್ಲಬ್ ಎಂದ ಮೇಲೆ ಅಲ್ಲಿ ಕುಟುಂಬದ ಕಾರ್ಯಕ್ರಮಗಳು, ಸಾಮಾಜಿಕ ಕಾರ್ಯಕ್ರಮಗಳ ಆಯೋಜನೆ ಸಾಮಾನ್ಯ. ಮಗಳ ಸದಸ್ಯತ್ವದ ಹೆಸರಲ್ಲಿ ಜೆಮಿಮಾ ತಂದೆ ಜಿಮ್ಖಾನಾ ಕ್ಲಬ್'ನಲ್ಲಿ ಸ್ನೇಹಿತರು, ಕುಟುಂಬದವರನ್ನು ಸೇರಿಸಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದರು. ಅದೇ ಅವರಿಗೆ ಮುಳುವಾಯಿತು. ಕ್ಲಬ್ ಆವರಣವನ್ನು ಧಾರ್ಮಿಕ ಕಾರ್ಯಕ್ರಮಗಳಿಗೆ ಮತ್ತು ಮತಾಂತರಕ್ಕೆ ಬಳಸುತ್ತಿದ್ದರು ಎಂಬ ಆರೋಪವನ್ನು ಇವಾನ್ ರಾಡ್ರಿಗ್ಸ್ ಮೇಲೆ ಹೊರಿಸಲಾಯಿತು. ಜೆಮಿಮಾ ರಾಡ್ರಿಗ್ಸ್'ಗೆ ನೀಡಿದ್ದ ಜಿಮ್ಖಾನಾ ಕ್ಲಬ್'ನ 3 ವರ್ಷದ ಸದಸ್ಯತ್ವವನ್ನು ರದ್ದುಗೊಳಿಸಲಾಯಿತು.

ತಂದೆಯ ಮೇಲೆ ಹೊರಿಸಲಾದ ಆರೋಪ, ಕ್ಲಬ್ ಸದಸ್ಯತ್ವ ರದ್ದು ಪಡಿಸುವ ಮೂಲಕ ತನ್ನ ಹೆಸರಿಗೆ ಅಂಟಿಸಿದ ಕಳಂಕ.. ಜೆಮಿಮಾ ಘಾಸಿಗೊಂಡು ಬಿಟ್ಟಳು.

ಕಾಕತಾಳೀಯವೋ ಗೊತ್ತಿಲ್ಲ.. ಭಾರತ ತಂಡದಲ್ಲಿ ಅವಳ ಸ್ಥಾನವೂ ಅಲುಗಾಡಲಾರಂಭಿಸಿತು. ಜೆಮಿಮಾ ಮೂಲತಃ ಅಗ್ರಕ್ರಮಾಂಕದ ಬ್ಯಾಟರ್. ಅವಳನ್ನು ಕೆಳಕ್ರಮಾಂಕಕ್ಕೆ ತಳ್ಳಲಾಯಿತು.

ಈ ವಿಶ್ವಕಪ್ ಟೂರ್ನಿಯ ಕೆಲ ಪಂದ್ಯಗಳಲ್ಲಿ ಆಕೆಯನ್ನು ಆಡಿಸಲೇ ಇಲ್ಲ. ಅಮೋಲ್ ಮಜುಮ್ದಾರ್'ನಂತಹ ಯೋಗ್ಯ ಕೋಚ್ ಕಣ್ಣಳತೆಯಲ್ಲೇ ಇದೆಲ್ಲಾ ನಡೆದು ಹೋಯಿತು.

ಹುಟ್ಟಿದ ಸೂರ್ಯ ಮುಳುಗಲೇಬೇಕು.. ಮುಳುಗಿದ ಸೂರ್ಯ ಮತ್ತೆ ಹುಟ್ಟಿ ಬರಲೇಬೇಕು. ಇದು ಪ್ರಕೃತಿ ನಿಯಮ..

ಇಂಗ್ಲೆಂಡ್ ವಿರುದ್ಧ ಗೆಲ್ಲಲೇಬೇಕಾದ ಪಂದ್ಯದಲ್ಲಿ ಸೋತಾಗ, ಕೈಯಲ್ಲಿದ್ದ ಗೆಲುವನ್ನು ಕೈಚೆಲ್ಲಿದಾಗ ತಂಡದ ಆಡಳಿತ ಮಂಡಳಿಗೆ ಜೆಮಿಮಾ ನೆನಪಾಗಿದ್ದಳು.

ನ್ಯೂಜಿಲೆಂಡ್ ವಿರುದ್ಧದ ಮಾಡು ಇಲ್ಲ ಮಡಿ ಪಂದ್ಯದಲ್ಲಿ ಜೆಮಿಮಾಳನ್ನು ಆಕೆಯ ನೆಚ್ಚಿನ ಮೂರನೇ ಕ್ರಮಾಂಕದಲ್ಲಿ ಆಡಿಸಲಾಯಿತು. 55 ಎಸೆತಗಳಲ್ಲಿ ಅಜೇಯ 76 ರನ್. ಭಾರತದ ಗೆಲುವಿಗೆ ತನ್ನ ಕೊಡುಗೆ ನೀಡಿದ್ದಳು ಜೆಮಿಮಾ.

ಇನ್ನು ಆಸ್ಟ್ರೇಲಿಯಾ ವಿರುದ್ಧದ ಸೆಮಿಫೈನಲ್.. ಪುರುಷರೇ ಇರಲಿ, ಮಹಿಳಾ ತಂಡವೇ ಇರಲಿ? ಐಸಿಸಿ ಟೂರ್ನಿಗಳಲ್ಲಿ ಆಸೀಸ್ ರಾಕ್ಷಸ ಆಟಕ್ಕೆ ಹೆಸರುವಾಸಿ. ಅಲ್ಲಿ ಅವರನ್ನು ಸೋಲಿಸುವುದು ಸುಲಭವಲ್ಲ. ಅಂಥದ್ದರಲ್ಲಿ ಭಾರತ ವಿರುದ್ಧದ ಸೆಮಿಫೈನಲ್'ನಲ್ಲಿ 338 ರನ್ ದಾಖಲಾದಾಗ ಗೆಲುವು ನಮ್ಮದೇ ಎಂದು ಬೀಗಿತ್ತು ಆಸೀಸ್ ಮಹಿಳಾ ತಂಡ.

ಸ್ಮೃತಿ ಮಂಧನ ಸಹಿತ 59 ರನ್'ಗಳ ಒಳಗೆ ಭಾರತದ ಎರಡು ವಿಕೆಟ್'ಗಳು ಬಿದ್ದಾಗ ಅಲ್ಲಿಂದ ಎದ್ದು ಬಂದು ವಿಜಯ ವೇದಿಕೆ ಮೇಲೆ ನಿಲ್ಲುವುದು ಸುಲಭದ ಕೆಲಸವಾಗಿರಲಿಲ್ಲ. ಅದು ಸಾಧ್ಯವಾಗುವಂತೆ ಮಾಡಿದ್ದು ಜೆಮಿಮಾ ರಾಡ್ರಿಗ್ಸ್ ಬಾರಿಸಿದ ಶತಕ ಮತ್ತು ಆಕೆ ಹರ್ಮನ್ ಪ್ರೀತ್ ಕೌರ್ ಜೊತೆ ಆಡಿದ ದೊಡ್ಡ ಶತಕದ ಜೊತೆಯಾಟ.

ಅದು ಜೆಮಿಮಾ ಎಂತಹ ಕ್ವಾಲಿಟಿ ಕ್ರಿಕೆಟರ್ ಎಂಬುದನ್ನು ಕ್ರಿಕೆಟ್ ಜಗತ್ತಿಗೆ ಪರಿಚಯಿಸಿದ ಇನ್ನಿಂಗ್ಸ್..

ವಿಶ್ವಕಪ್ ಸೆಮಿಫೈನಲ್.. 339 ರನ್ ಟಾರ್ಗೆಟ್.. ಅದೂ ಆಸ್ಟ್ರೇಲಿಯಾ ವಿರುದ್ಧ. ದೊಡ್ಡ ಶತಕ ಬಾರಿಸಿದ ಜೆಮಿಮಾ ಅಸಾಧ್ಯವನ್ನು ಸಾಧ್ಯವಾಗಿಸಿಯೇ ಬಿಟ್ಟಳು.

ಪಂದ್ಯ ಗೆದ್ದುಕೊಟ್ಟವಳು ಮೈದಾನದಲ್ಲೇ ಬಿಕ್ಕಿ ಬಿಕ್ಕಿ ಅತ್ತು ಬಿಟ್ಟಳು. ಪ್ರೇಕ್ಷಕರ ಗ್ಯಾಲರಿಯಲ್ಲಿ ಕುಳಿತಿದ್ದ ತಂದೆಯತ್ತ ಕೈ ತೋರಿಸಿ 'ನಿಮಗಾದ ಅವಮಾನಕ್ಕೆ ನಾನು ಉತ್ತರ ಕೊಟ್ಟಿದ್ದೇನೆ' ಎಂಬಂತೆ ಸನ್ನೆ ಮಾಡಿದಳು. 3ನೇ ಕ್ರಮಾಂಕದಲ್ಲಿ ಆಡುವ ಅವಕಾಶ ಕೊಟ್ಟವರಿಗೆ ಕೈ ಜೋಡಿಸಿ ಕೃತಜ್ಞತೆ ಅರ್ಪಿಸಿದಳು.

ಪಂದ್ಯ ಮುಗಿದ ನಂತರ ಓಡೋಡಿ ಬಂದು ಅಪ್ಪನನ್ನು ಅಪ್ಪಿಕೊಂಡ ದೃಶ್ಯ, ಆ ಭಾವುಕ ಚಿತ್ರಣ.. ಎಲ್ಲದಕ್ಕೂ ಉತ್ತರ ಹೇಳುತ್ತಿದೆ.

-ಸುದರ್ಶನ್

## ಕೆಎಂಎಫ್ ಶಾಕ್: ನಂದಿನಿ ತುಪ್ಪದ ದರ ಪ್ರತಿ ಲೀಟರ್ ಗೆ 90 ರೂ ಏರಿಕೆ

**ಬೆಂಗಳೂರು :** ಜಿಎಸ್ ಟಿ ಇಳಿಕೆ ಖುಷಿಯಲ್ಲಿದ್ದ ರಾಜ್ಯದ ಗ್ರಾಹಕರಿಗೆ ಕೆಎಂಎಫ್ ಶಾಕ್ ನೀಡಿದ್ದು, ನಂದಿನಿ ತುಪ್ಪದ ದರ ಪ್ರತಿ ಲೀಟರ್ಗೆ 90 ರೂಪಾಯಿ ಏರಿಕೆ ಮಾಡಿದೆ. ಇಂದಿನಿಂದಲೇ ಪರಿಷ್ಕೃತ ದರ ಜಾರಿಯಾಗಿದೆ. ಇತ್ತೀಚಿಗಷ್ಟೇ ಜಿಎಸ್ಟಿ ದರ ಇಳಿಕೆಯಾದ ನಂತರ ಕೆಎಂಎಫ್ ಹಾಲು ಉತ್ಪನ್ನಗಳ ದರ ಇಳಿಕೆ ಮಾಡಿತ್ತು. ನಂದಿನಿ ತುಪ್ಪದ ಬೆಲೆ 40 ರೂಪಾಯಿ ಇಳಿಕೆಯಾಗಿತ್ತು. ಈ ಮಧ್ಯೆ, ರಾಜ್ಯದಲ್ಲಿ ಮತ್ತೆ ನಂದಿನಿ ಹಾಲಿನ ದರ ಏರಿಕೆಯಾಗುವ ಸಾಧ್ಯತೆ ಇದ್ದು ಈ ಬಗ್ಗೆ ಸ್ವತಃ ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ಮಾಹಿತಿ ನೀಡಿದ್ದಾರೆ.

## ಬೀದರ್: ರಸ್ತೆ ಅಪಘಾತದಲ್ಲಿ 3 ಸಾವು

**ಬೀದರ್:** ಜಿಲ್ಲೆಯ ಭಾಲ್ಕಿ ತಾಲೂಕಿನ ನೀಲಮ್ಮನಳ್ಳಿ ತಾಂಡಾ ಬಳಿ ಬೆಳಗ್ಗೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಮೂವರು ಸಾವನ್ನಪ್ಪಿದ್ದಾರೆ.

ಕಾರು ಮತ್ತು ಕೊರಿಯರ್ ವಾಹನ ಮುಖಾಮುಖಿ ಡಿಕ್ಕಿಯಾಗಿ ಈ ಅಪಘಾತ ಸಂಭವಿಸಿದೆ. ಪ್ರಾಥಮಿಕ ತನಿಖೆಯ ಪ್ರಕಾರ, ಐದು ಜನರಿದ್ದ ಕಾರು ಹುಮ್ನಾಬಾದ್ ಮೂಲಕ ಬೀದರ್-ಕಲಬುರಗಿ ಹೆದ್ದಾರಿಯ ಕಡೆಗೆ ತಿರುವು ಪಡೆದು ಕೊರಿಯರ್ ಸೇವೆಗಾಗಿ ಕಾರ್ಯನಿರ್ವಹಿಸುತ್ತಿದ್ದ ವಾಹನಕ್ಕೆ ಮುಖಾಮುಖಿ ಡಿಕ್ಕಿ ಹೊಡೆದಾಗ ಅಪಘಾತ ಸಂಭವಿಸಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಕಲಬುರಗಿ ಜಿಲ್ಲೆಯ ಗಾಣಗಾಪುರ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಿ ಹಿಂತಿರುಗುತ್ತಿದ್ದಾಗ ಈ ಅಪಘಾತ ಸಂಭವಿಸಿದೆ.

## ಸಾಲಗಾರರಿಗೆ ಹೆದರಿ ರೈತ ಆತ್ಮಹತ್ಯೆ

**ದಾವಣಗೆರೆ.ನ.5:** ಸಾಲಬಾಧೆ ತಾಳಲಾರದೆ ರೈತನೊಬ್ಬ ಆತ್ಮಹತ್ಯೆ ಮಾಡಿಕೊಂಡ ಘಟನೆ ಮಂಗಳವಾರ ದಾವಣಗೆರೆ ತಾಲೂಕಿನ ಹೆಬ್ಬಾಳ ಬಡಾವಣೆ ಗ್ರಾಮದಲ್ಲಿ ನಡೆದಿದೆ.

ಶಿವರಾಜ ಜೆ. ಆತ್ಮಹತ್ಯೆ ಮಾಡಿಕೊಂಡ ರೈತ. ನಾಲ್ಕೈದು ವರ್ಷದಿಂದ ತಮ್ಮ ಜಮೀನಿನಲ್ಲಿ ಬೆಳೆದ ಬೆಳೆ ಸರಿಯಾಗಿ ಇಳುವರಿ ಬಂದಿರಲಿಲ್ಲ. ಇಳುವರಿ ಬಂದರೂ ಸರಿಯಾದ ಬೆಲೆ ಸಿಗದೆ ಶಿವರಾಜ ನಷ್ಟ ಅನುಭವಿಸಿದ್ದರು ಎನ್ನಲಾಗಿದೆ. ಸುಮಾರು 12 ರಿಂದ 15 ಲಕ್ಷ ರೂಪಾಯಿ ಸಾಲ ಮಾಡಿಕೊಂಡಿದ್ದ ಶಿವರಾಜ ಸಾಲಗಾರರಿಗೆ ಹೆದರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎನ್ನಲಾಗಿದೆ. ಈ ಬಗ್ಗೆ ದಾವಣಗೆರೆ ಗ್ರಾಮಾಂತರ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಮಾಲಿನ್ಯ ನಿಯಂತ್ರಣ ಮಂಡಳಿ ಸುವರ್ಣ ಮಹೋತ್ಸವ

## ದಾವಣಗೆರೆ ಜಿಲ್ಲೆಯ ಪ್ಲಾಸ್ಟಿಕ್ ಮುಕ್ತ ಅಭಿಯಾನಕ್ಕೆ ಜಿಲ್ಲಾಡಳಿತದ ಕ್ರಮಕ್ಕೆ ಅಗತ್ಯ ನೆರವು : ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್

**ದಾವಣಗೆರೆ:** ದೇಶದ ಮೊದಲ ಮಹಿಳಾ ಪ್ರಧಾನ ಮಂತ್ರಿ ಇಂದಿರಾಗಾಂಧಿ ಅವರು ಅಧಿಕಾರವಧಿಯಲ್ಲಿದ್ದಾಗ, ಪರಿಸರ, ಅರಣ್ಯ ಹಾಗೂ ವನ್ಯಜೀವಿ ಸಂರಕ್ಷಣೆಗಾಗಿ ಹಲವು ಕಾಯ್ದೆ ರೂಪಿಸಿದರು. ಅದರ ಭಾಗವಾಗಿ ಇಂದು ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಸುವರ್ಣ ಮಹೋತ್ಸವ ಆಚರಿಸಿಕೊಳ್ಳುತ್ತಿದ್ದು, ದಾವಣಗೆರೆ ಜಿಲ್ಲೆಯನ್ನು ಪ್ಲಾಸ್ಟಿಕ್ ಮುಕ್ತ ಜಿಲ್ಲೆಯಾಗಿಸಲು ಜಿಲ್ಲಾಡಳಿತ ಕೈಗೊಂಡಿರುವ ಅಭಿಯಾನಕ್ಕೆ ಅಗತ್ಯ ನೆರವು ನೀಡಲಾಗುವುದು ಎಂದು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.

ದಾವಣಗೆರೆ ಮತ್ತು ಹಾವೇರಿ ಜಿಲ್ಲಾಡಳಿತ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸಹಯೋಗದಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸ್ಥಾಪನೆಗೊಂಡು 50 ವರ್ಷಗಳನ್ನು ಪೂರೈಸಿರುವ ಕಾರಣ ಬುಧವಾರ ಹೈಸ್ಕೂಲ್ ಮೈದಾನದಲ್ಲಿ ಏರ್ಪಡಿಸಲಾದ ಸುವರ್ಣ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿರಾ ಗಾಂಧಿ ಅವರು 1972 ರಲ್ಲಿ ಸ್ಟಾಕ್ ಹೋಮ್'ನ ಸಮ್ಮೇಳನದಲ್ಲಿ ಭಾಗವಹಿಸಿ ಪರಿಸರ ಸಂರಕ್ಷಣೆಯ ಬಗ್ಗೆ ಭಾಷಣ ಮಾಡಿದ್ದರು. ನಂತರ ದೇಶದಲ್ಲಿ ಇದನ್ನು ಜಾರಿಗೆ ತರುವ ನಿಟ್ಟಿನಲ್ಲಿ ಪರಿಸರ ಸಂರಕ್ಷಣೆ, ಅರಣ್ಯ, ವನ್ಯಜೀವಿ ಸಂರಕ್ಷಣಾ ಕಾಯಿದೆಗಳನ್ನು ಜಾರಿಗೆ ತಂದರು. ಅಂದಿನ ದೂರದೃಷ್ಟಿ ಇಂದು ನಿಜವಾಗಿದ್ದು ಎಲ್ಲಾ ಕಡೆ ಪರಿಸರ ಮಾಲಿನ್ಯ ಹೆಚ್ಚುತ್ತಿದೆ. ಅದರಲ್ಲೂ ಪ್ಲಾಸ್ಟಿಕ್ ಬಳಕೆಯಂತೂ ಗಣನೀಯವಾಗಿ ಹೆಚ್ಚಾಗುತ್ತಲೇ ಇದೆ. ಪರಿಸರ ಮಾಲಿನ್ಯ ತಡೆಗೆ ಪ್ಲಾಸ್ಟಿಕ್ ಬಳಕೆ ನಿಷೇಧ ಮಾಡಲು ಜಿಲ್ಲಾಡಳಿತ ಶಾಲಾ ಮಕ್ಕಳೊಂದಿಗೆ ಸಾಗರ ಮಿತ್ರ ಎಂಬ ವಿಶೇಷ ಅಭಿಯಾನ ಆರಂಭಿಸಿದೆ. ಈ ಅಭಿಯಾನದಡಿ ವಿದ್ಯಾರ್ಥಿಗಳಿಗೆ ಪ್ಲಾಸ್ಟಿಕ್ ನಿಷೇಧ ಕುರಿತು ಜಾಗೃತಿ ಮೂಡಿಸಲಾಗುತ್ತಿರುವುದು ಅಭಿನಂದನೀಯ ಕಾರ್ಯ ಎಂದು ಶ್ಲಾಘಿಸಿದರು. ಇದುವರೆಗೂ ಜಿಲ್ಲೆಯ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನ ರಹಿತ 512 ಶಾಲೆಗಳಲ್ಲಿ ಅಭಿಯಾನವನ್ನು ಆರಂಭಿಸಲಾಗಿದ್ದು, 75 ಸಾವಿರ ಮಕ್ಕಳು ಅಭಿಯಾನದ ಭಾಗವಾಗಿದ್ದಾರೆ. ಅಭಿಯಾನದ ಮುಖೇನ ಶಾಲಾ ಮಕ್ಕಳಿಂದ ವಿವಿಧ ರೀತಿಯ ಪ್ಲಾಸ್ಟಿಕ್ ಸೇರಿ 3 ಟನ್‌ಗೂ ಅಧಿಕ ಪ್ಲಾಸ್ಟಿಕ್ ಸಂಗ್ರಹಿಸಲಾಗಿದೆ. ಸಂಗ್ರಹಿಸಿದ ಪ್ಲಾಸ್ಟಿಕ್‌ನ್ನು ಸ್ಥಳೀಯ ಸಂಸ್ಥೆಗಳ ಮೂಲಕ ವೈಜ್ಞಾನಿಕವಾಗಿ ವಿಲೇವಾರಿ ಮಾಡಲಾಗುವುದು.

ಸ್ಥಳೀಯ ಸಂಸ್ಥೆಗಳ ಮೂಲಕ ಹಸಿ ಕಸ, ಒಣಕಸ ಪ್ರತ್ಯೇಕಿಸಿ ಸಂಗ್ರಹಿಸಲಾಗುತ್ತಿದೆ. ಪಾಲಿಕೆ ವತಿಯಿಂದ ಸಂಗ್ರಹಿಸಿದ 200 ಟನ್ ಕಸವನ್ನು ಆವರಗೊಳ್ಳ ಬಳಿ ಇರುವ ಘನತ್ಯಾಜ್ಯ ಘಟಕದಲ್ಲಿ ಸಂಸ್ಕರಣೆ ಮಾಡಲಾಗುತ್ತಿದೆ. ಅದಷ್ಟೇ ಅಲ್ಲದೇ ರೈಲ್ವೇ ನಿಲ್ದಾಣ, ಮಾರುಕಟ್ಟೆ ಹಾಗೂ ಬಸ್ ನಿಲ್ದಾಣಗಳಲ್ಲಿಯೂ ಸಹ ಪ್ಲಾಸ್ಟಿಕ್ ಮುಕ್ತಗೊಳಿಸಲು ಕ್ರಮವಹಿಸಲಾಗುವುದು ಎಂದ ಅವರು, ಪ್ರಸ್ತುತ ಸ್ವಚ್ಛ ಸರ್ವೇಕ್ಷಣಾ ಸಮೀಕ್ಷೆಯಲ್ಲಿ ಜಿಲ್ಲೆಯು ರಾಜ್ಯದಲ್ಲಿ 3ನೇ ಸ್ಥಾನ, ದೇಶದಲ್ಲಿ 32 ನೇ ಸ್ಥಾನದಲ್ಲಿದೆ. ಮುಂದಿನ ಭಾರಿ ಹತ್ತರಲ್ಲಿ ಸ್ಥಾನ ಇರುವಂತೆ ನೋಡಿಕೊಳ್ಳಲು ಎಲ್ಲರೂ ಸಹಕರಿಸ ಬೇಕೆಂದರು.




**ಪರಿಸರ ಸಂರಕ್ಷಣೆಗೆ 5 ಲಕ್ಷ ಸಸಿ :** ಭವಿಷ್ಯದ ಪೀಳಿಗೆಗೆ ಉತ್ತಮ ಪರಿಸರ, ನೀರು, ಗಾಳಿ ಉಳಿಯಬೇಕಾದರೆ ಸಮತೋಲಿತ ಪರಿಸರ ಅವಶ್ಯಕ. ಆದ್ದರಿಂದ ನಗರದಾದ್ಯಂತ 25 ಸಾವಿರ ಹಾಗೂ ಜಿಲ್ಲೆಯಾದ್ಯಂತ 5 ಲಕ್ಷ ಸಸಿಗಳನ್ನು ನೆಡಲಾಗಿದೆ ಎಂದರು.

ಜಿಲ್ಲೆಯಲ್ಲಿ ಸ್ವಚ್ಛ ಮತ್ತು ಹಸಿರು ನಗರ ನಿರ್ಮಾಣಕ್ಕಾಗಿ ಸಹಕರಿಸಬೇಕು ಎಂದರು.

ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷರಾದ ಪಿ.ಎಂ.ನರೇಂದ್ರಸ್ವಾಮಿ ಪ್ರಾಸ್ತಾವಿಕವಾಗಿ ಮಾತನಾಡಿ ಭವಿಷ್ಯಕ್ಕೋಸ್ಕರ ಶಿಕ್ಷಣ ಪಡೆಯುವುದು ಎಷ್ಟು ಮುಖ್ಯವೋ, ಭವಿಷ್ಯಕ್ಕಾಗಿ ಪರಿಸರ ಉಳಿಸುವುದು ಅಷ್ಟೇ ಮುಖ್ಯ. ಇದಕ್ಕೆ ಸಾರ್ವಜನಿಕರ ಮತ್ತು ಸ್ಥಳೀಯ ಆಡಳಿತದ ಸಹಕಾರ ಅತ್ಯಗತ್ಯ. ದಾವಣಗೆರೆ ಜಿಲ್ಲೆಯಲ್ಲಿ ಒಟ್ಟು 69 ರೈಸ್ ಮಿಲ್ ಗಳಿದ್ದು, ಆ ಪೈಕಿ ದಾವಣಗೆರೆ ನಗರವೊಂದರಲ್ಲೇ 43 ರೈಸ್ ಮಿಲ್‌ಗಳಿವೆ. ಇದಲ್ಲದೆ ಸುಮಾರು ಒಂದು ಸಾವಿರ ಮಂಡಕ್ಕಿ ತಯಾರಿಕಾ ಕೇಂದ್ರಗಳಿವೆ. ಇವುಗಳಿಂದ ವಾಯು ಮಾಲಿನ್ಯ ಜಾಸ್ತಿಯಾಗಿದೆ. ಮಂಡಕ್ಕಿ ತಯಾರಿಕಾ ಕೇಂದ್ರಗಳನ್ನು ಸ್ಥಳಾಂತರಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸಬೇಕಾಗಿದೆ ಎಂದು ಹೇಳಿದರು.

ಸುವರ್ಣ ಮಹೋತ್ಸವದ ಅಂಗವಾಗಿ ಚಿತ್ರಕಲೆ, ಪ್ರಬಂಧ ಮತ್ತು ಚರ್ಚಾ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ಚಿತ್ರಕಲೆ ಸ್ಪರ್ಧೆಯಲ್ಲಿ ಭಾಗವಹಿಸಿದ ಜಿಲ್ಲೆಯ ಉತ್ತರ ವಲಯ ಹಾಗೂ ದಕ್ಷಿಣ ವಲಯದ ವಿವಿಧ ಶಾಲೆಗಳ ಪ್ರಾಥಮಿಕ ಮತ್ತು ಪ್ರೌಢ ಶಾಲಾ ವಿಭಾಗದ ವಿದ್ಯಾರ್ಥಿಗಳಿಗೆ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನಗಳನ್ನು ನೀಡಲಾಯಿತು.

## 'ಕರ್ನಾಟಕದ ಗ್ಯಾರಂಟಿ ಮಾದರಿ' ಗುರುತಿಸಿ, ಹೆಚ್ಚಿನ ಆರ್ಥಿಕ ಬೆಂಬಲ ನೀಡಿ: ಕೇಂದ್ರಕ್ಕೆ ಸಿದ್ದರಾಮಯ್ಯ ಆಗ್ರಹ

**ಬೆಂಗಳೂರು:** ಕೇಂದ್ರ ಸರ್ಕಾರವು "ಕರ್ನಾಟಕದ ಗ್ಯಾರಂಟಿ ಮಾದರಿ"ಯನ್ನು ಗುರುತಿಸಿ, ರಾಜ್ಯದ ಸಬಲೀಕರಣಕ್ಕೆ ಹೆಚ್ಚಿನ ಹಣಕಾಸಿನ ಬೆಂಬಲ ಮತ್ತು ಆದಾಯದ ಸರಿಯಾದ ಪಾಲನ್ನು ಒದಗಿಸಬೇಕೆಂದು ಬುಧವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಒತ್ತಾಯಿಸಿದ್ದಾರೆ.

ಹಣಕಾಸು ನೀತಿ ಸಂಸ್ಥೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಸಿಎಂ, "ಕರ್ನಾಟಕದ ಗ್ಯಾರಂಟಿ ಮಾದರಿಯು ಸಮಗ್ರ ಅಭಿವೃದ್ಧಿಗಾಗಿ ರಾಷ್ಟ್ರೀಯ ಮಾದರಿಯಾಗುವುದನ್ನು ಖಚಿತಪಡಿಸಿ ಕೊಳ್ಳುವುದು ನಮ್ಮ ಗುರಿಯಾಗಿದೆ ಎಂದರು.

ಗ್ಯಾರಂಟಿ ಯೋಜನೆಗಳು ಪ್ರಾದೇಶಿಕ ಮತ್ತು ಸಾಮಾಜಿಕ ಅಸಮಾನತೆಗಳನ್ನು ಕಡಿಮೆ ಮಾಡುತ್ತವೆ ಮತ್ತು ಸಹಕಾರಿ ಒಕ್ಕೂಟದ ಮನೋಭಾವವನ್ನು ಬಲಪಡಿಸುತ್ತವೆ" ಎಂದು ಅವರು ಹೇಳಿದರು.



ಗೃಹ ಜ್ಯೋತಿ, ಗೃಹ ಲಕ್ಷ್ಮಿ, ಅನ್ನ ಭಾಗ್ಯ, ಯುವ ನಿಧಿ ಮತ್ತು ಸಾರ್ವಜನಿಕ ಸಾರಿಗೆ ಬಸ್‌ಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣ(ಶಕ್ತಿ ಯೋಜನೆ) ಕಾಂಗ್ರೆಸ್ ಸರ್ಕಾರದ ಐದು ಗ್ಯಾರಂಟಿಗಳಾಗಿವೆ.

"ಈ ಗ್ಯಾರಂಟಿ ಯೋಜನೆಗಳು ಜನಪ್ರಿಯ ಕೊಡುಗೆಗಳಲ್ಲ, ಬದಲಾಗಿ ನೀತಿ ತಿದ್ದುಪಡಿಗಳು ಮತ್ತು ಪುನರ್ವಿತರಣಾ ನ್ಯಾಯ ಮತ್ತು ಸಮಗ್ರ ಬೆಳವಣಿಗೆಯ ಸಾಧನಗಳಾಗಿವೆ" ಎಂದು ಅವರು ಹೇಳಿದರು.

ಈ ಯೋಜನೆಗಳ ಅನುಷ್ಠಾನಕ್ಕಾಗಿ 96,000 ಕೋಟಿ ರೂ.ಗಳಿಗೂ ಹೆಚ್ಚು ಹಣವನ್ನು ಹಂಚಿಕೆ ಮಾಡಲಾಗಿದೆ ಮತ್ತು 2025-26 ರ ರಾಜ್ಯ ಬಜೆಟ್‌ನಲ್ಲಿ, ಅವುಗಳಿಗಾಗಿ 51,034 ಕೋಟಿ ರೂ.ಗಳನ್ನು ಹಂಚಿಕೆ ಮಾಡಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

"ಇದರಲ್ಲಿ ಶೇ. 56.06 ಗೃಹ ಲಕ್ಷ್ಮಿಗೆ, ಶೇ. 19.79 ಗೃಹ ಜ್ಯೋತಿಗೆ, ಶೇ. 12.59 ಅನ್ನ ಭಾಗ್ಯಕ್ಕೆ, ಶೇ. 10.39 ಶಕ್ತಿ ಯೋಜನೆಗೆ ಮತ್ತು ಶೇ. 1.18 ಯುವ ನಿಧಿಗೆ" ನೀಡಲಾಗಿದೆ ಎಂದು ಸಿಎಂ ವಿವರಿಸಿದರು.

1.24 ಕೋಟಿಗೂ ಹೆಚ್ಚು ಮಹಿಳೆಯರು ಗೃಹ ಲಕ್ಷ್ಮಿ ಮೂಲಕ ಪ್ರತಿ ತಿಂಗಳು 2 ಸಾವಿರ ರೂ. ಪಡೆಯುತ್ತಾರೆ, 1.63 ಕೋಟಿ ಕುಟುಂಬಗಳು ಗೃಹ ಜ್ಯೋತಿಯಿಂದ ಪ್ರಯೋಜನ ಪಡೆಯುತ್ತಾರೆ, 4.08 ಕೋಟಿ ಜನರು ಅನ್ನ ಭಾಗ್ಯದಿಂದ ಪ್ರಯೋಜನ ಪಡೆಯುತ್ತಾರೆ ಮತ್ತು 2.84 ಲಕ್ಷ ಯುವಕರು ಯುವ ನಿಧಿ ಪಡೆಯುತ್ತಿದ್ದಾರೆ ಎಂದರು.

ಕರ್ನಾಟಕವು ಈಗ ತಲಾ ಆದಾಯದಲ್ಲಿ ದೇಶದಲ್ಲಿ ಮೊದಲ ಸ್ಥಾನದಲ್ಲಿದೆ, ಕಳೆದ ದಶಕದಲ್ಲಿ 2013-14ರಲ್ಲಿ 1,01,858 ರೂ.ಗಳಿಂದ 2024-25ರಲ್ಲಿ 2,04,605 ರೂ.ಗಳಿಗೆ ಅಂದರೆ ಶೇ. 101 ರಷ್ಟು ಬೆಳವಣಿಗೆಯನ್ನು ಸಾಧಿಸಿದೆ. ಇದು ರಾಜ್ಯದ ನಿರಂತರ ಆರ್ಥಿಕ ವೇಗ ಮತ್ತು ಗ್ಯಾರಂಟಿ ಯೋಜನೆಗಳಿಂದ ನಡೆಸಲ್ಪಡುವ ಸಮಗ್ರ ಬೆಳವಣಿಗೆಯನ್ನು ಪ್ರತಿಬಿಂಬಿಸುತ್ತದೆ ಎಂದರು.

ಕರ್ನಾಟಕದ ಗ್ಯಾರಂಟಿ ಯೋಜನೆಗಳನ್ನು ಸಮಗ್ರ ಆಡಳಿತಕ್ಕೆ ಮಾದರಿ ಎಂದು ಇಡೀ ಜಗತ್ತು "ಶ್ಲಾಘಿಸಿದರೆ", ವಿರೋಧ ಪಕ್ಷಗಳು ತಪ್ಪು ಮಾಹಿತಿ ಮತ್ತು ನಕಾರಾತ್ಮಕತೆಯನ್ನು ಹರಡುವಲ್ಲಿ ನಿರತವಾಗಿವೆ ಎಂದು ವಾಗ್ದಾಳಿ ನಡೆಸಿದರು.

## ಅಕ್ರಮ ಮನೆ ತೆರವು ನಿವಾಸಿಗಳಿಗೆ ನಿವೇಶನ ಹಂಚಿಕೆ ಆದೇಶಕ್ಕೆ ಅಸಮಾಧಾನ

**ದಾವಣಗೆರೆ:** ನಗರದ ಎಸ್‌ಓಜಿ ಕಾಲೋನಿಯಲ್ಲಿ ಅನಧಿಕೃತವಾಗಿ ಕಟ್ಟಿಕೊಂಡಿದ್ದ ಸುಮಾರು 30 ಮನೆಗಳನ್ನು ತೆರವುಗೊಳಿದ್ದ ಅದೇ ಜಾಗದಲ್ಲಿ ಪರ್ಯಾಯ ನಿವೇಶನ ನೀಡಲು ಸಚಿವ ಎಸ್ ಎಸ್ ಮಲ್ಲಿಕಾರ್ಜುನ್ ಅವರು ಜಿಲ್ಲಾಧಿಕಾರಿಗಳಿಗೆ ಆದೇಶ ನೀಡಿರುವುದು ಅಕ್ರಮ ಮನೆಗಳನ್ನು ಕಟ್ಟಿಕೊಳ್ಳುವವರಿಗೆ ಪ್ರೋತ್ಸಾಹಿಸಿದಂತಾಗುತ್ತದೆ ಎಂದು ಎಸ್.ಕೆ. ರವೀಂದ್ರನಾಥ ನಗರದ ನಿವಾಸಿಗಳು ಅಭಿಪ್ರಾಯಸಿದ್ದಾರೆ.

ಎಸ್‌ಎ ರವೀಂದ್ರನಾಥ ನಗರದ ಲೋಕಿಕೆರೆ ರಸ್ತೆಯಲ್ಲಿರುವ 41ನೇ ವಾರ್ಡಿನಲ್ಲಿ ತೆರವು ಕಾರ್ಯಾಚರಣೆ ನಡೆದಿರುವುದು ನಿಜವಾಗಿದ್ದು, ಅಲ್ಲಿ ಕೆಲವರು ಅಕ್ರಮವಾಗಿ ಮನೆಗಳನ್ನು ನಿರ್ಮಿಸಿಕೊಂಡಿದ್ದರು. ಆದರೆ, ಈಗ ಅದೇ ಕಾಲೋನಿಯಲ್ಲಿ ನಿವೇಶನಗಳನ್ನು ನೀಡುವಂತೆ ಸಚಿವರು ಆದೇಶ ನೀಡಿರುವುದು ಆಶ್ಚರ್ಯ ಉಂಟು ಮಾಡಿದೆ. ಒಂದು ಬಡಾವಣೆ ಮಾಡುವಾಗ ಅಲ್ಲಿಯ ನಿವಾಸಿಗಳ ಅನುಕೂಲಕ್ಕಾಗಿ ನಿವೇಶನಗಳನ್ನು ಕಾಯ್ದಿರಿಸಬೇಕೇ ಹೊರತು ಅನಧಿಕೃತ ಮನೆಗಳನ್ನು ಕಟ್ಟಿಕೊಳ್ಳುವುದಕ್ಕಲ್ಲ. ಈ ಆದೇಶದಿಂದ ಸಾರ್ವಜನಿಕರಿಗೆ ತಪ್ಪು ಸಂದೇಶ ರವಾನಿಸಿದಂತಾಗುತ್ತದೆ ಎಂದು ಎಸ್.ಎ ರವೀಂದ್ರನಾಥ ನಗರದ ನಿವಾಸಿಗಳಾದ ಎನ್ ಸಿದ್ದರಾಮಪ್ಪ, ಎಸ್.ಆರ್. ಸೋಮಶೇಖರಪ್ಪ, ಹನುಮಂತಪ್ಪ, ರುದ್ರಮ್ಮ, ಸಹನ, ಕೆ.ಬಿ ನಿರ್ಮಲ, ಜಗದೀಶ ಸೇರಿದಂತೆ ಸಾಕಷ್ಟು ನಿವಾಸಿಗಳು ಪತ್ರಿಕಾ ಹೇಳಿಕೆಯಲ್ಲಿ ಅಸಮಾಧಾನ ಹೊರಹಾಕಿದ್ದಾರೆ.

## ಚಿತ್ರದುರ್ಗದ ಪಿಐ ಜಯಪ್ಪನಾಯ್ಕ್ ಅಮಾನತ್ತಿಗೆ ಡಿಎಸ್ಎಸ್ ಆಗ್ರಹ

**ದಾವಣಗೆರೆ:** ದಲಿತ ಮಹಿಳೆ ಮೇಲೆ ಹಲ್ಲೆ ನಡೆದಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ದೂರು ದಾಖಲಿಸಲು ನಿರಾಕರಿಸಿರುವ ಚಿತ್ರದುರ್ಗ ಎಸ್ ಸಿ, ಎಸ್ಟಿ ವಿಭಾಗದ ಪೊಲೀಸ್ ನಿರೀಕ್ಷಕ ಪಿಎಸ್ಐ ಜಯನಾಯ್ಕ್ ಅವರನ್ನು ಕೂಡಲೇ ಅಮಾನತ್ತುಗೊಳಿಸಬೇಕು ಎಂದು ದಲಿತ ಸಂರಕ್ಷಣಾ ಸಮಿತಿ ಜಿಲ್ಲಾಧ್ಯಕ್ಷ ಎನ್.ಡಿ. ಮೈಲಾರಪ್ಪ ಆಗ್ರಹಿಸಿದ್ದಾರೆ.

ದಲಿತ ದೌರ್ಜನ್ಯ ಕಾಯ್ದೆಯಡಿ ಪ್ರಕರಣ ದಾಖಲಿಸಲು ಹಿಂದೇಟು ಹಾಕಿರುವುದಷ್ಟೇ ಅಲ್ಲದೇ, ದೂರು ನೀಡಲು ಬಂದ ಮಹಿಳೆಯ ಮೇಲೆ ಹಲ್ಲೆ ಮಾಡಿರುವುದನ್ನು ಪರಿಶೀಲಿಸುವುದಾಗಿ ಹೇಳಿ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ. ಬೆಳಿಗ್ಗೆಯಿಂದ ರಾತ್ರಿಯವರೆಗೆ ಕಾದರೂ ದೂರು ದಾಖಲಿಸದೇ, ದಲಿತ ಸಮಾಜಕ್ಕೆ ನೋವುಂಟು ಮಾಡಿದ್ದಾರೆ. ಈಗಾಗಲೇ ಅಲ್ಲಿನ ಪೊಲೀಸ್ ವರಿಷ್ಠಾಧಿಕಾರಿಗೂ ಮನವಿ ಸಲ್ಲಿಸಲಾಗಿದ್ದು, ಕೂಡಲೇ ಜಯಪ್ಪನಾಯ್ಕ್ ವಿರುದ್ಧ ಕ್ರಮಕೈಗೊಳ್ಳಬೇಕು ಎಂದು ಪತ್ರಿಕಾ ಹೇಳಿಕೆಯಲ್ಲಿ ಒತ್ತಾಯಿಸಿದ್ದಾರೆ.

ಎಸ್ಪಿ ಅವರಿಗೆ ದೂರು ಕೊಟ್ಟಿದ್ದರಿಂದ ನಮ್ಮ ಸಮಿತಿಯ ನನ್ನನ್ನು ಸೇರಿದಂತೆ ಮಹಿಳಾ ಅಧ್ಯಕ್ಷರಾದ ಚನ್ನಮ್ಮ, ಹೆಚ್. ವೆಂಕಟೇಶ್, ಜಿ.ಎನ್. ಮಂಜುನಾಥ್, ಮಧು, ಅಂಜಿನಪ್ಪ, ನಾಗರತ್ನಮ್ಮ, ಉಮೇಶ್, ರಘು, ಹೆಚ್. ವಸಂತ್ ಇವರುಗಳ ಮೇಲೆ ಕರ್ತವ್ಯಕ್ಕೆ ಅಡ್ಡಿಪಡಿಸಿದ್ದಾರೆಂದು ಸುಳ್ಳು ಕೇಸುಗಳನ್ನು ದಾಖಲಿಸಿದ್ದು, ನಮ್ಮ ವಿರುದ್ಧದ ಪ್ರಕರಣಗಳನ್ನು ಹಿಂಪಡೆಯದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ಮಾಡುತ್ತೇವೆ ಎಂದು ಎಚ್ಚರಿಸಿದ್ದಾರೆ.

## ಶ್ರಮಿಕ ಕಟ್ಟಡ ಕಾರ್ಮಿಕರು ನೊಂದಾಯಿಸಿಕೊಂಡು ಸರ್ಕಾರದ ಸೌಲಭ್ಯ ಪಡೆಯಿರಿ: ಶಾಸಕ ತಮ್ಮಯ್ಯ

**ಚಿಕ್ಕಮಗಳೂರು:** ಕಾಯಕ ಜೀವಿಗಳಾದ ಶ್ರಮಿಕ ಕಟ್ಟಡ ಕಾರ್ಮಿಕರು ಕಾರ್ಮಿಕ ಇಲಾಖೆಯಲ್ಲಿ ನೊಂದಾಯಿಸಿಕೊಂಡು ಸದಸ್ಯತ್ವ ಪಡೆದು ಸುರಕ್ಷಿತ ಕಿಟ್ ಸೇರಿದಂತೆ ಹಲವು ಸರ್ಕಾರಿ ಸೌಲಭ್ಯಗಳನ್ನು ಪಡೆಯಿರಿ ಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಕರೆನೀಡಿದರು.

ಅವರು ಇಂದು ಕೆಎಂ ರಸ್ತೆಯ ಕಾರ್ಮಿಕ ಭವನದಲ್ಲಿ ಕಾರ್ಮಿಕ ಇಲಾಖೆ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಚಿಕ್ಕಮಗಳೂರು ತಾಲ್ಲೂಕಿನ ನೊಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಏರ್ಪಡಿಸಲಾಗಿದ್ದ 2024-25ನೇ ಸಾಲಿನ ಶ್ರಮ ಸಾಮರ್ಥ್ಯ ಯೋಜನೆಯಡಿ ವಿವಿಧ ವೃತ್ತಿಗಳ (ಟ್ರೈನಿಂಗ್ ಕಂ ಟೂಲ್‌ಕಿಟ್) ಸುರಕ್ಷತಾ ಕಿಟ್ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕಟ್ಟಡ ಕಾರ್ಮಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೆ ತಂದು ಕಾರ್ಮಿಕ ಇಲಾಖೆ ಮೂಲಕ ತರಬೇತಿ ನೀಡಲು ಮುಂದಾಗಿದ್ದು, ಸುಮಾರು 10 ಲಕ್ಷಕ್ಕಿಂತ ಮೇಲ್ಪಟ್ಟ ಕಟ್ಟಡ ನಿರ್ಮಿಸುವ ಮಾಲಿಕರಿಂದ ಶೆ.1 ರಷ್ಟು ಸೆಸ್‌ನ್ನು ಸರ್ಕಾರ ಪಡೆದುಕೊಂಡು ಅದನ್ನು ನೇರವಾಗಿ ಕಾರ್ಮಿಕರಿಗೆ ಸಹಾಯ ಮಾಡಲು ಉದ್ದೇಶ ಹೊಂದಲಾಗಿದೆ ಎಂದರು.



ಸಂವಿಧಾನದ ಆಶಯದಂತೆ ಸಮಾಜದ ಕಟ್ಟಕಡೆಯ ವ್ಯಕ್ತಿಗಳಿಗೆ ಸರ್ಕಾರದ ಯೋಜನೆಗಳು ತಲುಪಿ, ಸಮ ಸಮಾಜ ನಿರ್ಮಾಣವಾಗಬೇಕು ಎಂಬ ಡಾ. ಬಿ.ಆರ್ ಅಂಬೇಡ್ಕರ್‌ರವರ ಕನಸು ನನಸು ಮಾಡಲು ಕೇಂದ್ರ ಮತ್ತು ರಾಜ್ಯಸರ್ಕಾರಗಳು ಶ್ರಮಿಸುತ್ತಿವೆ ಎಂದು ಹೇಳಿದರು.

ಒಟ್ಟು 468 ಫಲಾನುಭವಿಗಳಿಗೆ ಎರಡು ವರ್ಷದ ಅವಧಿಯಲ್ಲಿ 3,58,81,243 ರೂಗಳನ್ನು ಡಿಬಿಟಿ ಮೂಲಕ ಕಾರ್ಮಿಕರ ಖಾತೆಗೆ ಜಮೆ ಮಾಡಲಾಗಿದೆ. ಜಿಲ್ಲೆಯಲ್ಲಿ 2500 ಜನರಿಗೆ ತಲಾ 2,500 ರೂ ಬೆಲೆಯ ಕಿಟ್ ವಿತರಣೆ ಮಾಡಲಾಗುತ್ತಿದೆ. ಒಟ್ಟು 62.50 ಲಕ್ಷ ರೂ ಬೆಲೆಬಾಳುವ ಟೂಲ್‌ಕಿಟ್‌ನ್ನು ವಿತರಣೆ ಮಾಡುತ್ತಿದ್ದೇವೆ ಎಂದರು. ಜಿಲ್ಲೆಯ ಚಿಕ್ಕಮಗಳೂರು ತಾಲ್ಲೂಕಿನಲ್ಲಿ ಕಳೆದ ಎರಡು ವರ್ಷದಲ್ಲಿ 1148 ಕಟ್ಟಡ ಕಾರ್ಮಿಕರು ನೊಂದಾಯಿಸಿಕೊಂಡಿದ್ದು, ಒಟ್ಟು ಈ ತಾಲ್ಲೂಕಿನಲ್ಲಿ 45 ಸಾವಿರ ಕಾರ್ಮಿಕರು ನೊಂದಾಯಿಸಿಕೊಂಡಿದ್ದಾರೆ. ಈ ನಿಟ್ಟಿನಲ್ಲಿ ಅರ್ಹ ಕಟ್ಟಡ ಕಾರ್ಮಿಕರನ್ನು ಗುರ್ತಿಸಿ ಸದಸ್ಯತ್ವ ನೀಡಿ ಕಟ್ಟಡ ಕಾರ್ಮಿಕರಲ್ಲದವರು ಸದಸ್ಯರಾಗಿ ಸರ್ಕಾರದ ಇಲಾಖೆಯಿಂದ ದೊರೆಯುವ ಸೌಲಭ್ಯವನ್ನು ಪಡೆಯುತ್ತಿದ್ದಾರೆ. ಇದನ್ನು ತಡೆಯಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಕಳೆದ ಎರಡು ವರ್ಷದಲ್ಲಿ 211 ಫಲಾನುಭವಿಗಳಿಗೆ 2,25,60,000 ರೂಗಳನ್ನು ಮದುವೆ ಸಹಾಯಕ್ಕೆ ವಿತರಿಸಲಾಗಿದೆ. ಪ್ರತಿ ಕುಟುಂಬಕ್ಕೆ ವೈದ್ಯಕೀಯ ಸಹಾಯಧನ 54100 ರೂಗಳನ್ನು ನೀಡಲಾಗಿದೆ. ದೊಡ್ಡ ಆರೋಗ್ಯ ಸಮಸ್ಯೆಗಳಿಗೆ 48 ಫಲಾನುಭವಿಗಳಿಗೆ 24,47,143 ರೂಗಳನ್ನು ವೈದ್ಯಕೀಯ ಸಹಾಯ ಹಸ್ತ ನೀಡಲಾಗಿದೆ ಎಂದು ವಿವರಿಸಿದರು.

ಕಟ್ಟಡ ಕಾರ್ಮಿಕರು ಆಕಸ್ಮಿಕ ಮರಣ ಹೊಂದಿದ ಸಂದರ್ಭದಲ್ಲಿ ಇಲಾಖೆಯಿಂದ 90 ಮೃತ ಕುಟುಂಬಗಳಿಗೆ 67.50 ಲಕ್ಷ ರೂ ಅಂತ್ಯಕ್ರಿಯೆಗೆ ಧನಸಹಾಯ ನೀಡಲಾಗಿದೆ. ಅಪಘಾತದಲ್ಲಿ ಆಕಸ್ಮಿಕ ಮರಣ ಹೊಂದಿದ ಪ್ರತಿ ಕುಟುಂಬಕ್ಕೆ 5 ಲಕ್ಷ ರೂಗಳಂತೆ 4 ಫಲಾನುಭವಿಗಳಿಗೆ 20 ಲಕ್ಷ ರೂಗಳನ್ನು ನೀಡಲಾಗಿದೆ ಎಂದರು.

60 ವರ್ಷ ಪೂರೈಸಿದ ಕಾರ್ಮಿಕರಿಗೆ 3 ಸಾವಿರ ರೂ ಮಾಸಿಕ ಪಿಂಚಣಿ ಜಾರಿಮಾಡಲಾಗಿದೆ. ಈ ಸೌಲಭ್ಯ ಆರ್ಥಿಕವಾಗಿ ದುರ್ಬಲವಾಗಿರುವ ದೈಹಿಕ ಸಾಮರ್ಥ್ಯ ಇಲ್ಲದವರಿಗೆ ನೇರವಾಗಿ ಸಂದಾಯ ಮಾಡಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

## ರಾಶಿ ಭವಿಷ್ಯ

### ಮೇಷ ರಾಶಿ

ನೀವು ಆರೋಗ್ಯ ಸಮಸ್ಯೆಯಿಂದಾಗಿ ಒಂದು ಪ್ರಮುಖ ಕೆಲಸಕ್ಕೆ ಹೋಗಲು ಸಾಧ್ಯವಾಗದಿರುವುದರಿಂದ ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಆದರೆ ನಿಮ್ಮನ್ನು ಮೇಲೆತ್ತಲು ನಿಮ್ಮ ತಾರ್ಕಿಕತೆಯನ್ನು ಬಳಸಿ. ಇಂದು ಸಾಲಗಾರನು ನಿಮ್ಮ ಮನೆ ಬಾಗಿಲಿಗೆ ಬರಬಹುದು ಮತ್ತು ನಿಮ್ಮ ಹತ್ತಿರ ಸಾಲ ಕೇಳಬಹುದು. ಅವರಿಗೆ ಹಣವನ್ನು ಹಿಂದಿರುಗಿಸಿ ನೀವು ಆರ್ಥಿಕ ಬಿಕ್ಕಟ್ಟಿಗೆ ಸಿಲುಕಬಹುದು.

### ವೃಷಭ ರಾಶಿ

ನಿಮ್ಮ ಒತ್ತಡ ನಿವಾರಿಸಲು ಕುಟುಂಬದ ಸದಸ್ಯರ ಬೆಂಬಲ ಪಡೆಯಿರಿ. ಅವರ ಸಹಾಯವನ್ನು ಗೌರವದಿಂದ ಸ್ವೀಕರಿಸಿ. ನೀವು ಭಾವನೆಗಳು ಮತ್ತು ಒತ್ತಡಗಳನ್ನು ಒಳಗೆ ಅದುಮಿಡಬಾರದು. ಆಗಾಗ ನಿಮ್ಮ ಸಮಸ್ಯೆಗಳನ್ನು ಹಂಚಿಕೊಳ್ಳುವುದು ಸಹಾಯ ಮಾಡುತ್ತದೆ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ.

### ಮಿಥುನ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ದುರ್ಬಲ ಆರ್ಥಿಕ ಸ್ಥಿತಿಯಿಂದ ಕೆಲವು ಪ್ರಮುಖ ಕೆಲಸಗಳು ಸ್ಥಗಿತಗೊಳ್ಳುತ್ತವೆ. ಹೊಸ ವಿಷಯಗಳ ಬಗ್ಗೆ ಗಮನ ಹರಿಸಿ ಮತ್ತು ನಿಮ್ಮ ಅತ್ಯುತ್ತಮ ಸ್ನೇಹಿತರ ಬಳಿ ಸಹಾಯ ಕೇಳಿ. ನಿಮ್ಮ ಸಂಪೂರ್ಣ ಹಾಗೂ ಪ್ರಶ್ನಾತೀತ ಪ್ರೀತಿ ಒಂದು ಜಾದುವಿನಂಥ ಸೃಜನಶೀಲ ಶಕ್ತಿಯನ್ನು ಹೊಂದಿದೆ.

### ಕರ್ಕ ರಾಶಿ

ಮನರಂಜನೆ ಮತ್ತು ಮೋಜಿನ ಒಂದು ದಿನ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ. ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ. ಪ್ರೀತಿಯಲ್ಲಿ ನಿರಾಶೆಯಾಗಬಹುದಾದರೂ ಪ್ರೇಮಿಗಳು ಯಾವತ್ತೂ ಮುಖಸ್ತುತಿ ಮಾಡುವವರಾದ್ದರಿಂದ ನೀವು ಧೃತಿಗೆಡಬೇಡಿ. ನೀವು ನಿಮ್ಮ ಕೌಶಲ್ಯ ಮತ್ತು ಪ್ರತಿಭೆಗಳನ್ನು ಸರಿಯಾದ ಜನರಿಗೆ ತೋರಿಸಿದಲ್ಲಿ ನೀವು ಶೀಘ್ರದಲ್ಲೆ ಹೊಸ ಮತ್ತು ಒಳ್ಳೆಯ ಸಾರ್ವಜನಿಕ ವ್ಯಕ್ತಿತ್ವವನ್ನು ಹೊಂದಲು ಸಾಧ್ಯವಿದೆ.

### ಸಿಂಹ ರಾಶಿ

ಇಂದು, ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ನೀವು ಇತರರ ಮೇಲೆ ಹೆಚ್ಚು ಖರ್ಚು ಮಾಡಬಯಸುತ್ತೀರಿ. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ಪ್ರತಿಯೊಂದು ವಿಷಯದಲ್ಲಿ ಪ್ರೀತಿಯನ್ನು ತೋರಿಸುವುದು ಸರಿಯಿಲ್ಲ. ಇದು ನಿಮ್ಮ ಸಂಬಂಧವನ್ನು ಸುಧಾರಿಸುವ ಬದಲು ಹಾಳುಮಾಡುತ್ತದೆ.

### ಕನ್ಯಾ ರಾಶಿ

ಕಳೆದ ಉದ್ಯಮಗಳ ಯಶಸ್ಸು ನಿಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ತಮ್ಮ ಹಣವನ್ನು ಬೆಟ್ಟಿಂಗ್‌ನಲ್ಲಿ ಖರ್ಚು ಮಾಡಿದವರು ಇಂದು ನಷ್ಟ ಅನುಭವಿಸುವ ಸಾಧ್ಯತೆಯಿದೆ. ಬೆಟ್ಟಿಂಗ್‌ನಿಂದ ದೂರವಿರಲು ನಿಮಗೆ ಸೂಚಿಸಲಾಗಿದೆ. ಸಂಬಂಧಿಕರ ಜೊತೆ ಕಳೆದ ಸಮಯ ನಿಮಗೆ ಅನುಕೂಲಕರವಾಗಿರುತ್ತದೆ. ಪ್ರೀತಿಗಾಗಿ ವಿಶೇಷ ದಿನ-ರಾತ್ರಿಗಾಗಿ ಯಾವುದಾದರೂ ಯೋಜನೆ ಹಾಕಿ ಮತ್ತು ಇದನ್ನು ಸಾಧ್ಯವಾದಷ್ಟು ಪ್ರಣಯಮಯವಾಗಿಸಲು ಪ್ರಯತ್ನಿಸಿ. ಕೆಲಸದಲ್ಲಿ ಎಲ್ಲವೂ ನಿಮ್ಮ ಪರವಾಗಿ ಇದ್ದಂತೆ ತೋರುತ್ತದೆ.

### ತುಲಾ ರಾಶಿ

ಆರೋಗ್ಯಕ್ಕೆ ಸಂಬಂಧಿಸಿದಂತೆ ಈ ಅವಧಿ ಮಂದವಾಗಿರುವುದರಿಂದ ನೀವು ತಿನ್ನುವುದರ ಬಗೆಗೆ ಜಾಗರೂಕರಾಗಿರಿ. ಇಂದು ನಿಮ್ಮ ಸಹೋದರ ಸಹೋದರಿಯರು ನಿಮ್ಮಿಂದ ಆರ್ಥಿಕ ಬೆಂಬಲವನ್ನು ಕೇಳಬಹುದು ಮತ್ತು ಅವರಿಗೆ ಸಹಾಯ ಮಾಡಿ ನೀವು ಸ್ವತಃ ಆರ್ಥಿಕ ಒತ್ತಡಕ್ಕೆ ಬರಬಹುದು. ಆದಾಗ್ಯೂ ಪರಿಸ್ಥಿತಿ ಬೇಗ ಸುಧಾರಿಸುತ್ತದೆ. ನಿಮ್ಮ ಹೆತ್ತವರ ಆರೋಗ್ಯದ ಬಗೆಗೆ ಹೆಚ್ಚುವರಿ ಗಮನ ಮತ್ತು ಎಚ್ಚರಿಕೆ ಅಗತ್ಯವಿದೆ.

### ವೃಶ್ಚಿಕ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ಹಣಕಾಸು ಲಾಭಗಳು ವಿವಿಧ ಮೂಲಗಳಿಂದ ಬರುತ್ತದೆ. ಸಾಮಾಜಿಕ ಸಮಾರಂಭಗಳು ಪ್ರಭಾವಿ ಮತ್ತು ಪ್ರಮುಖ ಜನರೊಡನೆ ನಿಮ್ಮ ಬಾಂಧವ್ಯವನ್ನು ಸುಧಾರಿಸಲು ಒಂದು ಪರಿಪೂರ್ಣ ಅವಕಾಶವಾಗಿರುತ್ತದೆ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ. ನೀವು ಶ್ರಮ ಮತ್ತು ತಾಳ್ಮೆಯ ಮೂಲಕ ನಿಮ್ಮ ಗುರಿಗಳನ್ನು ತಲುಪುತ್ತೀರಿ.

### ಧನು ರಾಶಿ

ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ಇಂದು ನೀವು ಹಚ್ಚು ಪ್ರಯತ್ನ ಮಾಡಬೇಕಾಗಿ ಬಂದರೂ ಕೂಡ ಮಕ್ಕಳ ಸಂಗದಲ್ಲಿ ನಿಮ್ಮ ಬಿಡುವಿನ ಸಮಯ ಕಳೆಯಲು ಪ್ರಯತ್ನಿಸಬೇಕು.

### ಮಕರ ರಾಶಿ

ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು ಆದರೆ ಅದು ನಿಜವಲ್ಲ – ನಿಮ್ಮ ಪ್ರಖರ ಮತ್ತು ಸಕ್ರಿಯ ಮನಸ್ಸಿನಿಂದ ನೀವು ಹೊಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ. ನಿಮ್ಮ ಹಣವನ್ನು ಉಳಿಸಲು ನೀವು ಇಂದು ನಿಮ್ಮ ಮನೆಯ ಜನರೊಂದಿಗೆ ಮಾತನಾಡಬೇಕು. ಅವರ ಸಲಹೆ ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಸಹಾಯಕವಾಗುತ್ತದೆ.

### ಕುಂಭ ರಾಶಿ

ಇಂದು ನೀವು ಹಲವಾರು ಒತ್ತಡಗಳು ಮತ್ತು ಭಿನ್ನಾಭಿಪ್ರಾಯಗಳನ್ನು ಎದುರಿಸ ಬೇಕಾಗಬಹುದು ಹಾಗೂ ಇದು ನಿಮಗೆ ಕಿರಿಕಿರಿ ಹಾಗೂ ಆತಂಕದ ಭಾವನೆಗಳನ್ನು ಉಂಟುಮಾಡಬಹುದು. ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಮತ್ತು ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ಇಂದು ನೀವು ಸಾಲ ಪಡೆಯಬಹುದು. ಕಲ್ಪನೆಗಳ ಹಿಂದೆ ಓಡಬೇಡಿ ಹಾಗೂ ಸಾಧ್ಯವಾದಷ್ಟೂ ವಾಸ್ತವವಾದಿಗಳಾಗಿರಿ.

### ಮೀನ ರಾಶಿ

ಸ್ನೇಹಿತನ ಜೊತೆಗಿನ ನಿಮ್ಮ ಅಪಾರ್ಥ ಕೆಲವು ಅಹಿತಕರ ಪ್ರತಿಕ್ರಿಯೆಗಳನ್ನು ಉಂಟುಮಾಡಬಹುದು – ಯಾವುದೇನಿರ್ಧಾರ ಕೈಗೊಳ್ಳುವ ಮೊದಲು ಸಮತೋಲಿತ ನೋಟ ಹೊಂದಿ. ಪ್ರಮುಖ ಜನರು ವಿಶೇಷ ವರ್ಗ ಹೊಂದಿರುವ ಯಾವುದಕ್ಕಾದರೂ ಹಣಕಾಸು ನೀಡಲು ಸಿದ್ಧವಾಗಿರುತ್ತಾರೆ. ಮನರಂಜನೆ ಇಡೀ ಕುಟುಂಬವನ್ನು ಒಳಗೊಂಡಿದ್ದಲ್ಲಿ ಅದು ಮೋಜಿನ ವಿಷಯವಾಗಿರುತ್ತದೆ. ಇಂದಿನ ದಿನ ಪ್ರೀತಿಯ ಬಣ್ಣಗಳಲ್ಲಿ ಮುಳುಗಿರುತ್ತದೆ ಆದರೆ ರಾತ್ರಿಯ ಸಮಯದಲ್ಲಿ ಯಾವುದೊ ಹಳೆಯ ವಿಷ್ಯದ ಬಗ್ಗೆ ನೀವು ಜಗಳವಾಡಬಹುದು.

# ಹೆಣ್ಣು ಮಕ್ಕಳು ಜಾಗೃತಿ, ಅರಿವು ಹೊಂದಬೇಕು



**ಹಾಸನ** : ಅರಿವು ಜ್ಞಾನದ ಸಂಕೇತವಾಗಿದೆ. ಪ್ರತಿಯೊಂದು ಹೆಣ್ಣು ಮಕ್ಕಳು ಜಾಗೃತಿ, ಅರಿವು ಹೊಂದಬೇಕು ಎಂದರಲ್ಲದೆ, ಎಲ್ಲರಿಗೂಅರಿವು, ಜಾಗೃತಿಯನ್ನು ಮೂಡಿಸಬೇಕು. ಆಗ ಶೇ.70 ರಷ್ಟು ಕ್ರೈಂಗಳು ಕಡಿಮೆಯಾಗುತ್ತವೆ ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ॥ನಾಗಲಕ್ಷ್ಮಿ ಚೌದರಿ ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಪೊಲೀಸ್ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಂಯುಕ್ತಾಶ್ರಯದಲ್ಲಿಂದುಹಾಸನಾಂಬ ಕಲಾಕ್ಷೇತ್ರದಲ್ಲಿಏರ್ಪಡಿಸಿದ್ದ ಸ್ಥಳೀಯ ಮತ್ತು ಆತಂರಿಕಾ ದೂರು ನಿವಾರಣಾ ಸಮಿತಿ ಸದಸ್ಯರಿಗೆ ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ತಡೆ ಕಾಯ್ದೆಯ ಕುರಿತ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಲೈಂಗಿಕ ದೌರ್ಜನ್ಯ ತಡೆ ಕಾಯ್ದೆಯ ಎಂದರೆ ಹೆಣ್ಣು ಮಕ್ಕಳು ಕೆಲಸ ಮಾಡುವ ಸ್ಥಳಗಳಲ್ಲಿ ಲೈಂಗಿಕ ದೌರ್ಜನ್ಯ ತಡೆಗಟ್ಟುವುದಾಗಿದೆ ಹೆಣ್ಣು ಮಕ್ಕಳು ತಮಗೆ ಇರುವಂತಹ ಹಕ್ಕುಗಳ ಬಗೆಗೆ ತಿಳಿದುಕೊಳ್ಳುವುದಕ್ಕಾಗಿಯೇ ಈ ಕಾರ್ಯಗಾರವನ್ನು ಆಯೋಜಿಸಲಾಗಿದೆ.

ಎಲ್ಲರೂ ಇದರ ಸದುಪಯೋಗ ಪಡೆದುಕೊಳ್ಳಿ ಎಂದು ತಿಳಿಸಿದರು.

ಲೈಂಗಿಕ ದೌರ್ಜನ್ಯ ತಡೆ ಕಾಯ್ದೆಯ ಕುರಿತು2013ರಲ್ಲಿಯೇ ಸುಪ್ರೀಂ ಕೋರ್ಟ್ ಗೆಜೆಟೆಡ್ ನೋಟಿಫಿಕೇಶನ್ ಮಾಡಿದೆ. ಹೆಣ್ಣು ಮಕ್ಕಳ ಸುರಕ್ಷತೆಯ ದೃಷ್ಟಿಯಿಂದಲೇ ಬಹಳಷ್ಟು ಕಾನೂನುಗಳು ಇವೆ ಅವುಗಳ ಕುರಿತು ತಿಳಿದುಕೊಂಡ ಹೆಣ್ಣು ಹೆಚ್ಚು ಶಕ್ತಿಯುತವಾಗಿ ಸಮಾಜದಲ್ಲಿ ಹೋರಾಟ ಮಾಡುತ್ತಾಳೆ ಆದ್ದರಿಂದ ಪ್ರತಿಯೊಂದು ಹೆಣ್ಣು ಮಕ್ಕಳು ಕಾನೂನಿನ ಕುರಿತು ತಿಳಿದುಕೊಳ್ಳಬೇಕು ಎಂದರು.

ಸರ್ಕಾರ ಪ್ರತಿ ಇಲಾಖೆಗಳಿಗೆ ಜಾಗೃತಿಯನ್ನು ಮೂಡಿಸುವುದಕ್ಕಾಗಿಂ ಮೀಕೋಟ್ಯಾಂತರ ರೂಪಾಯಿಗಳನ್ನು ಕೊಡುತ್ತದೆ. ಇವುಗಳ ಬಗೆಗೆ ಪ್ರತಿಯೊಂದು ಜಿಲ್ಲೆಯಲ್ಲೂ ಪ್ರತಿಯೊಂದು ತಾಲೂಕಿನಲ್ಲೂ ಹಳ್ಳಿಯಲ್ಲೂ ಪ್ರತಿಯೊಬ್ಬರು ತಿಳಿದುಕೊಂಡರೆ ಪ್ರತಿಯೊಬ್ಬರು ಜಾಗೃತರಾಗುತ್ತಾರೆ ಪ್ರಶ್ನಿಸುವುದನ್ನುಕಲಿತುಕೊಳ್ಳಬೇಕು ಎಂದರು.

ಕೇವಲಪುಸ್ತಕಕ್ಕೆಮಾತ್ರಸೀಮಿತವಾಗದೆ ವಾಸ್ತವವನ್ನು ತಿಳಿದುಕೊಳ್ಳುವಂತಹ ಜ್ಞಾನವಂತರಾಗಬೇಕು. ಪೋಲಿಸ್ ಇಲಾಖೆಯಲ್ಲಿ ನಿಮಗೆ ಸರಿಯಾಗಿ ಸ್ಪಂದಿಸದೆ ಇದ್ದಾಗ ಅಲ್ಲಿ ಒಂದು ಕ್ಯೂಆರ್ ಕೋಡ್ ಅನ್ನು ಇಟ್ಟಿರುತ್ತಾರೆ ಅದನ್ನು ಸ್ಕ್ಯಾನ್ ಮಾಡಿದಾಗ ನಿಮಗೆ ಕೆಲವೊಂದು ಪ್ರಶ್ನೆಗಳನ್ನು ಕೇಳಲಾಗುತ್ತದೆ. ನೀವು ನಿಮ್ಮ ಸಮಸ್ಯೆಗಳನ್ನ ವಿವರಿಸಬಹುದು ಇದರ ಕುರಿತು ಅರಿವಿದ್ದಾಗ ಮಾತ್ರ ಈ ರೀತಿಯಾಗಿ ಸಮಸ್ಯೆಗಳನ್ನ ಬಗೆಹರಿಸಿಕೊಳ್ಳಬಹುದು ಎಂಬುದು ತಿಳಿಯುತ್ತದೆ ಹಾಗಾಗಿ ಎಲ್ಲರೂ ಅರಿವು ಮತ್ತು ಜಾಗೃತಿಯನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು.

ಹಿರಿಯ ಸಾಹಿತಿಗಳಾದ ರೂಪ ಹಾಸನ್ ಅವರು ಮಾತನಾಡಿ ನಮ್ಮ ಜಿಲ್ಲೆಯ ಜಿಲ್ಲಾಧಿಕಾರಿ ಕಚೇರಿಯಲ್ಲಿ ಈ ಹಿಂದೆ ಇದ್ದ ಜಿಲ್ಲಾಧಿಕಾರಿ ಸತ್ಯಭಾಮ ಅವರ ಅಧ್ಯಕ್ಷತೆಯಲ್ಲಿ ಕಾರ್ಯಗಾರವನ್ನು ಮಾಡಲಾಗಿತ್ತು. ಸರ್ಕಾರಿ ಅಧಿಕಾರಿಗಳಿಗೆ ಸರ್ಕಾರಿ ನೌಕರರಿಗೆ ಈ ಕಾಯ್ದೆಯ ಕುರಿತಾಗಿ ಮಾಹಿತಿ ಗೊತ್ತಿಲ್ಲದೆ ಇರುವ ಸ್ಥಿತಿ ನಿರ್ಮಾಣವಾಗಿದೆ. ಖಾಸಗಿ ಸಂಸ್ಥೆಗಳಲ್ಲಿ ಇಂದಿಗೂ ಕೂಡ ಆ ಕಾರ್ಯಗಾರಗಳನ್ನು ಮಾಡುತ್ತಿದ್ದಾರೆ.ಎಲ್ಲರೂ ಈ ಕಾಯ್ದೆಯ ಕುರಿತು ತಿಳಿದುಕೊಳ್ಳುವುದರ ಮೂಲಕ ದಿಟ್ಟತನದಿಂದ ದೌರ್ಜನಗಳನ್ನು ಎದುರಿಸುವಂತಹ ಸಾಧ್ಯತೆಗಳಾಗಲಿ ಎಂದು ತಿಳಿಸಿದರು.ದೌರ್ಜನ್ಯವಾದಾಗ ಅವರ ಬೆಂಬಲವಾಗಿ ನಿಲ್ಲುವಂತಹದು ಒಂದು ಭಾಗವಾದರೆ ದೌರ್ಜನ್ಯ ಆಗದಂತೆ ತಡೆಗಟ್ಟುವುದು ಹೇಗೆ ಎಂಬುದರ ಕುರಿತಾಗಿ ಈ ಕಾರ್ಯಗಾರಗಳು ಹೆಣ್ಣು ಮಕ್ಕಳನ್ನು ಸಶಕ್ತರನ್ನಾಗಿ ಮಾಡುತ್ತಿವೆ ಎಂದರು.ಈ ವೇಳೆಯಲ್ಲಿ ಅಪರ ಜಿಲ್ಲಾಧಿಕಾರಿ ಮಂಜುನಾಥ ಉಪಸ್ಥಿತರಿದ್ದರು.ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಧರಣಿ ಕುಮಾರ್ ಮತ್ತಿತರ ಅಧಿಕಾರಿಗಳು ಹಾಜರಿದ್ದರು.

## ಹೊಳೆಹೊನ್ನೂರಿನಲ್ಲಿ ಭಾರತೀಯ ಸ್ಟೇಟ್ ಬ್ಯಾಂಕ್‌ನ ನೂತನ ಶಾಖೆ ಉದ್ಘಾಟನೆ



**ಶಿವಮೊಗ್ಗ:** ರಾಷ್ಟ್ರದ ಪ್ರತಿ ಮೂಲೆಗೂ ಬ್ಯಾಂಕಿಂಗ್ ಸೇವೆ ಒದಗಿಸುವ ನಿಟ್ಟಿನಲ್ಲಿ ಭಾರತೀಯ ಸ್ಟೇಟ್ ಬ್ಯಾಂಕ್ ಎಲ್ಲೆಡೆ ಶಾಖೆ ತೆರೆದು ಜನರ ಆರ್ಥಿಕ ಪ್ರಗತಿಗೆ ಶ್ರಮಿಸುತ್ತಿದೆ ಎಂದು ಭಾರತೀಯ ಸ್ಟೇಟ್ ಬ್ಯಾಂಕ್‌ನ ಬೆಂಗಳೂರು ವಲಯ ಮುಖ್ಯ ಪ್ರಧಾನ ವ್ಯವಸ್ಥಾಪಕರಾದ ಜೂಹಿ ಸ್ಮಿತಾ ಸಿನ್ಹ ಹೇಳಿದರು.

ಭದ್ರಾವತಿ ತಾಲೂಕಿನ ಹೊಳೆಹೊನ್ನೂರು ಪಟ್ಟಣದಲ್ಲಿ ಭಾರತೀಯ ಸ್ಟೇಟ್ ಬ್ಯಾಂಕ್‌ನ ನೂತನ ಶಾಖೆಯನ್ನು ಸೋಮವಾರ ಸಂಜೆ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಭಾರತವು ಆರ್ಥಿಕವಾಗಿ ಪ್ರಗತಿ ಹೊಂದುತ್ತಿರುವ ದೇಶವಾಗಿದೆ. ಆದರೆ ಗ್ರಾಮೀಣ ಜನರ ಜೀವನ ಸ್ಥಿತಿ ಇನ್ನಷ್ಟು ಉತ್ತಮ ಆಗಬೇಕಿದೆ. ಅದಕ್ಕಾಗಿ ಎಲ್ಲಾ ವರ್ಗದ ಜನರಿಗೆ ಬ್ಯಾಂಕಿನ ಮೂಲಕ ಅಗತ್ಯವಾದ ಅನೇಕ ರೀತಿ ಸಾಲ ಸೌಲಭ್ಯ, ಉಳಿತಾಯ, ಠೇವಣಿ ಬಗ್ಗೆ ಜಾಗೃತಿ ಮೂಡಿಸಿ ಪ್ರಗತಿಗೆ ಸಹಕರಿಸಲಾಗುತ್ತಿದೆ. ಸಾರ್ವಜನಿಕರು ಅದನ್ನು ಸದುಪಯೋಗ ಮಾಡಿಕೊಳ್ಳಬೇಕು ಎಂದರು.

ಶಿವಮೊಗ್ಗ ಪ್ರಾದೇಶಿಕ ವ್ಯಸ್ಥಾಪಕ ಮಧುಗುಲ ವಿಜಯ ಸಾಯಿ ಮಾತನಾಡಿ, ಬ್ಯಾಂಕಿನಲ್ಲಿ ದೊರೆಯುವ ಅನೇಕ ರೀತಿಯ ಸೌಲಭ್ಯಗಳನ್ನು ಜನರು ಬಳಸಿಕೊಂಡು ಪ್ರಗತಿ ಹೊಂದಬೇಕು ಎಂದರು.

ಮಂಗಳೂರಿನ ಉಪ ಪ್ರಧಾನ ವ್ಯವಸ್ಥಾಪಕ ಕೃಷ್ಣ ಮೋಹನ ಮುಚರ್ಲ, ಶಾಖಾ ವ್ಯವಸ್ಥಾಪಕ ಸುರೇಶ್ ನಾಯ್ಕ್, ಸಿಬ್ಬಂದಿ ಎಂ.ಎನ್.ಗುರುರಾಜ್, ರವಿಕಿರಣ, ಬೈಟೆ, ಶ್ರೀನಾಥ್ ರೆಡ್ಡಿ, ಪುಷ್ಪಲತಾ, ಸ್ಥಳೀಯರಾದ ನವೀನ್, ರಾಜಪ್ಪ, ಉಮೇಶ್, ಗಣೇಶ್, ಡಾ.ಸಂಗೀತ ಬಗಲಿ ಹಾಜರಿದ್ದರು.

## ಸುವರ್ಣ ಮಹೋತ್ಸವದಲ್ಲಿ ಗದಗ ಜಿಲ್ಲೆಗೆ ಇಂದಿರಾ ಪ್ರಿಯದರ್ಶಿನಿ ಪರಿಸರ ಪ್ರಶಸ್ತಿ



**ಗದಗ :-** ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ 50 ವರ್ಷಗಳ ಸುವರ್ಣ ಮಹೋತ್ಸವದ ಸಂದರ್ಭದಲ್ಲಿ ಇಂದಿರಾ ಪ್ರಿಯದರ್ಶಿನಿ ಪರಿಸರ ಪ್ರಶಸ್ತಿಯನ್ನು ಪಡೆದುಕೊಂಡಿದೆ..

ಹುಬ್ಬಳ್ಳಿಯ ನೆಹರು ಮೈದಾನದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ ಸಹಾಯಕ ಕಾರ್ಯದರ್ಶಿ ಎಸ್ ಎಸ್ ಕಲ್ಮನಿ ಹಾಗೂ ನರೇಗಾ ಯೋಜನೆಯ ಸಹಾಯಕ ಜಿಲ್ಲಾ ಕಾರ್ಯಕ್ರಮ ಸಮನ್ವಯ ಅಧಿಕಾರಿ ಎಸ್.ಎಚ್. ಕಿರಣ್‌ಕುಮಾರ್ ಅವರು ಪ್ರಶಸ್ತಿಯನ್ನು ಸ್ವೀಕರಿಸಿದ್ದಾರೆ.

ಕೆಎಸ್‌ಪಿಸಿಬಿಯ ಸುವರ್ಣ ಮಹೋತ್ಸವ ರಾಜ್ಯಾದ್ಯಂತ ಅಕ್ಟೋಬರ್ 10 ರಿಂದ ನವೆಂಬರ್ 19ರವರೆಗೆ ಆಚರಣೆಯಲ್ಲಿದ್ದು,

ಪರಿಸರ ಜಾಗೃತಿ ಮತ್ತು ಮಾಲಿನ್ಯ ನಿಯಂತ್ರಣಕ್ಕೆ ಸಂಬಂಧಿಸಿದ ವಿವಿಧ ಕಾರ್ಯಕ್ರಮಗಳು ನಡೆಯುತ್ತಿವೆ. ಗದಗ ಜಿಲ್ಲೆಗೆ ರಾಷ್ಟ್ರ ಮಟ್ಟದಲ್ಲಿ ಜಲಸಂಚಯ, ಜಲಭಾಗಿದಾರಿ ಪ್ರಶಸ್ತಿ ಪಡೆದುಕೊಂಡ ಹಿನ್ನೆಲೆ ಈ ಪ್ರಶಸ್ತಿ ಲಭಿಸಿದೆ..

ಪ್ರಶಸ್ತಿ ಪತ್ರಿಕೆಯ ಅಭಿನಂದನಾ ಪತ್ರದಲ್ಲಿ


ಹೇಳಿದಂತೆ, "ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ 50 ವರ್ಷಗಳ ಸುವರ್ಣ ಮಹೋತ್ಸವದ ನಿಮಿತ್ತ ನೀಡಲಾಗುತ್ತಿರುವ ಇಂದಿರಾ ಪ್ರಿಯದರ್ಶಿನಿ ಪರಿಸರ ಪ್ರಶಸ್ತಿಗೆ ಆಯ್ಕೆ ಮಾಡಿ ಈ ಪ್ರಶಂಸನಾ ಪತ್ರ ಪ್ರಧಾನಿಸಲಾಗಿದೆ.

ಪರಿಸರ ಜಾಗೃತಿಯನ್ನು ಉತ್ತೇಜಿಸುವ ಮತ್ತು ಮಾಲಿನ್ಯ ಮುಕ್ತ ಕರ್ನಾಟಕದ ನಿರ್ಮಾಣದ ಗುರಿಯ ಸಂದೇಶ ಸಾರುವಲ್ಲಿ ತಮ್ಮ ಸಕ್ರಿಯ ಕಾರ್ಯವೈಖರಿಯನ್ನು ಈ ಮೂಲಕ ಶ್ಲಾಘಿಸುತ್ತೇವೆ ಎಂದು ತಿಳಿಸಲಾಗಿದೆ..

ಈ ಕಾರ್ಯಕ್ರಮದಲ್ಲಿ ಪರಿಸರ ಮಾಲಿನ್ಯದ ಮಂಡಳಿಯ ಅಧ್ಯಕ್ಷರು, ಸ್ಥಳೀಯ ಶಾಸಕರು, ಧಾರವಾಡ ಮಟ್ಟದ ಅಧಿಕಾರಿಗಳು, ಕೆಎಸ್‌ಪಿಸಿಬಿ ಅಧಿಕಾರಿಗಳು ಮತ್ತು ಸ್ಥಳೀಯ ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

## ರಾಜ್ಯ ಮಟ್ಟದ ಅಬಾಕಸ್ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳು

**ಚಿಕ್ಕಮಗಳೂರು:** ಐಡಿಯಲ್ ಪ್ಲೇಅಬಾಕಸ್‌ಇಂಡಿಯಾ ಪ್ರೈವೇಟ್ ಲಿಮಿಟೆಡ್ ವತಿಯಿಂದಆಯೋಜಿಸಲಾದ 20ನೇ ರಾಜ್ಯಮಟ್ಟದಅಬಾಕಸ್ ಮತ್ತು ಮೆಂಟಲ್‌ಅರ್ಥಮೆಟಿಕ್ಸ್ 2025ರ ಸ್ಪರ್ಧೆಯಲ್ಲಿ ನಗರದ ಐಪಿಎ ಎಕ್ಸೆಲ್‌ಐಕ್ಯೂಅಬಾಕಸ್ ರಾಮನಹಳ್ಳಿ ಸೆಂಟರ್‌ನ ಮಕ್ಕಳು ಭಾಗವಹಿಸಿ ವಿಜೇತರಾಗಿದ್ದಾರೆಎಂದು ಶಿಕ್ಷಕಿ ಶಿಲ್ಪರಮೇಶ್ ತಿಳಿಸಿದರು.ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಅಭಿನಂದಿಸಿ ಮಾತನಾಡಿದ ಅವರು ದ.ಕ ಜಿಲ್ಲೆ ಮೂಡಬಿದರೆಯ ಆಳ್ವಾಸ್ ಪಿ.ಯುಕಾಲೇಜಿನ ಕೆ. ಅಮರನಾಥ್ ಶೆಟ್ಟಿ ವೇದಿಕೆಯಲ್ಲಿ ನಡೆದ ಈ ಸ್ಪರ್ಧೆಯಲ್ಲಿ ಖುಷಿ.ಕೆ, ಸಂಯೋಗ ಹೆಚ್.ಎಸ್, ಅರ್‌ಮನ್, 3ನೇ ಬಹುಮಾನ, ಸಮನ್ವಿತಾ ವೈ, 4ನೇ ಬಹುಮಾನ, ಆರ್. ಮೋನಿಷಾ 5ನೇ ಬಹುಮಾನ ಹಾಗೂ 2ನೇ ರನ್ನರಫ್ ಸ್ಥಾನವನ್ನು ಶ್ರೇಯಸ್.ಕೆ, ಆಪ್ತಿ ಅವ್ಯಾಕ್ತ, ಹರ್ಷಿಕ ಹೆಚ್.ಸಿ, ಫರ್ಮನ್, ಕೃತಿಕಾ ಸಿ.ಕೆ, ಮನ್ವಿತಾ.ಸಿ.ಕೆ, ಯೋಹನ್.ಡಿ, ಎಲೀಷಾ ಎಲ್, ವೈಭವಿ ಬಹುಮಾನ ಪಡೆದಿರುವುದಾಗಿ ತಿಳಿಸಿದರು.




## ಜೈ ಭುವನೇಶ್ವರಿ ಆಟೋ ನಿಲ್ದಾಣದಲ್ಲಿ ಸಂಭ್ರಮದ ಕನ್ನಡ ರಾಜ್ಯೋತ್ಸವ.



**ಚಿಕ್ಕಮಗಳೂರು:** ತೊಗರಿಹಂಕಲ್ ವೃತ್ತ ಜೈ ಭುವನೇಶ್ವರಿ ಆಟೋ ನಿಲ್ದಾಣದಲ್ಲಿ 70ನೇ ಕನ್ನಡ ರಾಜ್ಯೋತ್ಸವವನ್ನು ಅದ್ದೂರಿಯಾಗಿ ಆಚರಿಸಿದರು, ಶಾಸಕ ಎಚ್ ಡಿತಮ್ಮಯ್ಯ ಅವರು ಧ್ವಜಾರೋಹಣ ನೆರವೇರಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು ಕನ್ನಡ ನಾಡಿನ ನೆಲಜಲದ ರಕ್ಷಣೆ ಮತ್ತು ನಮ್ಮ ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಜವಾಬ್ದಾರಿ ನಮ್ಮೆಲ್ಲರದ್ದು, ವ್ಯವಹಾರಿಕವಾಗಿ ಇತರ ಭಾಷೆಗಳನ್ನು ಬಳಸಿದರು ಕನ್ನಡ ಭಾಷೆಯನ್ನು ನಾವು ಯಾವತ್ತೂ ಮರೆಯಬಾರದು ಎಂದು ಹೇಳಿದರು.

ನಗರಸಭೆ ಸದಸ್ಯರಾದ ರೂಪ ಕುಮಾರ್ ಅವರು ಮಾತನಾಡಿ ಕನ್ನಡ ನಮ್ಮ ಅಸ್ಮಿತೆ, ನಮ್ಮ ಭಾಷೆ ಮೇಲಿನ ಅಭಿಮಾನ ಹೆಚ್ಚಿಸಿಕೊಂಡು ಮನದಲ್ಲಿ ಆರಾಧಿಸಬೇಕು, ಎಲ್ಲಾದರೂ ಇರು ಎಂತಾದರು ಇರು ಎಂದೆಂದಿಗೂ ನೀ ಕನ್ನಡವಾಗಿರು ಎಂಬ ಕವಿವಾಣಿಯಂತೆ ನಾವೆಲ್ಲರೂ ಮಾತೃಭಾಷೆ ಉಳಿಸಿ ಬೆಳೆಸೋಣ ಎಂದರು.

ಆಟೋ ಚಾಲಕರು ಮತ್ತು ಮಾಲೀಕರ ಸಂಘದ ಅಧ್ಯಕ್ಷರಾದ ಎಂ ಟಿ ಜಗದೀಶ್ ಮರೆಬೈಲು ಅವರು ಮಾತನಾಡಿ ಎಲ್ಲರಿಗೂ ಕನ್ನಡ ರಾಜ್ಯೋತ್ಸವ ಶುಭಾಶಯಗಳು ತಿಳಿಸಿ ಮಾತೃಭಾಷೆ ಕನ್ನಡ ಮನೆ ಮನಗಳಲ್ಲಿ ರಾರಾಜಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಂಚಾರಿ ಪೊಲೀಸ್ ಠಾಣಾಧಿಕಾರಿ ಧನಂಜಯ್, ನಗರಸಭೆ ಸದಸ್ಯರಾದ ಪರಮೇಶ್ ರಾಜ್, ದೇವರಾಜ್ ಅರಸು, ಕಲಂದರ್ ಹಾಗೂ ಇನ್ನಿತರ ಪದಾಧಿಕಾರಿಗಳು ಕಾರ್ಯಕರ್ತರು ಉಪಸ್ಥಿತರಿದ್ದರು.

## ಗುತ್ತಿಗೆ ವೈದ್ಯರು, ತಜ್ಞವೈದ್ಯರ ನೇಮಕಾತಿಗಾಗಿ ಅರ್ಜಿ ಆಹ್ವಾನ

**ದಾವಣಗೆರೆ:** ದಾವಣಗೆರೆ ಜಿಲ್ಲೆಯಲ್ಲಿ ಖಾಲಿ ಇರುವ ತುರ್ತು ಚಿಕಿತ್ಸಾ ವೈದ್ಯಾಧಿಕಾರಿಗಳು, ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಮತ್ತು ತಜ್ಞ ವೈದ್ಯಾಧಿಕಾರಿಗಳ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಪ್ರತಿ ಸೋಮವಾರ ನೇರ ಸಂದರ್ಶನದಲ್ಲಿ ರೋಸ್ಟರ್ ಕಂ ಮೆರಿಟ್ ಮೂಲಕ ಅಯ್ಕೆ ಮಾಡಲಾಗುವುದು. ಆಸಕ್ತ ಅಭ್ಯರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಶ್ರೀರಾಮನಗರ ರಸ್ತೆ, ಎಸ್.ಎಸ್ ಹಾಸ್ಪಿಟಲ್ ಹತ್ತಿರ, ಎನ್.ಸಿ.ಸಿ ಕ್ಯಾಂಪ್ ಪಕ್ಕ, ದಾವಣಗೆರೆ-577005 ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಯನ್ನು ಕಚೇರಿಯ ನಾಮಫಲಕದಲ್ಲಿ ಪ್ರಚುರ ಪಡಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕು.ಕಲ್ಯಾಣ ಅಧಿಕಾರಿ ಡಾ.ಷಣ್ಮುಖಪ್ಪ ತಿಳಿಸಿದ್ದಾರೆ.

## ನ.8ರಂದು ಪ್ರತಿಭಾ ಪುರಸ್ಕಾರ ಮತ್ತು ನಿವೃತ್ತ ಉದ್ಯೋಗಿಗಳಿಗೆ ಸನ್ಮಾನ ಸಮಾರಂಭ

**ದಾವಣಗೆರೆ:** ಸವಿತಾ ಕ್ಷೇಮಾಭಿವೃದ್ಧಿ ಸಂಘದಿಂದ ವಿದ್ಯಾರ್ಥಿಗಳಿಗೆ 12ನೇ ವರ್ಷದ ಪ್ರತಿಭಾ ಪುರಸ್ಕಾರ ಮತ್ತು ನಿವೃತ್ತ ಉದ್ಯೋಗಿಗಳಿಗೆ ಸನ್ಮಾನ ಸಮಾರಂಭವನ್ನು ನ.8ರಂದು ಬೆಳಗ್ಗೆ 10 ಗಂಟೆಗೆ ನಗರದ ರೋಟರಿ ಬಾಲಭವನದ ಸಿ.ಕೇಶವಮೂರ್ತಿ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಸುದ್ದಿಗೋಷ್ಠಿಯಲ್ಲಿ ಸಂಘದ ಅಧ್ಯಕ್ಷ ಪಿ.ಬಿ.ವೆಂಕಟಾಚಲಪತಿ ಮಾತನಾಡಿ, ತಮ್ಮ ಅಧ್ಯಕ್ಷತೆಯ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಸವಿತಾ ಸಮಾಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ಎಸ್.ಮುತ್ತುರಾಜ್, ಹೊಸಪೇಟೆ ನಗರಸಭೆ ಅಧ್ಯಕ್ಷ ರೂಪೇಶ್ ಕುಮಾರ್, ಕರ್ನಾಟಕ ನಾಟಕ ಅಕಾಡೆಮಿ ಮಾಜಿ ಅಧ್ಯಕ್ಷ ಭೀಮಸೇನ್, ಹೊಳಲ್ಕೆರೆಯ ಉದ್ಯಮಿ ಆರ್.ರಾಜಪ್ಪ, ಸಂಘದ ಗೌರವಾಧ್ಯಕ್ಷ ಪಿ.ಜಿ.ನಾಗರಾಜ್, ಸವಿತಾ ಸಮಾಜ ಸಂಘದ ಜಿಲ್ಲಾಧ್ಯಕ್ಷ ಬಾಲರಾಜ್ ಉಪ್ಪಲ ಪಾಲ್ಗೊಳ್ಳುವರು. ಸವಿತಾ ಭಜಂತ್ರಿ ನಾದಬ್ರಹ್ಮ ಕಲಾಸಂಘದ ಅಧ್ಯಕ್ಷ ಎನ್.ಮಂಜುನಾಥ ಸಂಗೀತ ಕಛೇರಿ ನಡೆಸಿಕೊಡಲಿದ್ದಾರೆ ಎಂದರು.

ಸವಿತಾ ಸಮಾಜವು ಇಂದಿಗೂ ಅಸ್ಪೃಶ್ಯತೆ ಮತ್ತು ಸಾಮಾಜಿಕ ಅನ್ಯಾಯವನ್ನು ಎದುರಿಸುತ್ತಿರುವುದರಿಂದ ಸರ್ಕಾರ ನಮ್ಮ ಸಮಾಜಕ್ಕೆ ಪರಿಶಿಷ್ಟ ಜಾತಿಯ ಸ್ಥಾನಮಾನ ನೀಡಬೇಕು. ನಮ್ಮ ಸಮಾಜದ ವಿರುದ್ಧ ನಿಷೇಧಿತ ಪದಗಳನ್ನು ಬಳಸುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಸ್ಥಳೀಯ ಸಾಂಪ್ರದಾಯಿಕ ಕ್ಷೌರಿಕರ ಜೀವನೋಪಾಯಕ್ಕೆ ಧಕ್ಕೆ ತರುತ್ತಿರುವ ಇತರೆ ರಾಜ್ಯ, ದೇಶಗಳ ಕ್ಷೌರಿಕರು ಹಾಗೂ ಬಹುರಾಷ್ಟ್ರೀಯ ಕಂಪನಿಗಳನ್ನು ಸೂಕ್ತ ಕಾನೂನಿನಡಿ ನಿಯಂತ್ರಿಸಬೇಕು. ಸವಿತಾ ಸಮಾಜ ಅಭಿವೃದ್ಧಿ ನಿಗಮಕ್ಕೆ ಹೆಚ್ಚು ಅನುದಾನ ಬಿಡುಗಡೆ ಮಾಡಬೇಕು. ಸವಿತಾ ಸಮಾಜದ ವ್ಯಕ್ತಿಗಳಿಗೆ ರಾಜಕೀಯ ಹುದ್ದೆಗಳಲ್ಲಿ ಪ್ರಾತಿನಿಧ್ಯ ನೀಡಬೇಕು ಎಂದು ಅವರು ಇದೇ ವೇಳೆ ಸರ್ಕಾರಕ್ಕೆ ಒತ್ತಾಯಿಸಿದರು.

ಸಂಘದ ಪದಾಧಿಕಾರಿಗಳಾದ ನಾರಾಯಣ ರಾಂಪುರ, ರಾಜು ಬಸ್ತಿಪಾಡು, ಯರ್ರಿಸ್ವಾಮಿ, ಮಂಜುನಾಥ ಪೋಲ್ಕಲ್ಲು, ರಾಮಣ್ಣ ಅರಕೆರೆ, ಶ್ರೀನಿವಾಸ ಸುದ್ದಿಗೋಷ್ಠಿಯಲ್ಲಿದ್ದರು.

## ವಿಕಲಚೇತನರ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುವ ಶಿಕ್ಷಕರಿಗೆ ರಾಜ್ಯ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನ

**ದಾವಣಗೆರೆ:** ಪ್ರಸಕ್ತ ಸಾಲಿನಲ್ಲಿ ವಿಕಲಚೇತನರ ಕ್ಷೇತ್ರದಲ್ಲಿ ಸಾಧನೆಗೈದ ವ್ಯಕ್ತಿ, ಸಂಸ್ಥೆ ಮತ್ತು ವಿಶೇಷ ಶಾಲೆಗಳಲ್ಲಿ 15 ವರ್ಷಗಳಿಗೂ ಮೇಲ್ಪಟ್ಟು ಸೇವೆ ಸಲ್ಲಿಸುತ್ತಿರುವ, ಸಲ್ಲಿಸಿರುವ ಶಿಕ್ಷಕರಿಗೆ ರಾಜ್ಯ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯ ನಿಗಧಿತ ನಮೂನೆಗಳನ್ನು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿಗಳ ಕಚೇರಿ, ಎಂ.ಸಿ.ಸಿ. ಬಿ ಬ್ಲಾಕ್, ಶಂಕರ್ ಲೀಲಾ ಗ್ಯಾಸ್ ಏಜೆನ್ಸಿ ಹತ್ತಿರ, ದಾವಣಗೆರೆ ಇಲ್ಲಿ ಪಡೆದು ಭರ್ತಿ ಮಾಡಿದ ಅರ್ಜಿಯನ್ನು ನವಂಬರ್ 10 ರೊಳಗಾಗಿ ಕಚೇರಿಗೆ ತಲುಪಿಸಬೇಕು. ಎಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ॥ ಕೆ.ಕೆ. ಪ್ರಕಾಶ್ ತಿಳಿಸಿದ್ದಾರೆ.

## ರಸ್ತೆ ಬದಿ ಹಾಗೂ ಖಾಲಿ ನಿವೇಶನಗಳಲ್ಲಿ ಕಸ ಹಾಕುವವರಿಗೆ ಎಚ್ಚರಿಕೆ

**ದಾವಣಗೆರೆ:** ಗರವು ಸ್ವಚ್ಛ ಸರ್ವೇಕ್ಷಣಾ ಸಮೀಕ್ಷೆಯಲ್ಲಿ ರಾಜ್ಯದಲ್ಲಿಯೇ ಪ್ರಥಮ ಸ್ಥಾನ ಪಡೆಯಲು ಪಾಲಿಕೆ ಮತ್ತು ಜಿಲ್ಲಾಡಳಿತದೊಂದಿಗೆ ಕೈ ಜೋಡಿಸಿರುತ್ತಾರೆ. ಆದಾಗ್ಯೂ, ನಗರದ ಇನ್ನು ಹಲವು ಭಾಗದಲ್ಲಿ ಹಸಿಕಸ- ಒಣಕಸ-ಸ್ಯಾನಿಟರಿ ಕಸಗಳನ್ನು ವಿಂಗಡಣೆ ಮಾಡದೇ ಇರುವುದು, ಕಸ ಸಂಗ್ರಹಣಾ ವಾಹನಗಳಿಗೆ ಕಸ ನೀಡದೇ ರಾತ್ರಿ ಮತ್ತು ಮುಂಜಾನೆ ರಸ್ತೆ ಬದಿ, ಖಾಲಿ ನಿವೇಶನಗಳಲ್ಲಿ ಕಸ ಎಸೆಯುತ್ತಿರುವ ಪ್ರಕರಣಗಳು ಕಂಡು ಬಂದಿರುತ್ತವೆ.

ತ್ಯಾಜ್ಯ ವಿಂಗಡಣೆ ಮಾಡದೇ ಇರುವ ಹಾಗೂ ಕಸ ಸಂಗ್ರಹಣಾ ವಾಹನಗಳಿಗೆ ಕಸ ನೀಡದೇ ಇರುವಂತಹ ಮನೆ, ಉದ್ದಿಮೆದಾರರುಗಳನ್ನು ಪತ್ತೆ ಹಚ್ಚಲಾಗುತ್ತಿದೆ. ಪ್ರಾರಂಭಿಕವಾಗಿ ನಗರದ ಸ್ವಚ್ಛತೆಗೆ ಧಕ್ಕೆಯುಂಟಾಗುವಂತೆ ತ್ಯಾಜ್ಯ ನಿರ್ವಹಣಾ ನಿಯಮಗಳನ್ನು ಉಲ್ಲಂಘಿಸುತ್ತಿರುವವರಿಗೆ ತಿಳುವಳಿಕೆ ನೀಡಿ, ನಂತರವೂ ಉಲ್ಲಂಘನೆ ಮುಂದುವರೆಸಿದಲ್ಲಿ ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆಗಳ ತ್ಯಾಜ್ಯ ನಿರ್ವಹಣೆ ಉಪ ವಿಧಿಗಳಲ್ಲಿರಡಿ ಪ್ರತಿ ಉಲ್ಲಂಘನೆಗೆ ರೂ. 100.00 ರಿಂದ ರೂ. 500.00 ಗಳ ವರೆಗಿನ ದಂಡ ವಿಧಿಸಲಾಗುವುದು. ದಂಡ ಪಾವತಿಸದೇ ಇದ್ದಲ್ಲಿ ದಂಡದ ಮೊತ್ತವನ್ನು ಆಸ್ತಿ ತೆರಿಗೆ ಬಾಕಿ ರೂಪದಲ್ಲಿ ವಸೂಲಿಸಲಾಗುವುದು. ಪ್ರಯುಕ್ತ, ಮನೆಗಳನ್ನು ಬಾಡಿಗೆ ನೀಡಿರುವಂತಹ ಮನೆ ಮಾಲೀಕರು ಬಾಡಿಗೆದಾರರುಗಳಿಗೆ ತ್ಯಾಜ್ಯ ವಿಂಗಡಣೆ ಮತ್ತು ನಿರ್ವಹಣೆ ಬಗ್ಗೆ ಅಗತ್ಯ ಷರತ್ತು ವಿಧಿಸಿ ಸಮರ್ಪಕ ತ್ಯಾಜ್ಯ ನಿರ್ವಹಣೆಗೆ ಪಾಲಿಕೆಯೊಂದಿಗೆ ಕೈಜೋಡಿಸಿಸುವುದು. ತಪ್ಪಿದಲ್ಲಿ ಬಾಡಿಗೆದಾರರುಗಳಿಂದ ತ್ಯಾಜ್ಯ ನಿರ್ವಹಣೆ ನಿಯಮಗಳ ಉಲ್ಲಂಘನೆಗೆ ಮನೆ ಮಾಲೀಕರಿಂದ ಆಸ್ತಿ ತೆರಿಗೆ ಬಾಕಿ ರೂಪದಲ್ಲಿ ದಂಡ ವಿಧಿಸಲಾಗುವುದು. ಪ್ರಯುಕ್ತ, ಸಾರ್ವಜನಿಕರು ಉತ್ಪತ್ತಿಯಾಗುವ ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಂಗಡಿಸಿ ನಗರದ ಸ್ವಚ್ಛತೆಗೆ ಹಾಗೂ ಭವಿಷ್ಯದ ಪೀಳಿಗೆಯ ಆರೋಗ್ಯಕರ ಪರಿಸರಕ್ಕೆ ಸಹಕರಿಸುವುದು ಹಾಗೂ ಪ್ಲಾಸ್ಟಿಕ್ ಕ್ಯಾರಿಬ್ಯಾಗ್, ಪ್ಲಾಸ್ಟಿಕ್ ಕಸಗಳಂತಹ ನಿಷೆಧಿತ ಪ್ಲಾಸ್ಟಿಕ್ ವಸ್ತುಗಳ ಬಳಕೆಯನ್ನು ನಿಲ್ಲಿಸಿ, ತ್ಯಾಜ್ಯ ಉತ್ಪಾದನೆಯನ್ನು ತಗ್ಗಿಸುವಂತೆ ಹಾಗೂ ಬೀದಿಬದಿ ಕಾಫೀ, ಟೀ ಮಾರಾಟಗಾರರು ಕಡ್ಡಾಯವಾಗಿ ಪ್ಲಾಸ್ಟಿಕ್, ಪೇಪರ್ ಕಗಳನ್ನು ಬಳಸಬಾರದು ಎಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದರೆ.

## ಆಧುನಿಕ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ

**ದಾವಣಗೆರೆ:** ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ನವಂಬರ್ 6 ಮತ್ತು 11 ರಂದು ಆಧುನಿಕ ಕುರಿ ಮತ್ತು ಮೇಕೆ ತರಬೇತಿಯನ್ನು ಆಯೋಜಿಸಲಾಗಿದೆ.

ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೊತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ತರಬೇತಿಯು ದಾವಣಗೆರೆ ಜಿಲ್ಲೆಯ ರೈತರಿಗೆ ಮಾತ್ರ ಸೀಮಿತವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192-233787 ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

## ಇಂದು ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆ

**ಚಿಕ್ಕಮಗಳೂರು:** 2025-26ನೇ ಸಾಲಿನ ಯುವ ಸಂಸತ್ ಸ್ಪರ್ಧೆಗಳನ್ನು ಅನುಷ್ಠಾನಗೊಳಿಸಲು ತೀರ್ಮಾನಿಸಲಾಗಿದ್ದು, ಶಾಲಾ ಹಂತ, ತಾಲ್ಲೂಕು ಹಂತದಲ್ಲಿ ಈಗಾಗಲೇ ಯುವ ಸಂಸತ್ ಸ್ಪರ್ಧೆಗಳು ಪೂರ್ಣಗೊಂಡಿದ್ದು, ತಾಲ್ಲೂಕು ಹಂತದಲ್ಲಿ ವಿಜೇತರಾದ ಒಟ್ಟು 60 ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯನ್ನು ನವೆಂಬರ್ 6 ರಂದು ಮಧ್ಯಾಹ್ನ 12.30 ಗಂಟೆಯಿಂದ 2.30ರವರೆಗೆ ನಗರದ ಜಿ.ಪಂ. ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.ವಿದ್ಯಾರ್ಥಿಗಳಿಗೆ ಪ್ರಜಾಪ್ರಭುತ್ವದಡಿ ಶಾಸಕಾಂಗದ ಕಾರ್ಯ ಚಟುವಟಿಕೆ, ಕಲಾಪಗಳ ವಿಧಾನ, ಜನಪ್ರತಿನಿಧಿ ಸಂಸ್ಥೆಗಳ ಪಾತ್ರ, ಪ್ರಜಾಪ್ರಭುತ್ವ ಬುನಾದಿಯನ್ನು ಭದ್ರಪಡಿಸುವುದು, ನಾಯಕತ್ವ ಗುಣಗಳು ಇತ್ಯಾದಿ ಅಂಶಗಳನ್ನು ಪರಿಚಯಿಸುವ ಸಂಬಂಧ ಸಂಸದೀಯ ವ್ಯವಹಾರಗಳ ಇಲಾಖೆಯ ಸಹಯೋಗದೊಂದಿಗೆ ಪ್ರತಿ ವರ್ಷ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಯುವ ಸಂಸತ್ ಸ್ಪರ್ಧೆಗಳನ್ನು ನಡೆಸುತ್ತಾ ಬರಲಾಗುತ್ತಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು (ಆಡಳಿತ) ತಿಳಿಸಿದ್ದಾರೆ.

## ಭೂಸ್ವಾಧೀನ ಪರಿಹಾರ: ಅಗತ್ಯ ದಾಖಲೆ ಒದಗಿಸಲು ಸೂಚನೆ

**ಚಿಕ್ಕಮಗಳೂರು:** ರಾಷ್ಟ್ರೀಯ ಹೆದ್ದಾರಿ 173ರ ಕಿ.ಮೀ. 0.00 ಯಿಂದ 26.326 (ಮೂಡಿಗೆರೆಯಿಂದ ಮೂಗ್ತೀಹಳ್ಳಿ) ವರೆಗಿನ ರಸ್ತೆ ಅಗಲೀಕರಣ ಕಾಮಗಾರಿಯ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ಭೂಸ್ವಾಧೀನಕ್ಕೆ ಒಳಪಡುವ ಭೂಮಾಲೀಕರುಗಳಿಗೆ ಪರಿಹಾರವನ್ನು ಪಾವತಿಸಲು ಈಗಾಗಲೇ ಅವಾರ್ಡ್ ನೋಟಿಸನ್ನು ನೀಡಲಾಗಿದೆ. ಅದರಂತೆ ಕೆಲವು ಭೂಮಾಲೀಕರಿಂದ ಮಾತ್ರ ಭೂಸ್ವಾಧೀನದ ಪರಿಹಾರ ಪಾವತಿಗೆ ಅವಶ್ಯ ದಾಖಲೆಗಳು ಭೂಸ್ವಾಧೀನ ಪ್ರಾಧಿಕಾರದಲ್ಲಿ ಸ್ವೀಕೃತವಾಗಿವೆ.

ಭೂಸ್ವಾಧೀನ ಪರಿಹಾರ ಮೊತ್ತವನ್ನು ಪಡೆಯಲು ಅಗತ್ಯ ದಾಖಲಾತಿಗಳನ್ನು ಇದುವರೆಗೂ ಸಲ್ಲಿಸದೆ ಇರುವ ಭೂಮಾಲೀಕರು ನವೆಂಬರ್ 10ರ ಒಳಗಾಗಿ ನಗರದ ಚಿಕ್ಕಮಗಳೂರು ಉಪವಿಭಾಗದ ಉಪವಿಭಾಗಾಧಿಕಾರಿ ಹಾಗೂ ಭೂಸ್ವಾಧೀನ ಪ್ರಕ್ರಿಯೆಗಳ ಸಕ್ಷಮ ಪ್ರಾಧಿಕಾರಿ (ಮೂಡಿಗೆರೆಯಿಂದ ಮೂಗ್ತೀಹಳ್ಳಿ ಸೆಕ್ಷನ್)ಯವರ ಕಚೇರಿಗೆ ಸಲ್ಲಿಸಬೇಕು. ತಪ್ಪಿದಲ್ಲಿ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಉಪವಿಭಾಗಾಧಿಕಾರಿ ಹಾಗೂ ಭೂಸ್ವಾಧೀನ ಪ್ರಕ್ರಿಯೆಗಳ ಸಕ್ಷಮ ಪ್ರಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರೋಟರಿ ಕ್ಲಬ್ ದಾವಣಗೆರೆ ಮಿಡ್‌ಟೌನ್ ಆಶ್ರಯದಲ್ಲಿ ಎಮಿನೆಂಟ್ ಅಭಿಯಂತರರು

# ಎಮಿನೆಂಟ್ ಡಾಕ್ಟರ್ಸ್ ಹಾಗೂ ಎಮಿನೆಂಟ್ ಶಿಕ್ಷಕ ಪ್ರಶಸ್ತಿ ಪ್ರಧಾನ

**ದಾವಣಗೆರೆ:** ಸ್ಥಳಿಯ ರೋಟರಿ ಕ್ಲಬ್ ದಾವಣಗೆರೆ ಮಿಡ್‌ಟೌನ್ ಆಶ್ರಯದಲ್ಲಿ ಎಮಿನೆಂಟ್ ಅಭಿಯಂತರರು, ಎಮಿನೆಂಟ್ ಡಾಕ್ಟರ್ಸ್ ಹಾಗೂ ಎಮಿನೆಂಟ್ ಶಿಕ್ಷಕ ಪ್ರಶಸ್ತಿ ಪ್ರಧಾನ ಕಾರ್ಯಕ್ರಮವು ಇತ್ತಿಚಿಗೆ ದಾವಣಗೆರೆಯ ರೋಟರಿ ಬಾಲಬವನದಲ್ಲಿ ಜರುಗಿತು.



ನಿವೃತ್ತ ಸಹಾಯಕ ಕಾರ್ಯನಿರ್ವಹಕ ಇಂಜಿನಿಯರ್ ಆದ ವೈ.ಎನ್. ರಂಗನಾಥ್ ರವರು "ಎಮಿನೆಂಟ್ ಇಂಜಿನಿಯರ್" ಪ್ರಶಸ್ಥಿಯನ್ನು ಸ್ವೀಕರಿಸಿ ಮಾತನಾಡುತ್ತ ಅತ್ಯತ್ತಮ ತಂತ್ರಜ್ಞಾನ ಬಳಸುವುದರಿಂದ ಪ್ರತಿಯೊಂದು ಕ್ಷೇತ್ರದಲ್ಲಿ ಸುಲಬವಾಗಿ ಸಫಲತೆಯನ್ನು ಕಾಣುವುದರ ಜೊತೆಗೆ ಪರಿಣಾಮಕಾರಿ ಜೀವನವನ್ನು ಸಹ ನಡೆಸಬಹುದೆಂದು ನುಡಿದರು. ಸರ್. ಎಂ. ವಿಶ್ವೇಶ್ವರಯ್ಯ ನವರ ಜೀವನ ಭಾರತದ ಲಕ್ಷಾಂತರ ಯುವಕರಿಗೆ ಇಂಜೀನಿಯರ್‌ಗಳಾಗಲು ಸ್ಪೂರ್ತಿ ಎಂಬ ಅಭಿಪ್ರಾಯ ವ್ಯಕ್ತ ಪಡಿಸಿದರು.

ನಗರದ ಪ್ರತಿಷ್ಠಿತ ನೆಲವಿಗಿ ಅರ್ಥೋಸ್ಕೋಪಿ ಕೇಂದ್ರದ ವೈದ್ಯರು ಹಾಗೂ ಎಸ್.ಎಸ್. ಇನ್ಸ್ಟಿಟ್ಯೂಟ್ ಬೋರ್ಡ್ ಆಫ್ ಮೆಡಿಕಲ್ ಸೈನ್ಸ್ ನಿವೃತ ಪ್ರಾಧ್ಯಾಪಕರದ ಅನಿಲ್ ನೆಲವಿಗೆ ಇವರಿಗೆ ಇದೆ ಸಂದರ್ಭದಲ್ಲಿ "ಎಮಿನೆಂಟ್ ಡಾಕ್ಟರ್" ಎಂಬ ಪ್ರಶಸ್ಥಿಯನ್ನು ರೋಟರಿ ಸಂಸ್ಥೆಯ ವತಿಯಿಂದ ನೀಡಿ ಗೌರವಿಸಲಾಯಿತು.

ಪ್ರಶಸ್ಥಿ ಸ್ವೀಕರಿಸಿ ಮಾತನಾಡಿದ ಡಾ॥ ಅನಿಲ್ ನೆಲವಿಗೆ ಮಾತನಾಡಿ ವೈದ್ಯಕೀಯ ವೃತಿ ಆತ್ಯಂತ ಪುಣ್ಯದ ಕೆಲಸವಾಗಿದ್ದು, ಅದೃಷ್ಟವಂತರಿಗೆ ಮಾತ್ರ ಈ ಅವಕಾಶ ಸಿಗುತ್ತದೆ. ವೈದ್ಯರ ಸೇವೆಯನ್ನು ಹಣದಿಂದ ಅಳೆಯಲು ಸಾಧ್ಯವಿಲ್ಲ. ಇಂತಹ ವೃತ್ತಿಯನ್ನು ಸಮರ್ಪಣಾ ಮನೋಭಾವದಿಂದ ಮಾಡಬೇಕು ಎಂದು ಹೇಳಿದರು.

ಇದೇ ಸಂದರ್ಬದಲ್ಲಿ ದಾವಣಗೆರೆ ಜಿಲ್ಲೆ ದಾವಣಗೆರೆ ತಾಲೂಕಿನ ಹೆಬ್ಬಾಳ ಲೂಯರ್ ಪ್ರೈಮರಿ ಶಾಲೆಯ ಸಹಶಿಕ್ಷಕಿಯಾದ ಶ್ರೀಮತಿ. ಗಾಯತ್ರಿ ಬಿ. ಐರಣಿ ಇವರನ್ನು "ಎಮಿನೆಂಟ್ ಶಿಕ್ಷಕಿ" ಪ್ರಶಸ್ಥಿ ನೀಡಿ ಗೌರವಿಸಲಾಯಿತು.

ಪ್ರಶಸ್ಥಿ ಸ್ವೀಕರಿಸಿ ಮಾತನಾಡಿದ ಗಾಯತ್ರಿ ಬಿ. ಐರಣಿ ಅವರು ಶಿಕ್ಷಕರ ಹಾಗೂ ಪಾಲಕರ ಮಾರ್ಗದರ್ಶನದಲ್ಲಿ ಪ್ರತಿಯೊಬ್ಬರು ಕಾರ್ಯಪ್ರವೃತ್ತಿಯಾದಲ್ಲಿ ಆಗ ಮಾತ್ರ ಜೀವನದಲ್ಲಿ ಯಶಸ್ಸನ್ನು ಕಾಣಬಹುದು. ಅಲ್ಲದೇ ಶಿಕ್ಷಕರು ಶಿಷ್ಯರಲ್ಲಿ ಅನೇಕ ಕನಸುಗಳನ್ನು ಹುಟ್ಟುಹಾಕಿ ಅವುಗಳನ್ನು ಸಹಕಾರಗೊಳಿಸಲು ಮುನ್ನುಡಿಯನ್ನು ಬರೆಯುತ್ತಾರೆ ಎಂದು ನುಡಿದರು.

ಸಮಾರಂಭದ ಅದ್ಯಕ್ಷತೆಯನ್ನು ವಹಿಸಿದ್ದ ರೋಟರಿ ಕ್ಲಬ್ ದಾವಣಗೆರೆ ಮಿಡ್‌ಟೌನ್ ಅದ್ಯಕ್ಷರಾದ ಡಾ॥ ಜಯಸಿಂಹ ವಿ.ಎಲ್. ಮಾತನಾಡಿ ಪ್ರತಿಯೊಬ್ಬರು ತಮ್ಮ ಜವಬ್ದಾರಿಗಳನ್ನು ಅರಿತು ಅವುಗಳನ್ನು ಸಕಾರಗೊಳಿಸಿದಲ್ಲಿ ಸುಂದರ ಸಮಾಜ ನೀರ್ಮಿಸಲು ಸಾಧ್ಯವೆಂದು ನುಡಿದರು.

ಇನ್ನರ್‌ವೀಲ್ ಕ್ಲಬ್ ದಾವಣಗೆರೆ ಮಿಡ್‌ಟೌನ್ ಅದ್ಯಕ್ಷರಾದ ಶ್ರೀಮತಿ.ದಿವ್ಯವಿಕಾಸ್, ಕಾರ್ಯದರ್ಶಿಯಾದ ರೇಣಕಾ ಉದಯ ಸದಸ್ಯರುಗಳಾದ ಮಂಜುಳಾ ವೀರಣ್ಣ, ಗೀತಾ ಶಿವರಾಜ, ಗಾಯಿತ್ರಿ ರಾಟೋಡ್, ಸರೋಜಮ್ಮ, ರೋಟರಿ ಕ್ಲಬ್ ದಾವಣಗೆರೆ ಮಿಡ್‌ಟೌನ್ ಸದಸ್ಯರಾದ ಸಿದ್ದನಗೌಡರ್ ಮುಂತಾದವರು ಉಪಸ್ಥಿತರಿದ್ದರು.

ರೋಟರಿ ಕ್ಲಬ್ ದಾವಣಗೆರೆ ಮಿಡ್‌ಟೌನ್ ಖಜಾಂಚಿ ಎ.ಎನ್ ಶೇಖರ್ ಸ್ವಾಗತಿಸಿದರು. ಎಸ್.ಟಿ. ಕುಸುಮ ಶೆಟ್ಟಿ, ಡಾ.ಜಯಸಿಂಹ ವಿ.ಎಲ್., ಎ.ಎಂ.ಶೇಖರ್ ಇವರುಗಳು ಕ್ರಮವಾಗಿ ಡಕ್ಟರ್ಸ್ ಡೇ, ಇಂಜಿನಿಯರ್ಸ್ ಡೇ, ಟೀಚರ್ಸ್ ಡೇ, ಕುರಿತು ಮಾತನಾಡಿದರು. ಡಾ.ಶೇಖರಪ್ಪ ಬಿ.ಮಲ್ಲೂರು ಇವರು ಕಾರ್ಯಕ್ರಮ ನಿರೂಪಿಸಿದರು ಕೊನೆಯಲ್ಲಿ ರೊಟರಿ ಕ್ಲಬ್ ದಾವಣಗೆರೆ ಮಿಡ್‌ಟೌನ್ ಕಾರ್ಯದರ್ಶಿಗಳಾದ ಡಾ.ಮಲ್ಲಿಕಾರ್ಜುನ್ ಎಸ್. ಹೊಳಿ. ವಂದಿಸಿದರು.

## ಡಾ॥ನಾಗಲಕ್ಷ್ಮಿ ಚೌದರಿ ವಸತಿ ನಿಲಯಕ್ಕೆ ಭೇಟಿ ನೀಡಿ ಪರೀಶಿಲನೆ



**ಹಾಸನ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಡಿ ದೇವರಾಜ ಅರಸು ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕಿಯರ ವಸತಿನಿಲಯಕ್ಕೆಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ॥ನಾಗಲಕ್ಷ್ಮಿ ಚೌದರಿ ಅವರುಭೇಟಿ ಮಾಡಿ ವಿದ್ಯಾರ್ಥಿಗಳು ತಮ್ಮ ಸಮಸ್ಯೆಗಳನ್ನು ಆಲಿಸಿದ್ದಾರೆ.

ಈ ವಿದ್ಯಾರ್ಥಿ ನಿಲಯದಲ್ಲಿ 140 ರಿಂದ 200 ಜನ ವಿದ್ಯಾರ್ಥಿನಿಯರು ಇದ್ದು, ವಿದ್ಯಾರ್ಥಿ ನಿಲಯದ ಕಟ್ಟಡ ಶೀತಗೊಂಡಿರುತ್ತದೆ. ಆಹಾರ ಸರಿ ಇರುವುದಿಲ್ಲ, ಶೌಚಾಲಯದ ವ್ಯವಸ್ಥೆ, ಸ್ವಚ್ಛತೆ ಇರುವುದಿಲ್ಲ.4-5 ತಿಂಗಳಿನಿಂದಕಿಟ್‌ಗಳನ್ನು ನೀಡಿರುವುದಿಲ್ಲ, ಸಿಸಿಟಿವಿ ಕ್ಯಾಮರಾಗಳ ಕೊರತೆ ಇದೆ ಹಾಗೂ ಹೆಚ್ಚು ವಿದ್ಯಾರ್ಥಿಗಳು ಒಂದೇ ರೂಂನಲ್ಲಿ ಇರುವುದರಿಂದ ತೊಂದರೆಯಾಗುತ್ತಿದೆಎಂಬ ಅಹವಾಲುಗಳನ್ನು ಸ್ವೀಕರಿಸಿ ಕೂಡಲೇ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

## ಅರಿವು ಯೋಜನೆಯಡಿ ಶೈಕ್ಷಣಿಕ ಸಾಲ

**ಚಿಕ್ಕಮಗಳೂರು:** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಅರಿವು ವಿದ್ಯಾಭ್ಯಾಸ ಸಾಲ ಯೋಜನೆಯಡಿಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಕೆಇಎ ವಯ ಸಿಇಟಿ/ಎನ್‌ಇಇಟಿ ಮುಖಾಂತರ ಎಂಬಿಬಿಎಸ್, ಬಿಡಿಎಸ್, ಬಿ.ಇ., ಬಿ.ಟೆಕ್, ಬಿ.ಆಯುಷ್, ಬ್ಯಾಚುಲರ್ ಆಫ್ ಆರ್ಕಿಟೆಕ್ಚರ್, ಫಾರ್ಮಸಿ, ಆಗ್ರಿಕಲ್ಲರ್ ಸೈನ್ಸ್, ವೆಟರ್ನರಿ ಹಾಗೂ ಫಾರ್ಮಾ ಸೈನ್ಸ್ ಇಂತಹ ಕೋರ್ಸ್‌ಗಳಿಗೆ ಆಯ್ಕೆಯಾಗಿರುವ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ "ಅರಿವು" (ರಿನ್ಯೂವಲ್) ಯೋಜನೆಯಡಿ ಶೈಕ್ಷಣಿಕ ಸಾಲವನ್ನು ಪಡೆಯಲು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಸಲ್ಲಿಸುವಾಗ ನಿಗಮದಿಂದ ಈ ಹಿಂದಿನ ವರ್ಷದಲ್ಲಿ ಪಡೆದಿರುವ ಸಾಲದ ಮೊತ್ತದ ಶೇ.12 ರಷ್ಟನ್ನು ಆನ್‌ಲೈನ್ ಮುಖಾಂತರ ಪಾವತಿಸಬೇಕಾಗಿದೆ.

ಈ ಹಿಂದೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆಯಾಗಿದ್ದು ಬೇರೆ ಬೇರೆ ವರ್ಷಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳು (ಕ್ರಿಶ್ಚಿಯನ್ ಸಮುದಾಯವನ್ನು ಹೊರತುಪಡಿಸಿ) ಅರಿವು ವಿದ್ಯಾಭ್ಯಾಸ ಸಾಲ ಪಡೆಯದಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಸಹ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು. ಇಂತಹ ವಿದ್ಯಾರ್ಥಿಗಳಿಗೆ ರಿನ್ಯೂವಲ್ ಮೊತ್ತ ಪಾವತಿಸುವ ಅಗತ್ಯವಿಲ್ಲ.ಈ ಹಿಂದೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆಯಾಗಿದ್ದು ಬೇರೆ ಬೇರೆ ವರ್ಷಗಳಲ್ಲಿ

ವಿದ್ಯಾಭ್ಯಾಸ ಮಾಡುತ್ತಿರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳು (ಕ್ರಿಶ್ಚಿಯನ್ ಸಮುದಾಯವನ್ನು ಹೊರತುಪಡಿಸಿ) ಅರಿವು ವಿದ್ಯಾಭ್ಯಾಸ ಸಾಲ ಪಡೆಯದಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಸಹ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು. ಇಂತಹ ವಿದ್ಯಾರ್ಥಿಗಳಿಗೆ ರಿನ್ಯೂವಲ್ ಮೊತ್ತ ಪಾವತಿಸುವ ಅಗತ್ಯವಿಲ್ಲ.

ಅಲ್ಪಸಂಖ್ಯಾತ ವಿದ್ಯಾರ್ಥಿಗಳು ನಿಗಮದ ವೆಬ್‌ಸೈಟ್ <https://kmdconline.karnataka.gov.in/> ಮೂಲಕ ಆನ್‌ಲೈನ್‌ನಲ್ಲಿ ಎಲ್ಲಾ ದಾಖಲಾತಿಗಳ ಸಹಿತ ಅರ್ಜಿ ಸಲ್ಲಿಸಬಹುದು.

ಈಗಾಗಲೇ ಅರ್ಜಿ ಸಲ್ಲಿಸಲು ಅವಕಾಶ ಒದಗಿಸಲಾಗಿದ್ದು, ಡಿಸೆಂಬರ್ 3 ಅಂತಿಮ ದಿನಾಂಕವಾಗಿದೆ.

ಹೆಚ್ಚಿನ ಮಾಹಿತಿಗೆ ಇಲಾಖಾ ಸಹಾಯವಾಣಿ ಸಂಖ್ಯೆ: 8277799990 ಸಂಪರ್ಕಿಸಬಹುದು. ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿದ ನಂತರ ಮೂಲ ಇಂಡೆಮ್ನಿಟಿ ಬಾಂಡ್ ಮತ್ತು ಸಾಲಕ್ಕೆ ಸಂಬಂಧಿಸಿದ ಅಗತ್ಯ ದಾಖಲಾತಿಗಳನ್ನು ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿದ ನಂತರ ಮೂಲ ಇಂಡೆಮ್ನಿಟಿ ಬಾಂಡ್ ಮತ್ತು ಸಾಲಕ್ಕೆ ಸಂಬಂಧಿಸಿದ ಅಗತ್ಯ ದಾಖಲಾತಿಗಳನ್ನು ಜಿಲ್ಲಾ ಕಚೇರಿಗೆ ಸಲ್ಲಿಸಲು ಸೂಚಿಸಲಾಗಿದೆ ಎಂದು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಹೆಚ್.ಎಲ್ ಸುಜಾತರವರ ಬೀಳ್ಕೊಡುಗೆ

**ಚಿಕ್ಕಮಗಳೂರು:** ಕಳೆದ ಎರಡು ವರ್ಷಗಳ ಕಾಲ ಇಲ್ಲಿನ ಕೃಷಿ ಇಲಾಖೆಯಜಂಟಿ ನಿರ್ದೇಶಕರಾಗಿ ಸೇವೆ ಸಲ್ಲಿಸಿದ ಹೆಚ್.ಎಲ್ ಸುಜಾತಅವರನ್ನು ಬೀಳ್ಕೊಡಲಾಯಿತು.ಈ ಸಂದರ್ಭದಲ್ಲಿಜಿಲ್ಲಾ ಕೃಷಿ ಪರಿಕರಗಳ ಮಾರಾಟಗಾರರ ಸಂಘದಅಧ್ಯಕ್ಷಕೆ. ಆರ್‌ಯೋಗೀಶ್, ಉಪಾಧ್ಯಕ್ಷಉದಯ್ ಪೈ, ತಾಲ್ಲೂಕುಅಧ್ಯಕ್ಷಟಿ.ಡಿತಿಮ್ಮಯ್ಯ, ಪ್ರಧಾನ ಕಾರ್ಯದರ್ಶಿ ಮನು, ಖಜಾಂಚಿ ಶ್ರೀಕಾಂತ್ ಶೆಟ್ಟಿ, ತಾಲ್ಲೂಕು ಕಾರ್ಯದರ್ಶಿಗಳಾದ ವಿಕ್ರಮ್, ಆದಶ್, ಮಹಾಂತೇಶ್, ಕರಿಕಟ್ಟೆ ಶ್ರೀನಿವಾಸ್, ವನರಾಜು, ಬಸವರಾಜು, ಪರಮೇಶ್ವರಪ್ಪ ಉಪಸ್ಥಿತರಿದ್ದರು.




## ಜಿಲ್ಲಾ ಉಸ್ತುವಾರಿ ಸಚಿವರಿಂದ ವಾಟರ್ ರೂಲಿಂಗ್ ಬೋಟ್ ಉದ್ಘಾಟನೆ

**ಗದಗ :** ಭೀಷ್ಮ ಕೆರೆಯು ನಗರದ ಸೌಂದರ್ಯ ಹೆಚ್ಚಿಸಿದೆ. ಇಲ್ಲಿಗೆ ಬರುವ ಜನರು ಇನ್ನು ಮುಂದೆ ಬೋಟಿಂಗ್ ಜತೆಗೆ ವಾಟರ್ ರೂಲಿಂಗ್ ಬೋಟ್ ಅನುಭವ ಪಡೆಯಬಹುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ತಿಳಿಸಿದರು.

ಸೋಮವಾರದಂದು ನಗರದ ಬೀಷ್ಮ ಕೆರೆಯಲ್ಲಿ ನೂತನ ವಾಟರ್ ರೂಲಿಂಗ್ ಬೋಟ್ ಉದ್ಘಾಟಿಸಿ ಮಾತನಾಡಿದರು ಈ ಸಂದರ್ಭದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ, ತಾಲೂಕಾ ಅಧ್ಯಕ್ಷ ಅಶೋಕ ಮಂದಾಲಿ, ಸಿದ್ದು ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಹಾಜರಿದ್ದರು.



## ವಿವಿಧ ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳಲ್ಲಿ ಭಾಗವಹಿಸಲು ಮಕ್ಕಳಿಂದ ನೋಂದಣಿಗೆ ಆಹ್ವಾನ

**ಬಳ್ಳಾರಿ:** ಕರ್ನಾಟಕ ರಾಜ್ಯ ಬಾಲಭವನ ಸೊಸೈಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಜಿಲ್ಲಾ ಮಟ್ಟದಲ್ಲಿ ಪ್ರಸ್ತಕ ಸಾಲಿನ ಮಕ್ಕಳ ದಿನಾಚರಣೆ ಕಾರ್ಯಕ್ರಮ ಆಯೋಜಿಸಿದ್ದು, ಕಾರ್ಯಕ್ರಮದಲ್ಲಿ ವಿವಿಧ ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳಲ್ಲಿ ಭಾಗವಹಿಸಲು ಮಕ್ಕಳಿಂದ ನೋಂದಣಿಗೆ ಆಹ್ವಾನಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.*ವಿವಿಧ ಸ್ಪರ್ಧೆಗಳು:*ಸೃಜನಾತ್ಮಕ ಕಲೆ: ಚಿತ್ರಕಲೆ, ಕರಕುಶಲೆ, ಜೇಡಿಮಣ್ಣಿನ ಕಲೆ.ಸೃಜನಾತ್ಮಕ ಬರವಣಿಗೆ: ಕಥೆ, ಕವನ, ಪ್ರಬಂಧ ಬರೆಯುವುದು.ಸೃಜನಾತ್ಮಕ ಪ್ರದರ್ಶನ ಕಲೆ: ಶಾಸ್ತ್ರೀಯ ನೃತ್ಯ, ಜಾನಪದ ನೃತ್ಯ, ಕರ್ನಾಟಕ ಹಾಗೂ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ವಾದ್ಯ ಸಂಗೀತ, ಯಕ್ಷಗಾನ, ಯಕ್ಷಿಣಿ ಪ್ರದರ್ಶನ, ಸುಗಮ ಸಂಗೀತ, ಏಕಪಾತ್ರಾಭಿನಯ ಸೇರಿದಂತೆ ಯಾವುದಾದರೊಂದು ಕಲೆಯನ್ನು ವಿಷಯದ ಬಗ್ಗೆ ಪ್ರದರ್ಶಿಸಲು ಅವಕಾಶವಿರುತ್ತದೆ.ವಿಜ್ಞಾನದಲ್ಲಿ ನೂತನ ಆವಿಷ್ಕಾರ: ವಿಜ್ಞಾನಕ್ಕೆ ಸಂಬಂಧಪಟ್ಟಂತೆ ಒಂದು ವಿಷಯದ ಬಗ್ಗೆ ಮಾದರಿ ಪ್ರದರ್ಶನ ಹಾಗೂ ವಿವರಣೆ ನೀಡುವುದು.ಸೌಲಭ್ಯ ವಂಚಿತ ಮಕ್ಕಳಿಗೆ ಸುಧಾರಣಾ ಸಂಸ್ಥೆಗಳ ಬಾಲಕರು, ಬಾಲಕಿಯರ ಬಾಲ ಮಂದಿರದ ಮಕ್ಕಳಿಗೆ ಮೊದಲನೇ ಆದ್ಯತೆ ನೀಡಲಾಗುವುದು. ಮಕ್ಕಳ ಹೆಸರು ನೋಂದಾಯಿಸಿದವರಿಗೆ ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಬಹುದು. ನೋಂದಾಯಿಸಿಕೊಳ್ಳಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಗೆ ಭೇಟಿ ನೀಡಬಹುದು. ನ.10 ಕೊನೆಯ ದಿನವಾಗಿದೆ. ಕಾರ್ಯಕ್ರಮದ ದಿನಾಂಕವನ್ನು ಮುಂದಿನ ದಿನಗಳಲ್ಲಿ ತಿಳಿಸಲಾಗುತ್ತದೆ.

## ರಾಜ್ಯ ಸರ್ಕಾರದ ಮಹಾತ್ವಾಕಾಂಕ್ಷಿ ಯುವ ನಿಧಿ ಯೋಜನೆ

**ಗದಗ :** ಕರ್ನಾಟಕ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 05 ಗ್ಯಾರೆಂಟಿ ಯೋಜನೆಗಳಲ್ಲಿ 05ನೇ ಗ್ಯಾರೆಂಟಿ ಯೋಜನೆ ಯವನಿಧಿ ಈ ಯೊ ೀಜನೆಯಲ್ಲಿ ಪದವಿದರರಿಗೆ 3000ರೂ. ಮತ್ತು ಡಿಪ್ಲೋಮದರರಿಗೆ 1500ರೂ. ಗಳನ್ನು ನಿರುದ್ಯೋಗಿ ಭತ್ಯಯಾಗಿ ನಿಡುತ್ತಿದ್ದು ಜನೇವರಿ-2023 ರ ನಂತರ ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದ್ದು

ಹಾಗೂ ಪಲಿತಾಂಶದ ನಂತರ ನಿರುದ್ಯೋಗಿಯಾಗಿ 180 ದಿನಗಳನ್ನು ಪೂರೈಸಿದ ಅರ್ಹ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗಿರುತ್ತದೆ, ಅಭ್ಯರ್ಥಿಗಳು ಈ ಪ್ರಯೋಜನ ಪ್ರತಿ ತಿಂಗಳು ಪಡೆಯಲು, 1) ತಾನು ನಿರುದ್ಯೋಗಿಯೆಂದು 2) ವ್ಯಾಸಂಗ ಮುಂದುವರೆಸು ತ್ತಿಲ್ಲವೆಂದು ಹಾಗೂ 3) ಸ್ವಯಂ ಉದ್ಯೋಗಿಯಾಗಿಲ್ಲವೆಂದು ಸ್ವಯಂ ಘೋಷಣೆಯನ್ನು ಪ್ರತಿ ಮಾಹೆ ದಿನಾಂಕಃ 25 ರೊಳಗಾಗಿ ಮಾಡಬೇಕು. ಸೇವಾ ಸಿಂದು 1) ತಾನು ನಿರುದ್ಯೋಗಿಯೆಂದು 2) ವ್ಯಾಸಂಗ ಮುಂದುವರೆಸು ತ್ತಿಲ್ಲವೆಂದು ಹಾಗೂ 3) ಸ್ವಯಂ ಉದ್ಯೋಗಿಯಾಗಿಲ್ಲವೆಂದು ಸ್ವಯಂ ಘೋಷಣೆಯನ್ನು ಪ್ರತಿ ಮಾಹೆ ದಿನಾಂಕಃ 25 ರೊಳಗಾಗಿ ಮಾಡಬೇಕು. ಸೇವಾ ಸಿಂದು ಪೋರ್ಟಲ್ ಲಾಗಿನ್‌ನಲ್ಲಿ ಅರ್ಜಿ ಸ್ಥಿತಿಯನ್ನು ಪರಿಶೀಲಿಸಿ ದಾಖಲೆ ಪರಿಶೀಲನೆ ( document verification ) ಬಾಕಿ ಉಳಿದಿರುವ ಅಭ್ಯರ್ಥಿಗಳು ಎಲ್ಲ ಮೂಲ ದಾಖಲೆಗಳೊಂದಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಗೆ ಖುದ್ದಾಗಿ ಸಂಪರ್ಕಿಸಿ ತಮ್ಮ ದಾಖಲೆಗಳನ್ನು ಪರಿಶೀಲಿಸಿ ದೃಢೀಕರಿಸಿಕೊಳ್ಳಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಃ 08372-220609. ಸಂಪರ್ಕಿಸಬಹುದು.

## ಕಲಾಕುಂಚ ಸಿದ್ದವೀರಪ್ಪ ಬಡಾವಣೆಯ ಶಾಖೆಯಿಂದ ಮಕ್ಕಳ ದಿನಾಚರಣೆ ಸಮಾರಂಭ

**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ನಗರದ ಸಿದ್ದವೀರಪ್ಪ ಬಡಾವಣೆಯ ಶಾಖೆಯ ಆಶ್ರಯದಲ್ಲಿ ನವೆಂಬರ್ 14 ರಂದು ಶುಕ್ರವಾರ ಸಂಜೆ 4 ಗಂಟೆಗೆ ಸಿದ್ದವೀರಪ್ಪ ಬಡಾವಣೆಯ 4ನೇ ತಿರುವಿನಲ್ಲಿರುವ ಶ್ರೀ ಯಗಟಿ ಮಲ್ಲಿಕಾರ್ಜುನ ನಿಲಯದ ಸಭಾಂಗಣದಲ್ಲಿ "ಮಕ್ಕಳ ದಿನಾಚರಣೆ" ಪ್ರಯುಕ್ತ ಉಚಿತವಾಗಿ ಮಕ್ಕಳಿಗೆ ಆಟೋಟ ಸ್ಪರ್ಧೆ ಸಾರ್ವಜನಿಕವಾಗಿ ಮಹಿಳೆಯರಿಗೆ, ಪುರುಷರಿಗೆ ವಿವಿಧ ರಸರಂಜನೆ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಸಿದ್ದವೀರಪ್ಪ ಬಡಾವಣೆಯ ಶಾಖೆಯ ಅಧ್ಯಕ್ಷರಾದ ಶ್ರೀಮತಿ ಲಲಿತಾ ಕಲ್ಲೇಶ್‌ರವರು ತಿಳಿಸಿದ್ದಾರೆ.

ಈ ಸಮಾರಂಭದ ಜೊತೆಯಲ್ಲಿ ಕಲಾಕುಂಚ ಸಿದ್ದವೀರಪ್ಪ ಬಡಾವಣೆಯ ಶಾಖೆಯ ನೂತನ ಪದಾಧಿಕಾರಿಗಳ ಆಯ್ಕೆಯ ಸರ್ವ ಸದಸ್ಯರ ಮಹಾಸಭೆ ಇದ್ದು ಕಲಾಕುಂಚದ ಸರ್ವ ಸದಸ್ಯರು, ಪದಾಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕಾಗಿ ಕಲಾಕುಂಚ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ವಿನಂತಿಸಿದ್ದಾರೆ.

ಉಚಿತ ಸ್ಪರ್ಧೆಗಳಿಗೆ ರಸರಂಜನೆ ಸಮಾರಂಭಕ್ಕೆ ಭಾಗವಹಿಸುವವರು 9844691391, 9740549009 ಈ ಸನೀಹವಾಣಿಗಳಿಗೆ ಸಂಪರ್ಕಿಸಿ ಹೆಸರು ನೊಂದಾಯಿಸಬಹುದು ಎಂದು ಕಲಾಕುಂಚ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ಪ್ರಕಟಿಸಿದ್ದಾರೆ.

# ತಾಯಿ ಮತ್ತು ಶಿಶು ಮರಣ ಪ್ರಮಾಣ ಶೂನ್ಯಕ್ಕೆ ತರಲು ಪ್ರಯತ್ನಿಸಿ: ಜಿಲ್ಲಾಧಿಕಾರಿ

**ಹಾಸನ :** ಜಿಲ್ಲೆಯಲ್ಲಿ ತಾಯಿ ಮತ್ತು ಶಿಶು ಮರಣ ಪ್ರಮಾಣ ಶೂನ್ಯಕ್ಕೆ ತರುವ ನಿಟ್ಟಿನಲ್ಲಿ ಮುಂಜಾಗ್ರತೆವಹಿಸಿ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕಚೇರಿ ಬಿ.ಸಿ.ರಾಯ್ ಸಭಾಂಗಣದಲ್ಲಿ ಇಂದು ರಾಷ್ಟ್ರೀಯ ಆರೋಗ್ಯ ಅಭಿಯಾನ ಕುರಿತು ನಡೆದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಗರ್ಭಿಣಿ ಸ್ತ್ರೀಯರಿಗೆ ನಿಗದಿತ ಸಮಯದಲ್ಲಿ ನೀಡಬಹುದಾದ ಆರೋಗ್ಯ ಸೇವೆಗಳನ್ನು ತಪ್ಪದೆ ಕಲ್ಪಿಸಲು ಎಚ್ಚರವಹಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸರ್ಕಾರ ಗರ್ಭಿಣಿ ಸ್ತ್ರೀಯರ ಆರೋಗ್ಯಕ್ಕಾಗಿ ವಿವಿಧ ಯೋಜನೆಗಳಡಿ ಸವಲತ್ತುಗಳನ್ನು ಒದಗಿಸುತ್ತಿದೆ ಆದರೂ ಅವರ ಕೈಗೊಳ್ಳುವುದರ ಜೊತೆಗೆ ಸಮಯದಲ್ಲಿ ಅವರು ಮರಣ ಹೊಂದಿದ ಸುರಕ್ಷತಾ ಹೆರಿಗೆಗೆ ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ನಿಗದಿತ ಸಮಯಕ್ಕಿಂತ ಮುಂಚಿತವಾಗಿ ಹೆರಿಗೆ ಆಗುವುದಕ್ಕೆ ಕಾರಣವೇನು ಎಂಬುದರ ಬಗ್ಗೆ ಕೂಡ ಎಚ್ಚರವಹಿಸಬೇಕು ಎಂದು ತಿಳಿಸಿದರು.

ತಾಲ್ಲೂಕು ಆಸ್ಪತ್ರೆಗಳಲ್ಲಿ ವಿಳಂಬ ಮಾಡದೆ ವಯಸ್ಸಿನ ಪ್ರಮಾಣ ಪತ್ರ ಹಾಗೂ ವಿಕಲಚೇತನರಿಗೆ ಯು.ಡಿ.ಐ.ಡಿ.ಪ್ರಮಾಣ ಪತ್ರ ನೀಡಲು ಸ್ಪಂದಿಸಿ ಕೆಲಸ ನಿರ್ವಹಿಸುವಂತೆ



ನಿರ್ದೇಶನ ನೀಡಿದರು.

ನಮ್ಮ ಕ್ಲಿನಿಕ್ 13 ಇದ್ದು, ಇವುಗಳಲ್ಲಿ ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸಲು ಕ್ರಮವಹಿಸುವಂತೆ ಸೂಚಿಸಿದರು.

ಏಪ್ರಿಲ್‌ನಿಂದ ಅಕ್ಟೋಬರ್ ವರೆಗೆ 5 ತಾಯಿ ಮರಣ ಹೊಂದಿದ್ದಾರೆ. ಇವುಗಳಲ್ಲಿ ನಾಲ್ಕು ಹೊರ ಜಿಲ್ಲೆಗಳಿಂದ ಬಂದವರಾಗಿದ್ದು,ಒಬ್ಬರು ಮಾತ್ರ ಹಾಸನ ಜಿಲ್ಲೆಯರಾಗಿದ್ದಾರೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಸಭೆಗೆ ಮಾಹಿತಿ ನೀಡಿದರು.ಆಸ್ಪತ್ರೆಯಲ್ಲಿ ಸಾರ್ವಜನಿಕರಿಗೆ ವೈದ್ಯರು ಲಭ್ಯವಿರುವಂತೆ ಜೊತೆಗೆ ಸಿಬ್ಬಂದಿಗಳು ಸಮವಸ್ತ್ರ ಧರಿಸಿರಬೇಕು ಎಂದು ತಿಳಿಸಿದರಲ್ಲದೆ, ಆಸ್ಪತ್ರೆಗಳಲ್ಲಿ ಸ್ವಚ್ಚತೆಗೆ ಹೆಚ್ಚಿನ ಆದ್ಯತೆ ನೀಡಿ ಎಂದು ಸೂಚಿಸಿದರು.

ಶಾಲಾ ಕಾಲೇಜು ಆವರಣದಿಂದ 200 ಗಜದೊಳಗೆ ಯಾವುದೇ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡಲು ಅವಕಾಶವಿಲ್ಲ, ಈ ನಿಟ್ಟಿನಲ್ಲಿ ಕಾನೂನು ಉಲ್ಲಂಘಿಸಿದರೆ ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಆಸ್ಪತ್ರೆಗಳ ತ್ಯಾಜ್ಯ ವಿಲೇವಾರಿಗೆಆದ್ಯತೆ ನೀಡಿ ವೈಜ್ಞಾನಿಕವಾಗಿ ವಿಲೇ ಮಾಡಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಆರೋಗ್ಯ ಮತ್ತು ಸ್ವಚ್ಚತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಈ ನಿಟ್ಟಿನಲ್ಲಿ 50 ಕ್ಕಿಂತ ಹೆಚ್ಚು ಹೆಣ್ಣು ಮಕ್ಕಳಿರುವ ಪ್ರೌಢಶಾಲೆಗಳಲ್ಲಿ ಸ್ಯಾನಿಟರಿ ಪ್ಯಾಡ್ ವಿಲೇವಾರಿಗೆ ಅಗತ್ಯ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಅಪರ ಜಿಲ್ಲಾಧಿಕಾರಿ ಮಂಜುನಾಥ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ॥ ಅನಿಲ್, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ॥ ನಾಗಪ್ಪ, ಆರ್.ಸಿ.ಹೆಚ್. ಅಧಿಕಾರಿ ಡಾ॥ಶಿವಶಂಕರ್, ಡಾ॥ರಂಗಲಕ್ಷ್ಮಿ, ಮತ್ತಿತರರು ಹಾಜರಿದ್ದರು.

# ಮಕ್ಕಳಿಗೆ ಇಂಗ್ಲಿಷ್ ಕಲಿಕಾ ತರಬೇತಿ ಕಾರ್ಯಕ್ರಮ

**ಚಿಕ್ಕಮಗಳೂರು:** ಕನ್ನಡ ಭಾಷೆ ಉಸಿರಾದರೆ ಜೀವನಕ್ಕೆ ಬದುಕಲು ವ್ಯವಹಾರಕ್ಕೆಇಂಗ್ಲಿಷ್ ಭಾಷೆಇಂದುಅತ್ಯವಶ್ಯಕವಾಗಿದ್ದು, ಈ ನಿಟ್ಟಿನಲ್ಲಿ ಸರ್ಕಾರಆಂಗ್ಲಭಾಷೆ ಕಲಿಕೆಗೆ ಮುಂದಾಗಿದೆಎಂದು ಶಾಸಕ ಹೆಚ್.ಡಿ. ತಮ್ಮಯ್ಯ ತಿಳಿಸಿದರು.

ಅವರುಇಂದು ಹಿರೇಮಗಳೂರಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿಏರ್ಪಡಿಸಲಾಗಿದ್ದ ಮಕ್ಕಳಿಗೆ ಇಂಗ್ಲಿಷ್ ಕಲಿಕಾ ತರಬೇತಿಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳಿಗೆಇಂಗ್ಲಿಷ್ ಕಲಿಕಾ ತರಬೇತಿ ಆರಂಭಿಸಿರುವುದಕ್ಕೆ ಅಭಿನಂದಿಸಿದ ಅವರು, ದೇವಾಲಯಗಳಲ್ಲಿ ನಿತ್ಯ ಪೂಜೆ ನಡೆದು ಬಂದ ಭಕ್ತರಿಗೆಧಾರ್ಮಿಕ ಭಾವನೆಜೊತೆಗೆ ಒಳ್ಳೆಯ ಸಂಸ್ಕಾರವನ್ನು ಕಲಿಸಿದಾಗ ಮಾತ್ರದೇವಾಲಯ ನಿರ್ಮಿಸಿದ್ದಕ್ಕೆ ಸಾರ್ಥಕಎಂದರು.

ಅದೇರೀತಿಉತ್ತಮಗುಣಮಟ್ಟದ ಶಾಲೆ ನಿರ್ಮಾಣ ಮಾಡಿದರೆ ಸಾಲದು, ಪೂಜಾರಿಯಂತೆ ಶಾಲಾ ಶಿಕ್ಷಕರು ಕೆಲಸ ಮಾಡಬೇಕು. ಇದುಆದಾಗ ಒಳ್ಳೆಯ ಸುಶಿಕ್ಷಿತ, ಸಂಸ್ಕಾರವಂತದೇಶಭಕ್ತರಾಗಿ ವಿದ್ಯಾರ್ಥಿಗಳು ಹೊರಹೊಮ್ಮಲು ಸಾಧ್ಯಎಂದು ಹೇಳಿದರು.

ಕನ್ನಡರಾಜ್ಯೋತ್ಸವದ ಈ ಸಂದರ್ಭದಲ್ಲಿ ನಾಡು–ನುಡಿಗೆ ಮೊದಲ ಆದ್ಯತೆ ನೀಡಿದ್ದು, ಕನ್ನಡಕಲಿತ ನಂತರ ಬದುಕಲು ವ್ಯಾವಹಾರಿಕವಾಗಿಇಂಗ್ಲಿಷ್ ಭಾಷೆಯಅವಶ್ಯಕತೆಇದೆಎಂದು ತಿಳಿಸಿದರು.

ಶಿಕ್ಷಣದ ಜೊತೆಗೆ ಸಂಸ್ಕಾರಕಲಿತು, ಪೋಷಕರು, ಶಿಕ್ಷಕರು, ಶಾಲೆ, ಸರ್ಕಾರಕ್ಕೆಕೀರ್ತಿತರಬೇಕೆಂದು ಕಿವಿಮಾತು ಹೇಳಿದ ಅವರು, ಶಿಕ್ಷಣ, ಆರೋಗ್ಯ, ಆಹಾರ



ಭದ್ರತೆಒದಗಿಸುವುದೇ ಸರ್ಕಾರ ಹಾಗೂ ಜನಪ್ರತಿನಿಧಿಗಳ ಆದ್ಯಕರ್ತವ್ಯಎಂದರು.

ಜಿಲ್ಲೆಯಕುರುಬರ ಬೂದಿಹಾಳು ಮತ್ತುದೇವನೂರು ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ತಲಾ 50 ಲಕ್ಷರೂ ವೆಚ್ಚದಲ್ಲಿ ಈಗಾಗಲೇ ಸಚಿವಅಜಯ್ ಮಕಾನ್‌ರವರು ಜಿಲ್ಲಾಧಿಕಾರಿಗಳಿಗೆ ನೀಡುವುದಾಗಿ ಪತ್ರ ಬರೆದಿದ್ದಾರೆ. ಸಧ್ಯದಲ್ಲೇಡಿಪಿಆರ್ ಮುಗಿಸಿ ಇನ್ನುಆರು ತಿಂಗಳೊಳಗೆ ಈ ಎರಡು ಶಾಲೆಗಳಲ್ಲೂ ಆಂಗ್ಲ ಭಾಷೆ ಕಲಿಕಾ ತರಬೇತಿ ಆರಂಭಗೊಳ್ಳಲಾಗುತ್ತದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ರುದ್ರಪ್ಪ ಪ್ರಾಸ್ತವಿಕವಾಗಿ ಮಾತನಾಡಿ, ಮಕ್ಕಳ ಶೈಕ್ಷಣಿಕಅಭಿವೃದ್ಧಿಗಾಗಿ ಶಿಕ್ಷಕರು ಸಮಯ ಲೆಕ್ಕಿಸದೆಕರ್ತವ್ಯ ನಿರ್ವಹಿಸುತ್ತಿರುವ ಬಗ್ಗೆ ಶ್ಲಾಘಿಸಿದರು.

ವಿದ್ಯಾರ್ಥಿಗಳ ಭವಿಷ್ಯರೂಪಿಸಲು ಇಂಗ್ಲಿಷ್ ಕಲಿಕಾ ತರಬೇತಿಕಾರ್ಯಕ್ರಮತುಂಬಾಉಪಯುಕ್ತವಾಗಿದ್ದು, ಮಾತೃಭಾಷೆಕನ್ನಡವಾದರೂ ವ್ಯಾವಹಾರಿಕವಾಗಿ ಮುಂದಿನ ಬದುಕಿಗೆಇಂಗ್ಲಿಷ್‌ಅಗತ್ಯವಾಗಿದ್ದು, ಇತರ ಪಠ್ಯಗಳನ್ನು ಆಂಗ್ಲಭಾಷೆಯಲ್ಲಿಕಲಿತಾಗ ಹೆಚ್ಚಿನಜ್ಞಾನ ಪಡೆಯಲು ಸಾಧ್ಯಎಂದರು.

ಕಾರ್ಯಕ್ರಮದಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಉಪಾಧ್ಯಕ್ಷೆ ಮಹಾಲಕ್ಷ್ಮಿ ವಹಿಸಿದ್ದರು. ಕಾಂಗ್ರೆಸ್ ಮುಖಂಡರಾದರಾಮಚಂದ್ರ, ವೆಂಕಟೇಶ್, ಗಂಗಾಧರ್, ಶಾಲಾ ಶಿಕ್ಷಕರ ಸಂಘದಅಧ್ಯಕ್ಷ ಶ್ರೀನಿವಾಸ್, ಪರಮೇಶ್ವರಪ್ಪ, ಮುಖ್ಯ ಶಿಕ್ಷಕಿ ಶಿವಮ್ಮ, ಸಿಆರ್‌ಪಿ ಪೂರ್ಣೇಶ್, ಶಿಕ್ಷಕಿಯರಾದ ನಂದಿನಿ, ವರಗದವಲ್ಲಿ, ಫಿಲೋಮಿನ ಮತ್ತಿತರರು ಉಪಸ್ಥಿತರಿದ್ದರು.

## ಸ್ವಯಂ ರಕ್ಷಣಾ ಕೌಶಲ್ಯ ತರಬೇತಿಗೆ ಅರ್ಜಿ ಆಹ್ವಾನ

**ಬಳ್ಳಾರಿ:** ಪ್ರಸ್ತಕ ಸಾಲಿಗೆ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ 6, 7, 8, 9 ಮತ್ತು 11 ನೇ ತರಗತಿಯ ವಿದ್ಯಾರ್ಥಿನಿಯರಿಗೆ ಕರಾಟೆ – ಸ್ವಯಂ ರಕ್ಷಣಾ ಕೌಶಲ್ಯ ತರಬೇತಿಯನ್ನು ವಾರದಲ್ಲಿ ಎರಡು ದಿನಗಳಂತೆ 6 ತಿಂಗಳ ತರಬೇತಿ ನೀಡುವ ನಿಟ್ಟಿನಲ್ಲಿ ಅರ್ಹ ಮಹಿಳಾ ಮತ್ತು ಪುರುಷ (ಮಹಿಳೆಯರಿಗೆ ಮೊದಲ ಆದ್ಯತೆ) ತರಬೇತುದಾರರಿಂದ ಅರ್ಜಿ ಆಹ್ವಾನಿಸಲಾಗಿದೆ.ತರಬೇತಿ ನೀಡುವ ತರಬೇತುದಾರರಿಗೆ ಸಂಭಾವನೆ ರೂ.750 ಮತ್ತು ಪ್ರಯಾಣ ವೆಚ್ಚ ರೂ.100 ರಂತೆ ನೀಡಲಾಗುತ್ತಿದ್ದು, ಆಸಕ್ತ ಕರಾಟೆ–ಸ್ವಯಂ ರಕ್ಷಣಾ ಕೌಶಲ್ಯ ತರಬೇತಿ ಪಡೆದ ಮಹಿಳೆ ಮತ್ತು ಪುರುಷ ತರಬೇತುದಾರರು ಅರ್ಜಿ ಸಲ್ಲಿಸಬಹುದಾಗಿದೆ.ಅಧಿಸೂಚನೆ ಮತ್ತು ವಿವರಗಳಿಗಾಗಿ ಆನ್ ಲೈನ್ ವೆಬ್ ಸೈಟ್ http://dom.karnataka.gov.in ಗೆ ಭೇಟಿ ನೀಡಬಹುದು.ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಚೇರಿ ಅಥವಾ ದೂ.08392–200125/224 ಹಾಗೂ ಜಿಲ್ಲೆಯ ಅಲ್ಪಸಂಖ್ಯಾತರ ತಾಲ್ಲೂಕು ಮಾಹಿತಿ ಕೇಂದ್ರಗಳಲ್ಲಿ (ಬಳ್ಳಾರಿ–8310321101, ಸಂಡೂರು–9036925966/ 8660575061 ಮತ್ತು ಸಿರುಗುಪ್ಪ–9148889975) ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರಾಜು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇರ ಸಂದರ್ಶನ

**ಬಳ್ಳಾರಿ:** ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಿಂದ ನ.07 ರಂದು ಬೆಳಿಗ್ಗೆ 10.00 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ನಗರದ ಹಳೆಯ ತಾಲ್ಲೂಕು ಕಚೇರಿ ಆವರಣದಲ್ಲಿನ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನ ಆಯೋಜಿಸಲಾಗಿದೆ.

ನೇರ ಸಂದರ್ಶನದಲ್ಲಿ ಇನ್ಸ್ಟಾ ಕಾರ್ಟ್ ಸರ್ವೀಸಸ್ ಪ್ರೈವೇಟ್ ಲಿಮಿಟೆಡ್ (INSTAKART SERVICES PRIVATE LIMITED) ಎಂಬ ಕಂಪನಿಯಲ್ಲಿ ಖಾಲಿ ಇರುವ ಡೆಲಿವರಿ ಬಾಯ್ ಮತ್ತು ಕಂಪ್ಯೂಟರ್ ಆಪರೇಟರ್–01 ಹುದ್ದೆಗಳಿಗೆ ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಾಗುವುದು. ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕ ಇರುವುದಿಲ್ಲ.

ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ ಮತ್ತು ಯಾವುದೇ ಪದವಿ ವಿದ್ಯಾರ್ಹತೆ ಹೊಂದಿದ ಅಭ್ಯರ್ಥಿಗಳು ಭಾಗವಹಿಸಬಹುದು (ಕಡ್ಡಾಯವಾಗಿ ಬೈಕ್ ಮತ್ತು ಸ್ಮಾರ್ಟ್ ಮೊಬೈಲ್ ಹೊಂದಿರಬೇಕು).

ಆಸಕ್ತ ಅಭ್ಯರ್ಥಿಗಳು ತಮ್ಮ ಮೂಲ ಆಧಾರ್ ಕಾರ್ಡ್ ಪ್ರತಿ, ಸ್ವ–ವಿವರ ಪ್ರತಿ (ಬಯೋಡೇಟಾ) ಗಳೊಂದಿಗೆ ಭಾಗವಹಿಸಬಹುದು. ಈ ಅವಕಾಶ ಸದುಪಯೋಗ ಪಡೆದುಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಅಥವಾ ಮೊ.8277000619, 8197191981 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ಪಿ.ಎಸ್.ಹಟ್ಟಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುರುಹಿನ ಶೆಟ್ಟಿ ಸಂಘದಿಂದ ವಿದ್ಯಾರ್ಥಿ ವೇತನಕ್ಕೆ ಅರ್ಜಿಆಹ್ವಾನ

**ಚಿಕ್ಕಮಗಳೂರು:** ಕಳೆದ ಮಾರ್ಚ್‌ಏಪ್ರಿಲ್‌ನಲ್ಲಿ ನಡೆದ ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಯಲ್ಲಿ ಶೇ.90 ಕ್ಕಿಂತಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮತ್ತುವಿದ್ಯಾರ್ಥಿ ವೇತನ ನೀಡಲು ನ.15 ರೊಳಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆಎಂದುಜಿಲ್ಲಾಕುರುಹಿನ ಶೆಟ್ಟಿ ಮಹಿಳಾ ಸಂಘದಅಧ್ಯಕ್ಷೆ ಸಿ.ಎಸ್ ಪುಷ್ಪರಾಜೇಂದ್ರ ತಿಳಿಸಿದ್ದಾರೆ.ಪತ್ರಿಕಾ ಹೇಳಿಕೆಯಲ್ಲಿ ಈ ವಿಷಯ ತಿಳಿಸಿರುವ ಅವರು, ಪ್ರೋತ್ಸಾಹಧನ ಮತ್ತು ವಿದ್ಯಾರ್ಥಿವೇತನ ನೀಡಲುಕುರುಹಿನ ಶೆಟ್ಟಿ ಮಹಿಳಾ ಸಂಘದ 'ಜೊತೆಗೆ ಶ್ರೀ ನೀಲಕಂಠೇಶ್ವರ ಮಹಿಳಾ ಸಂಘ ಸಹಯೋಗದಲ್ಲಿ ನಿರ್ಧರಿಸಲಾಗಿದ್ದು, ನವೆಂಬರ್ ತಿಂಗಳಲ್ಲಿ ನೀಡುವ ವಿದ್ಯಾರ್ಥಿವೇತನ ವಿತರಣೆಗೆಅರ್ಹ ವಿದ್ಯಾರ್ಥಿಗಳಿಂದ ಭರ್ತಿಮಾಡಿದ ಅರ್ಜಿಗಳನ್ನು ಸಂಘದಕಚೇರಿಗೆ ನವೆಂಬರ್ 15 ರೊಳಗೆ ಸಲ್ಲಿಸುವಂತೆ ಮನವಿ ಮಾಡಿದ್ದಾರೆ.ಅರ್ಜಿ ಫಾರಂಗಳು ಸಂಘದ ಕಚೇರಿಗಳಲ್ಲಿ ಕಚೇರಿ ವೇಳೆಯಲ್ಲಿ ಪಡೆಯಬಹುದಾಗಿದ್ದು, ಜಿಲ್ಲಾಕುರುಹಿನ ಬಳಗ ಅಥವಾಕುರುಹಿನ ಶೆಟ್ಟಿ ಬ್ರಿಗೇಡ್ ವಾಟ್ಸಾಪ್‌ಗ್ರೂಪ್‌ನಿಂದಅರ್ಜಿ ಫಾರಂನ್ನುಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದ್ದು, ಹೆಚ್ಚಿನ ವಿವರಗಳಿಗೆ 8762501074, 9448703156, 948256209 ಈ ಮೊಬೈಲ್ ಸಂಖ್ಯೆಗಳನ್ನು ಸಂಪರ್ಕಿಸಬೇಕೆಂದು ವಿನಂತಿಸಿದ್ದಾರೆ.

## ದಾವಣಗೆರೆ ಗೋದಾಮಿನಲ್ಲಿ ಸಿಕ್ಕ ಕಳಪೆ ಅಕ್ಕಿ ಕುರಿತು ಸ್ಪಷ್ಟನೆ

**ದಾವಣಗೆರೆ :** ಇತ್ತೀಚೆಗೆ ಲೋಕಾಯುಕ್ತ ದಾಳಿಯಲ್ಲಿ ಕರ್ನಾಟಕ ರಾಜ್ಯ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ ದಾವಣಗೆರೆ ಗೋದಾಮಿನಲ್ಲಿ ಸಿಕ್ಕ ಕಳಪೆ ಅಕ್ಕಿಯು ಅನ್ನಭಾಗ್ಯ ಅಕ್ಕಿಯಾಗಲಿ ಅಥವಾ ಮಧ್ಯಾಹ್ನದ ಬಿಸಿಯೂಟ ಯೋಜನೆಯ ಅಕ್ಕಿಯಾಗಲಿ ಆಗಿರುವುದಿಲ್ಲ.

# ಜೀವನ ಪ್ರಮಾಣ ಪತ್ರಕ್ಕೆ ಮನೆಯಿಂದಲೇ ಅರ್ಜಿ ಸಲ್ಲಿಸಬಹುದು

**ಚಿಕ್ಕಮಗಳೂರು:** ಪಿಂಚಣಿದಾರರು ವರ್ಷಕ್ಕೊಮ್ಮೆ ಸಲ್ಲಿಸಬೇಕಾದ ತಮ್ಮ ಜೀವನ ಪ್ರಮಾಣ ಪತ್ರವನ್ನು ಮನೆಯಿಂದಲೇ ಕುಳಿತು ಅರ್ಜಿ ಸಲ್ಲಿಸಿ ಪಡೆಯಬಹುದಾಗಿದೆ ಎಂದು ಭಾರತ ಸರ್ಕಾರದ ಪಿಂಚಣಿದಾರರ ಕ್ಷೇಮಾಭಿವೃದ್ಧಿ ಪ್ರಾಧಿಕಾರದ ಮುಖ್ಯಸ್ಥರಾದ ಶ್ರೀಮತಿ ದಿವ್ಯ ಐಎಎಸ್ ಅವರು ತಿಳಿಸಿದರು.

ಅವರು ನಗರದ ಹೊಸಮನೆ ಬಡಾವಣೆಯಲ್ಲಿರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಶಾಖೆಯಲ್ಲಿ ಆಯೋಜಿಸಲಾಗಿದ್ದ ಡಿಜಿಟಲ್ ಲೈಫ್ ಸರ್ಟಿಫಿಕೇಟ್ ಅಭಿಯಾನ ಕಾರ್ಯಕ್ರಮವನ್ನು

ಉದ್ಘಾಟಿಸಿ ಮಾತನಾಡಿ ಪಿಂಚಣಿದಾರರು ಪ್ರತಿ ವರ್ಷ ನವಂಬರ್ ವೇಳೆಯಲ್ಲಿ ತಮ್ಮ ಜೀವನ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ನೀಡಬೇಕಾಗಿದೆ ಇದು ಈಗ ಬಹಳ ಸರಳವಾಗಿದ್ದು ಮನೆಯಲ್ಲಿಯೇ ಕುಳಿತು ತಮ್ಮ ಜೀವನ ಪ್ರಮಾಣ ಪತ್ರಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ತಿಳಿಸಿದರು.

ಮನೆಯಿಂದಲೇ ಕುಳಿತು ಜೀವನ ಪ್ರಮಾಣ ಪತ್ರಕ್ಕೆ ಅರ್ಜಿ ಸಲ್ಲಿಸಿ ಜೀವನ ಪ್ರಮಾಣ ಪತ್ರವನ್ನು ಪಡೆದು ಬಹಳ ಸುಲಭವಾಗಿ ಸರ್ಕಾರಕ್ಕೆ ಸಲ್ಲಿಸಿ ಪಿಂಚಣಿಯನ್ನು ಪಡೆಯುವಂತಹ ಯೋಜನೆಯನ್ನು ಭಾರತ ಸರ್ಕಾರ ಪರಿಚಯಿಸಿದ್ದು ಇದರ ಸದುಪಯೋಗವನ್ನು ಪ್ರತಿಯೊಬ್ಬ




ಪಿಂಚಣಿದಾರರು ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಅಲ್ಲದೆ ಕಾರ್ಯಕ್ರಮದಲ್ಲಿ ಖಾಸಗಿ ಕಂಪನಿಯ ವ್ಯವಸ್ಥಾಪಕರಾದ ರವೀಂದ್ರ ಕೌಶಿಕ್ ಪಿಂಚಣಿ ದಾರರನ್ನು ಉದ್ದೇಶಿಸಿ ಮಾತನಾಡಿ ಹಲವು ಸಮಸ್ಯೆಗಳಿಗೆ ಸಕಾರಾತ್ಮಕವಾಗಿ ಉತ್ತರಿಸಿ, ಸಲಹೆ ನೀಡಿ ಪಿಂಚಣಿ ದಾರಾದ ಮಾನಸಿಕ ನೆಮ್ಮದಿಯನ್ನು ಹಿಗ್ಗಿಸಿದರು.

ಕಾರ್ಯಕ್ರಮದಲ್ಲಿ ಎಸ್ ಬಿ ಐ ಬ್ಯಾಂಕ್ ನ ಪ್ರಾದೇಶಿಕ ವ್ಯವಸ್ಥಾಪಕರಾದ ರವಿ ಟಿಎಂ, ಮೂಳೆ ಮತ್ತು ಕೀಲು ತಜ್ಞರಾದ ಡಾಕ್ಟರ್ ಯಶ್ವರ್ಧನ್, ಜಿಲ್ಲಾ ಪಿಂಚಣಿದಾರರ ಕ್ಷೇಮಾಭಿವೃದ್ಧಿ ಸಂಘದ ಗೋಪಾಲಕೃಷ್ಣ, ಜಿಲ್ಲಾ ಖಜಾನಾಧಿಕಾರಿ ಓಂಕಾರಪ್ಪ ಹಾಗೂ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಜಿಲ್ಲಾ ಪಿಂಚಣಿದಾರರ ಸಂಘದ ಅಧ್ಯಕ್ಷರಾದ ಟಿವಿ ಕಾಮತ್ ಸೇರಿದಂತೆ ಬ್ಯಾಂಕ್ ನ ಸಿಬ್ಬಂದಿಗಳು ಹಾಗೂ ಪಿಂಚಣಿದಾರರು ಉಪಸ್ಥಿತರಿದ್ದರು.

# ಉಚಿತ ಆರೋಗ್ಯ ತಪಾಸಣಾ ಶಿಬಿರ ಆರೋಗ್ಯವೇ ಅತ್ಯಮೂಲ್ಯ ಧನ ಎಂದು ಎಂ. ಹರೀಶ್ ನಾಯ್ಕ್

**ಶಿವಮೊಗ್ಗ:** ರಾಷ್ಟ್ರ ನಿರ್ಮಾಣದ ಅಭಿಯಾನಿ ಬಾಳೆಗಾವಿ ಶ್ರೀ ಲಕ್ಷ್ಮೀ ಸೇವಾ ಟ್ರಸ್ಟ್ ಹಾಗೂ ಬಿಜೆಪಿ ನಗರ ಘಟಕದ ಸಂಯುಕ್ತಾಶ್ರಯದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಳ್ಳಿಹಿಟ್ಟಿ ಕ್ರಾಂತ್ ಶಾಲಾ ಆವರಣದಲ್ಲಿ ಆಯೋಜಿಸಲಾಯಿತು.

ಈ ಶಿಬಿರವನ್ನು ರಾಜ್ಯ ಅಲ್ಪಸಂಖ್ಯಾತರ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಶ್ರೀಮತಿ ವಿಜಯೇಂದ್ರ ಅಪ್ಪಣ್ಣವರ ಪ್ರಮುಖ ಪ್ರಾಯೋಜಕತ್ವದಲ್ಲಿ ನಡೆಸಲಾಯಿತು.

ಶಿಬಿರದಲ್ಲಿ ಹೃದಯ ತಪಾಸಣೆ, ರಕ್ತದ ಒತ್ತಡ, ಮಧುಮೇಹ, ಕಣ್ಣಿನ ತಪಾಸಣೆ, ಕಿವಿ–ಮೂಗು–ಗಂಟಲು (ಇಓಖಿ), ಹಲ್ಲು ತಪಾಸಣೆ ಸೇರಿದಂತೆ ಹಲವು ವಿಭಾಗಗಳ ವೈದ್ಯಕೀಯ ಸೇವೆಗಳನ್ನು ಸ್ಥಳದಲ್ಲೇ ಗ್ರಾಮಸ್ಥರಿಗೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಬಿಜೆಪಿ ನಗರಾಧ್ಯಕ್ಷ ಜಗದೀಶ್ ಹಾಗೂ ಶ್ರೀ ಲಕ್ಷ್ಮೀ ಸೇವಾ ಟ್ರಸ್ಟ್ ಸಂಸ್ಥಾಪಕ ಎಂ. ಹರೀಶ್ ನಾಯ್ಕ್ ಅವರು ಶಿಬಿರದ ಮಹತ್ವವನ್ನು ವಿವರಿಸಿದರು.

ಎಂ. ಹರೀಶ್ ನಾಯ್ಕ್ ಮಾತನಾಡುತ್ತಾ



"ಆರೋಗ್ಯವೆಂಬುದು ಪ್ರತಿಯೊಬ್ಬರಿಗೂ ಅತ್ಯಮೂಲ್ಯ ಧನ. ನಾವು ದಿನನಿತ್ಯದ ಜೀವನದಲ್ಲಿ ಸಣ್ಣಪುಟ್ಟ ಆರೋಗ್ಯ ಸಮಸ್ಯೆಗಳನ್ನು ನಿರ್ಲಕ್ಷಿಸುತ್ತೇವೆ, ಆದರೆ ಇಂತಹ ಶಿಬಿರಗಳ ಮೂಲಕ ನಾವು ಅವುಗಳನ್ನು ಗುರುತಿಸಿ ತಕ್ಷಣ ಚಿಕಿತ್ಸೆ ಪಡೆಯಬಹುದು. ಯಾರಿಗಾದರೂ ತುರ್ತು ಆರೋಗ್ಯ ಸಹಾಯ ಬೇಕಾದರೆ ನಮ್ಮ ಟ್ರಸ್ಟ್ ಅವರ ನೆರವಿಗೆ ಸದಾ ಸಿದ್ಧವಾಗಿದೆ," ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶಿಬಿರದ ಪ್ರಯೋಜನ ಪಡೆದುಕೊಂಡರು.

# ಕನ್ನಡ ಮತ್ತು ಸಂಸ್ಕೃತಿ ಇಲಾಖೆ: ಅರ್ಜಿ ಸಲ್ಲಿಕೆಯ ಅವಧಿ ವಿಸ್ತರಣೆ

**ಬಳ್ಳಾರಿ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಮಕ್ಕಳು ಮತ್ತು ಯುವಜನರಲ್ಲಿರುವ ಕಲಾ ಪ್ರತಿಭೆ ಗುರುತಿಸಿ, ಅವರಿಗೆ ಉತ್ತೇಜನ ನೀಡುವ ಮತ್ತು ತಮ್ಮ ಕಲಾ ನೈಪುಣ್ಯವನ್ನು ವೃದ್ಧಿಗೊಳಿಸುವಂತೆ ಪ್ರೋತ್ಸಾಯಿಸಲು ಜಿಲ್ಲಾ ಮಟ್ಟದ ಕಲಾಪ್ರತಿಭೋತ್ಸವ ಕಾರ್ಯಕ್ರಮಕ್ಕಾಗಿ ವಿವಿಧ ಪ್ರಕಾರಗಳ ಪ್ರತಿಭೆಗಳಿಗೆ ಅರ್ಜಿ ಆಹ್ವಾನಿಸಲಾಗಿತ್ತು. ಅರ್ಜಿ ಸಲ್ಲಿಸುವ ಅವಧಿಯನ್ನು ನ.20 ರ ವರೆಗೆ ವಿಸ್ತರಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಇದೇ ನ.26 ಮತ್ತು 27 ರಂದು ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಜಿಲ್ಲಾಮಟ್ಟದ ಕಲಾಪ್ರತಿಭೋತ್ಸವ ಕಾರ್ಯಕ್ರಮ ಆಯೋಜಿಸಲಾಗಿದೆ.

ಬಾಲಪ್ರತಿಭೆ ಹಾಗೂ ಕಿಶೋರ ಪ್ರತಿಭೆ ವಿಭಾಗದಲ್ಲಿ ಏಕ ವ್ಯಕ್ತಿಯ ಸ್ಪರ್ಧೆಯಲ್ಲಿ ಶಾಸ್ತ್ರೀಯ ನೃತ್ಯ, ಸುಗಮ ಸಂಗೀತ, ಚಿತ್ರಕಲೆ, ಜನಪದ ಗೀತೆ, ಕರ್ನಾಟಕ/ ಹಿಂದೂಸ್ತಾನಿ ವಾದ್ಯ ಸಂಗೀತ, ಹಿಂದೂಸ್ತಾನಿ ಮತ್ತು ಶಾಸ್ತ್ರೀಯ ಸಂಗೀತ ಗಾಯನ ಸೇರಿದಂತೆ ಹಲವಾರು ಕಲಾ ಪ್ರಕಾರಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಬಾಲ ಪ್ರತಿಭೆ 08 ರಿಂದ 14 ವರ್ಷದ ಒಳಗಿನ ಹಾಗೂ ಕಿಶೋರ ಪ್ರತಿಭೆ 14 ರಿಂದ 18 ವರ್ಷದ ಒಳಗಿನ ಯುವ ಪ್ರತಿಭೆ ವಿಭಾಗದಲ್ಲಿ ಏಕ ವ್ಯಕ್ತಿಯ ಸ್ಪರ್ಧೆಯಲ್ಲಿ ನನ್ನ ಮೆಚ್ಚಿನ ಸಾಹಿತಿ (ಆಶುಭಾಷಣ), ಶಾಸ್ತ್ರೀಯ ನೃತ್ಯ, ಸುಗಮ ಸಂಗೀತ, ಚಿತ್ರಕಲೆ, ಕರ್ನಾಟಕ/ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಹಾಗೂ ವಾದ್ಯ ಸಂಗೀತ ಕಲಾ ಪ್ರಕಾರಗಳಿವೆ.

ಯುವ ಪ್ರತಿಭೆ 18 ರಿಂದ 30 ವರ್ಷಕ್ಕಿಂತ ಕಡಿಮೆಯಾಗಿರಬೇಕು. ಸಮೂಹ ಸ್ಪರ್ಧೆಯಲ್ಲಿ ನಾಟಕ ಕಲಾ ಪ್ರಕಾರ ಇದ್ದು, ಈ ಸ್ಪರ್ಧೆಯಲ್ಲಿ ಪಾಲ್ಗೊಳ್ಳುವ ತಂಡದ ಸದಸ್ಯರ ಸಂಖ್ಯೆ ಕನಿಷ್ಠ 10 ಮತ್ತು ಗರಿಷ್ಠ 15 ಮೀರಬಾರದು.

ಸ್ಪರ್ಧೆಯಲ್ಲಿ ಭಾಗವಹಿಸುವ ಸ್ಪರ್ಧಿಗಳು ವಯಸ್ಸಿನ ದೃಢೀಕರಣಕ್ಕಾಗಿ ದಾಖಲೆಗಳನ್ನು ತಾವು ವ್ಯಾಸಂಗ ಮಾಡುತ್ತಿರುವ ವಿದ್ಯಾ ಸಂಸ್ಥೆಯಿಂದ ಪಡೆದು ಅರ್ಜಿಯ ಜೊತೆಗೆ ಲಗತ್ತಿಸಬೇಕು. ಒಬ್ಬರಿಗೆ ಒಂದು ಕಲಾ ಪ್ರಕಾರದಲ್ಲಿ ಮಾತ್ರ ಸ್ಪರ್ಧಿಸಲು ಅವಕಾಶವಿದ್ದು, ಶಾಲಾ ಮುಖ್ಯಸ್ಥರು ತಮ್ಮ ಶಾಲಾ ಮೂಲಕ ಸ್ಪರ್ಧಿಗಳು ಅರ್ಜಿ ಸಲ್ಲಿಸುವಾಗ ಪ್ರತಿ ಕಲಾ ಪ್ರಕಾರ ಹಾಗೂ ಪ್ರತಿ ವಿಭಾಗದ ಸ್ಪರ್ಧಿಗಳ ಜನ್ಮ ದಿನಾಂಕವನ್ನು ದೃಢೀಕರಿಸಿದ ಪಟ್ಟಿಯನ್ನು ಪ್ರತ್ಯೇಕವಾಗಿ ಕಳುಹಿಸಬೇಕು.

ಖಾಸಗಿ ಸ್ಪರ್ಧಿಯಾಗಿದ್ದಲ್ಲಿ ಶಾಲಾ–ಕಾಲೇಜಿನ ಜನ್ಮ ದಿನಾಂಕ ದೃಢೀಕರಣ ಪತ್ರ ಅಥವಾ ಪಂಚಾಯಿತಿ, ಪುರಸಭೆ, ನಗರಸಭೆ ಕಚೇರಿಗಳಿಂದ ನೀಡುವ ಜನನ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.

ಸ್ಪರ್ಧೆಗಳಲ್ಲಿ ಭಾಗವಹಿಸುವವರು ಅರ್ಜಿಯನ್ನು ನ.20 ರೊಳಗಾಗಿ ನಗರದ ಡಾ.ರಾಜ್‌ಕುಮಾರ್ ರಸ್ತೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು, ದೂ.08392–275182 ಗೆ ಅಥವಾ ಈ ವಿಳಾಸಕ್ಕೆ ನೇರವಾಗಿ ಅಂಚೆಯ ಮೂಲಕ ಸಲ್ಲಿಸಬಹುದು.ನಿಯಮಗಳು ಮತ್ತು ನಿಬಂಧನೆಗಳಿದ್ದಲ್ಲಿ ಕಚೇರಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನ.8 ರಂದು ಶ್ರೀ ಕನಕದಾಸ ಜಯಂತಿ

**ಚಿಕ್ಕಮಗಳೂರು:** ಜಿಲ್ಲಾಡಳಿತದ ವತಿಯಿಂದ ನವೆಂಬರ್ 8 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಕುವೆಂಪು ಕಲಾಮಂದಿರದಲ್ಲಿ ಶ್ರೀ ಕನಕದಾಸರ ಜಯಂತಿ ಆಚರಣೆ ನಡೆಯಲಿದ್ದು, ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ. ಜಾರ್ಜ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ವಿಧಾನ ಪರಿಷತ್ ಮಾನ್ಯ ಉಪ ಸಭಾಪತಿಗಳಾದ ಶ್ರೀ ಎಂ.ಕೆ.ಪ್ರಾಣೇಶ್, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ.ಡಿ.ರಾಜೇಗೌಡ, ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ಶ್ರೀನಿವಾಸ್ ಭಾಗವಹಿಸುವರು.

ಶಾಸಕರಾದ ಹೆಚ್.ಡಿತಮ್ಮಯ್ಯ ಅಧ್ಯಕ್ಷತೆ ವಹಿಸಲಿದ್ದು, ಉಡುಪಿ–ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದರಾದ ಕೋಟ ಶ್ರೀನಿವಾಸ ಪೂಜಾರಿ, ರಾಜ್ಯಸಭೆ ಸದಸ್ಯರಾದ ಜೈರಾಮ್ ರಮೇಶ್, ಹಾಸನ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೇಯಸ್ ಎಂ.ಪಟೇಲ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಶಾಸಕರುಗಳಾದ ಜಿ.ಹೆಚ್.ಶ್ರೀನಿವಾಸ್, ಕೆ.ಎಸ್.ಆನಂದ್, ನಯನ ಮೋಟಮ್ಮ, ವಿಧಾನ ಪರಿಷತ್ ಸದಸ್ಯರುಗಳಾದ ಸಿ.ಟಿ.ರವಿ, ಡಾ.ಧನಂಜಯ ಸರ್ಜಿ, ಡಾ.ಆರತಿ ಕೃಷ್ಣ, ಭದ್ರಾ ಕಾಡಾ ಅಧ್ಯಕ್ಷರಾದ ಡಾ.ಕೆ.ಪಿ.ಅಂಶುಮಂತ್, ಕ.ರಾ. ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷರಾದ ಬಿ.ಹೆಚ್.ಹರೀಶ್, ನಗರಸಭೆ ಅಧ್ಯಕ್ಷೆ ಬಿ.ಶೀಲಾ ದಿನೇಶ್ ಪಾಲ್ಗೊಳ್ಳುವರು.

## ಉಚಿತ ತರಬೇತಿ

**ಚಿಕ್ಕಮಗಳೂರು:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಫಾಸ್ಟ್ ಫುಡ್ ಆಹಾರ ತಯಾರಿಕೆ ಕುರಿತ 12 ದಿನಗಳ ಉಚಿತ ತರಬೇತಿಯನ್ನು ಹಮ್ಮಿಕೊಳ್ಳಲಾಗಿದ್ದು, ಗ್ರಾಮೀಣ ಭಾಗದ ಆಸಕ್ತ ನಿರುದ್ಯೋಗಿ ಯುವಕ–ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು 18 ರಿಂದ 50 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್‌ನ್ನು ಕಡ್ಡಾಯವಾಗಿ ಹೊಂದಿರಬೇಕು. ಆಸಕ್ತರು ತಮ್ಮ ಹೆಸರನ್ನು ನೋಂದಾಯಿಸಲು ನವೆಂಬರ್ 18 ಕೊನೆಯ ದಿನ. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗೆ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9740982585, 9241482541, 9113880324 ಅನ್ನು ಸಂಪರ್ಕಿಸಬಹುದು ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರತಿಭಾವಂತ ಮಕ್ಕಳಿಗೆ ಜಿಲ್ಲಾ ಮಟ್ಟದ ಸ್ಪರ್ಧೆ

**ಚಿಕ್ಕಮಗಳೂರು:** ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಬೆಂಗಳೂರಿನ ಬಾಲಭವನ ಸೊಸೈಟಿ ವತಿಯಿಂದ ನಗರದ ಬೇಲೂರು ರಸ್ತೆಯ ಜಿಲ್ಲಾ ಸ್ತ್ರೀಶಕ್ತಿ ಭವನದಲ್ಲಿ ನವೆಂಬರ್ 10 ರಂದು ಮಕ್ಕಳ ದಿನಾಚರಣೆ ಅಂಗವಾಗಿ 9 ರಿಂದ 16 ವರ್ಷದ ಪ್ರತಿಭಾವಂತ ಮಕ್ಕಳಿಗೆ ಜಿಲ್ಲಾ ಮಟ್ಟದ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.ಚಿತ್ರಕಲೆ, ಕರಕುಶಲೆ, ಜೇಡಿಮಣ್ಣಿನ ಕಲೆ (ಮೂರರಲ್ಲೂ ಕಡ್ಡಾಯವಾಗಿ ಭಾಗವಹಿಸಬೇಕು) (ಕರಕುಶಲ ಸಾಮಗ್ರಿಗಳನ್ನು ತಂದು ಸ್ಥಳದಲ್ಲೇ ತಯಾರಿಸುವುದು) ಕಥೆ, ಕವನ, ಪ್ರಬಂಧ ಬರೆಯುವುದು (ಮೂರರಲ್ಲೂ ಕಡ್ಡಾಯವಾಗಿ ಭಾಗವಹಿಸಬೇಕು) ಶಾಸ್ತ್ರೀಯ ನೃತ್ಯ, ಜಾನಪದ ನೃತ್ಯ, ಕರ್ನಾಟಕ ಹಾಗೂ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ವಾದ್ಯ ಸಂಗೀತ, ಯಕ್ಷಗಾನ, ಯಕ್ಷಿಣಿ ಪ್ರದರ್ಶನ, ಸುಗಮ ಸಂಗೀತ, ಏಕಪಾತ್ರಾಭಿನಯ, ಯೋಗನೃತ್ಯ, ಮ್ಯಾಜಿಕ್.. ಇತ್ಯಾದಿ ಯಾವುದಾದರೊಂದು ಕಲೆಯನ್ನು ಮಾತ್ರ ಪ್ರದರ್ಶಿಸಲು ಅವಕಾಶವಿದೆ. (ಗುಂಪು ಪ್ರದರ್ಶನಕ್ಕೆ ಅವಕಾಶ ಇರುವುದಿಲ್ಲ) ವಿಜ್ಞಾನಕ್ಕೆ ಸಂಬಂಧಿಸಿದಂತೆ ಒಂದು ವಿಷಯದ ಬಗ್ಗೆ ಮಾದರಿ ಪ್ರದರ್ಶನ ಹಾಗೂ ವಿವರಣೆ ಮತ್ತು ವಿಜ್ಞಾನ ಕ್ಷೇತ್ರಕ್ಕೆ ಸಂಬಂಧಿಸಿದಂತೆ ತೀರ್ಪುಗಾರರ ಇನ್ನಿತರೆ ಪ್ರಶ್ನೆಗಳಿಗೆ ಉತ್ತರ. (ಮಕ್ಕಳು ಪ್ರತ್ಯೇಕ ಮಾದರಿ ಪ್ರದರ್ಶನ ಮಾಡುವುದು ಕಡ್ಡಾಯ) ಅಂಗವಿಕಲ, ಬುಡಕಟ್ಟು ಪ್ರದೇಶದ ಮಕ್ಕಳಿಗಾಗಿ ಮೇಲಿನ ಯಾವುದೇ ಪ್ರಕಾರದಲ್ಲಿ ಭಾಗವಹಿಸಿದ ಮಕ್ಕಳಿಗೆ ಸ್ಪರ್ಧೆಗಳನ್ನು ಮ್ಮಿಕೊಳ್ಳಲಾಗಿದೆ.ಪ್ರಥಮವಾಗಿ ನೋಂದಣಿ ಮಾಡಿಕೊಂಡವರಿಗೆ ಮೊದಲ ಅವಕಾಶ ಕಲ್ಪಿಸಲಾಗುವುದು. ನಂತರ ಬಂದವರಿಗೆ ಅವಕಾಶವಿರುವುದಿಲ್ಲ. ಆಸಕ್ತಿಯುಳ್ಳವರು ನವೆಂಬರ್ 7 ರೊಳಗೆ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳುವುದು. ಸ್ಪರ್ಧೆಯಲ್ಲಿ ಭಾಗವಹಿಸುವ ಮಕ್ಕಳು ಸ್ತ್ರೀಶಕ್ತಿ ಭವನದಲ್ಲಿ ನವೆಂಬರ್ 10 ರಂದು ಬೆಳಿಗ್ಗೆ 10 ಗಂಟೆಗೆ ಹಾಜರಿರುವಂತೆ ಸ್ಪರ್ಧಿಗಳು ತಮಗೆ ಬೇಕಾದ ಪರಿಕರಗಳನ್ನು ಮತ್ತು ಸಂಗೀತ ವಾದ್ಯಗಳನ್ನು ತರುವಂತೆ ತಿಳಿಸಲಾಗಿದೆ.

ಸಾಲು ಮರದ ತಿಮ್ಮಕ್ಕ ಸಸ್ಯೋದ್ಯಾನದಲ್ಲಿ ಮನರಂಜನಾ ಕ್ರೀಡೆಗಳು ಆರಂಭ

# ಸಾಹಸಿ ಚಟುವಟಿಕೆ ಕ್ರೀಡೆಗಳಿಗೆ ಸಚಿವ ಎಚ್.ಕೆ.ಪಾಟೀಲ ಚಾಲನೆ



**ಗದಗ** : ನಗರದ ಬಿಂಕದಕಟ್ಟಿ ಮೃಗಾಲಯದ ಹತ್ತಿರದಲ್ಲಿರುವ ಸಾಲು ಮರದ ತಿಮ್ಮಕ್ಕ ಸಸ್ಯೋದ್ಯಾನಕ್ಕೆ ಬರುವವರು ಇನ್ನು ಮುಂದೆ ಸಾಹಸಿ ಕ್ರೀಡೆಗಳನ್ನು ಆಡಿ ಮನರಂಜನೆ ಪಡೆಯಬಹುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಹೇಳಿದರು.

ಸೋಮವಾರದಂದು ಗದಗ ಅರಣ್ಯ ಪ್ರಾದೇಶಿಕ ವಿಭಾಗ ಹಾಗೂ ಗದಗ ಅರಣ್ಯ ಪ್ರಾದೇಶಿಕ ವಲಯ ಸಹಯೋಗದಲ್ಲಿ ಸಾಲು ಮರದ ತಿಮ್ಮಕ್ಕ ಸಸ್ಯೋದ್ಯಾನದಲ್ಲಿ ಪಿಕಲ್ ಬಾಲ್ ಮೈದಾನ, ಆರ್ಚರಿ ಕ್ರೀಡಾಂಗಣ, ಚಿಟ್ಟೆ ಪಾರ್ಕ ಹಾಗೂ ಸಾಹಸಿ ಚಟುವಟಿಕೆ ಕ್ರೀಡಾಂಗಣಕ್ಕೆ ಸಚಿವ ಎಚ್.ಕೆ.ಪಾಟೀಲ ಅವರು ಚಾಲನೆ ನೀಡಿ ಮಾತನಾಡಿದರು.

ಸಾಲು ಮರದ ತಿಮ್ಮಕ್ಕ ಸಸ್ಯೋದ್ಯಾನ ಒಂದು ಪ್ರವಾಸಿ ತಾಣವಾಗಿದೆ. ಒಂದು ದಿನದ ಪಿಕ್‌ನಿಕ್‌ಗಾಗಿ ಸಾಕಷ್ಟು ಶಾಲಾ ಮಕ್ಕಳು ಭೇಟಿ ನೀಡುತ್ತಿದ್ದಾರೆ.

ಇನ್ನು ಮುಂದೆ ಸಸ್ಯೋದ್ಯಾನ ವೀಕ್ಷಣೆ ಜೊತೆಗೆ ಪಿಕಲ್ ಬಾಲ್, ಆರ್ಚರಿ ಕ್ರೀಡಾಂಗಣದಲ್ಲಿ ಬಿಲ್ಲು ಕ್ರೀಡೆ, ಚಿಟ್ಟೆ ಪಾರ್ಕನಲ್ಲಿ ಪತಂಗಗಳ ಕಲರವ, ಸಾಹಸ ಚಟುವಟಿಕೆಗಳ ಮೂಲಕ ಮಕ್ಕಳಿಗೆ ಸಂಪೂರ್ಣ ಮನರಂಜನೆ ದೊರೆಯುವಂತೆ ಸರ್ಕಾರದಿಂದ ಸೌಲಭ್ಯಗಳನ್ನು ಒದಗಿಸಲಾಗಿದೆ. ಅವುಗಳ ಸದ್ಬಳಕೆಯನ್ನುಇಲ್ಲಿ ಬರುವ ಮಕ್ಕಳು ಹಾಗೂ ಸಾರ್ವಜನಿಕರು ಪಡೆಯಬಹುದಾಗಿದೆ ಎಂದರು.ಈಗಾಗಲೇ ಸಾಲು ಮರದ ತಿಮ್ಮಕ್ಕ ಸಸ್ಯೋದ್ಯಾನದಲ್ಲಿ ಹಲವಾರು ಮನರಂಜನಾ ಚಟುವಟಿಕೆಗಳಿಗೆ ಅವಕಾಶ ಒದಗಿಸಲಾಗಿದೆ. ಜಿಪ್‌ಲೈನ್ ಮೂಲಕ ಸಾಹಸ ಪ್ರಿಯರಿಗೆ ಮುದ ನೀಡುವಂತೆ ಸಸ್ಯೋದ್ಯಾನ ಅಭಿವೃದ್ಧಿ ಪಡಿಸಲಾಗಿದೆ ಅಲ್ಲದೇ ಅರಣ್ಯ ಹುತಾತ್ಮರ ಸ್ಮಾರಕ ಸಹ ಅಂದವಾಗಿ ನಿರ್ಮಿಸಲಾಗಿದೆ. ಇವೆಲ್ಲವುಗಳು ಆಗಮಿಸುವ ಪ್ರವಾಸಿಗರಿಗೆ ಮುದ ನೀಡಲಿವೆ ಎಂದು ಹೇಳಿದರು. ಜಿಲ್ಲೆಯಲ್ಲಿ ಪ್ರವಾಸೋದ್ಯಮಕ್ಕೆ ವಿಪುಲ ಅವಕಾಶಗಳಿದ್ದು ಅವೆಲ್ಲವುಗಳನ್ನು ಸಮರ್ಪಕವಾಗಿ ಬಳಕೆ ಮಾಡುವ ಮೂಲಕ ಅಭಿವೃದ್ಧಿಪಡಿಸಿ ಪ್ರವಾಸಿಗರನ್ನು ಸೆಳೆಯುವ ಪ್ರಯತ್ನ ನಿರಂತರವಾಗಿ ಸಾಗಿದೆ. ಜಿಲ್ಲೆ ಐತಿಹಾಸಿಕವಾಗಿ, ಸಾಹಿತ್ಯಕವಾಗಿ, ನೈಸರ್ಗಿಕವಾಗಿ ಸಮೃದ್ಧವಾಗಿದ್ದು ಸಾರ್ವಜನಿಕರು ಹೆಚ್ಚು ಸಂಖ್ಯೆಯಲ್ಲಿ ಭೇಟಿ ನೀಡುವ ಭರವಸೆಯಿದೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್. ಕೆ.ಪಾಟೀಲ ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ, ತಾಲೂಕಾ ಅಧ್ಯಕ್ಷ ಅಶೋಕ ಮಂದಾಲಿ, ಸಿದ್ದು ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ , ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ್ ಕೆ, ಬಿಂಕದಕಟ್ಟಿ ಗ್ರಾ.ಪಂ. ಅಧ್ಯಕ್ಷ ನಿಂಗಪ್ಪ ಪರಪ್ಪನವರ, ಉಪಾಧ್ಯಕ್ಷ ದ್ಯಾಮವ್ವ ಆರಟ್ಟಿ, ಅರಣ್ಯ ಇಲಾಖೆಯ ಅಧಿಕಾರಿಗಳಾದ ಮಹಾಂತೇಶ ಪೊಲೀಸ ಪಾಟೀಲ, ವೀರೇಂದ್ರ ಮರಿಬಸಣ್ಣವರ ಸೇರಿದಂತೆ ಹಿರಿಯರು, ಗಣ್ಯರು, ಇತರರು ಹಾಜರಿದ್ದರು,

# ಶಿವಮೊಗ್ಗದಲ್ಲಿ ನವೆಂಬರ್ 07 ರಿಂದ 4 ದಿನಗಳ ಕೃಷಿ ಮೇಳ : ಡಾ.ಆರ್.ಸಿ.ಜಗದೀಶ್

**ಶಿವಮೊಗ್ಗ** : ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವು ಸಹಕಾರ ಕೃಷಿಯಿಂದ ಸುಸ್ಥಿರ ಕೃಷಿ ಎಂಬ ಘೋಷವಾಕ್ಯದಡಿ ನವೆಂಬರ್07ರಿಂದ 10ರವರೆಗೆ ನವುಲೆಯ ಕೃಷಿ ವಿವಿ ಆವರಣದಲ್ಲಿ ಕೃಷಿ ಮತ್ತು ತೋಟಗಾರಿಕೆ ಮೇಳವನ್ನು ಆಯೋಜಿಸಲಾಗಿದೆ ಎಂದು ವಿಶ್ವವಿದ್ಯಾನಿಲಯದ ಕುಲಪತಿ ಡಾ.ಆರ್.ಸಿ.ಜಗದೀಶ್‌ವರು ಹೇಳಿದರು.

ಅವರು ಇಂದು ಕೃಷಿ ವಿವಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ವಿವರ ನೀಡಿ ಮಾತನಾಡುತ್ತಿದ್ದರು. ಈ ಮೇಳದಲ್ಲಿ, ಕೃಷಿ ಮತ್ತು ತೋಟಗಾರಿಕೆ ವಸ್ತು ಪ್ರದರ್ಶನ ವಿವಿಧ ಕೃಷಿ ಮತ್ತು ತೋಟಗಾರಿಕಾ ಬೆಳೆಗಳ ಪ್ರಾತ್ಯಕ್ಷಿಕೆಗಳು, ಕೃಷಿ ಯಂತ್ರೋಪಕರಣಗಳ ಪ್ರದರ್ಶನ, ಕೃಷಿ ಪರಿಕರಗಳ ಉತ್ಪಾದನಾ ಘಟಕಗಳು, ವಿಜ್ಞಾನಿಗಳ-ರೈತರೊಂದಿಗೆ ಸಂವಾದ ಕಾರ್ಯಕ್ರಮಗಳು ಮತ್ತು ವಿಚಾರ ಗೋಷ್ಠಿಗಳನ್ನೂ ಸಹ ಏರ್ಪಡಿಸಲಾಗುವುದು ಎಂದವರು ನುಡಿದರು.

ಈ ಮೇಳದಲ್ಲಿ ಪ್ರಮುಖ ಕೃಷಿ ಮತ್ತು ತೋಟಗಾರಿಕಾ ಬೆಳೆಗಳು, ಸಸಿಗಳು ಮತ್ತು ತಳಿಗಳ ಪ್ರದರ್ಶನ ಮತ್ತು ಮಾರಾಟದ ಜೊತೆಗೆ ತಂತ್ರಜ್ಞಾನ ಉದ್ಯಾನವನ, ಸಮಗ್ರ ಕೃಷಿ ಪದ್ಧತಿ, ಸಂರಕ್ಷಿತ ಕೃಷಿ, ದ್ವಿದಳ ಧಾನ್ಯ ತಳಿ ಪ್ರಾತ್ಯಕ್ಷಿಕೆ, ಸಿರಿಧಾನ್ಯಗಳ ಮಹತ್ವ ಕೃಷಿ ಮತ್ತು ತೋಟಗಾರಿಕೆ-ಅರಣ್ಯ-ಸಮಗ್ರ ಪದ್ಧತಿಗಳು ಕೃಷಿ ಮತ್ತು ತೋಟಗಾರಿಕಾ ವಸ್ತುಪ್ರದರ್ಶನ, ವಿವಿಧ ಕೃಷಿ ಮತ್ತು ತೋಟಗಾರಿಕಾ ಬೆಳೆಗಳ ಪ್ರಾತ್ಯಕ್ಷಿಕೆಗಳು, ಕೃಷಿ ಯಂತ್ರೋಪಕರಣಗಳ ಪ್ರದರ್ಶನ, ಜೈವಿಕ ಪರಿಕರಗಳ ಪ್ರದರ್ಶನ, ರೈತ - ವಿಜ್ಞಾನಿ ಸಂವಾದ ಮತ್ತು ವಿಚಾರ ಗೋಷ್ಠಿಯನ್ನು ಏರ್ಪಡಿಸಲಾಗಿರುತ್ತದೆ, ಅಲ್ಲದೇ, ಸಿರಿಧಾನ್ಯಗಳ ಮೌಲ್ಯವರ್ಧನೆಗಾಗಿ ಹೆಚ್ಚು ಒತ್ತು ಕೊಟ್ಟು ರೈತರ ಮನಮುಟ್ಟಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದವರು ತಿಳಿಸಿದರು.

ಅನೇಕ ವಿಶೇಷತೆಗಳೊಂದಿಗೆ ಆಯೋಜಿಸಲಾಗುತ್ತಿರುವ ಈ ಕೃಷಿಮೇಳದಲ್ಲಿ ತಂತ್ರಜ್ಞಾನ ಉದ್ಯಾನವನ, ಸಮಗ್ರ ಕೃಷಿ ಪದ್ಧತಿ, ಸಂರಕ್ಷಿತ ಕೃಷಿ, ಪುಷ್ಪ ಕೃಷಿ, ತಾರಸಿ ತೋಟ ಮತ್ತು ಲಂಬ ತೋಟ, ಜೇನು ಸಾಕಾಣಿಕೆ ಮತ್ತು ಕೀಟ ಪ್ರಪಂಚ, ಸಿರಿಧಾನ್ಯಗಳ ಮಹತ್ವ, ಗೋಡಂಬಿ ಬೆಳೆ ಪ್ರಾತ್ಯಕ್ಷಿಕೆ. ಸಂಸ್ಕರಣೆ ಮತ್ತು ಮೌಲ್ಯವರ್ಧನೆ,
ಸಮಗ್ರ ಜಲಾನಯನ ಅಭಿವೃದ್ಧಿ, ಕೃಷಿ-ತೋಟಗಾರಿಕೆ-ಅರಣ್ಯ ಸಮಗ್ರ ಪದ್ಧತಿಗಳು, ಸಾವಯವ ಕೃಷಿ, ಅಣಬೆ ಬೇಸಾಯ, ಪಶುಸಂಗೋಪನೆ ಮತ್ತು ಮೀನುಗಾರಿಕೆ ತಂತ್ರಜ್ಞಾನಗಳು, ಕೊಯೋತ್ತರ ತಾಂತ್ರಿಕತೆ, ಕೃಷಿ ಉತ್ಪನ್ನ ಸಂಸ್ಕರಣೆ, ಮೌಲ್ಯವರ್ಧಿತ ಕೃಷಿ ಉತ್ಪನ್ನಗಳು, ಹವಾಮಾನ ಆಧಾರಿತ ಕೃಷಿ, ಕೃಷಿ ಪರಿಕರ ಮತ್ತು ಯಂತ್ರೋಪಕರಣಗಳ ಪ್ರದರ್ಶನ,
ಶ್ರೇಷ್ಠ- ಕೃಷಿಕರು ಮತ್ತು ಕೃಷಿಕ ಮಹಿಳೆಯರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದವರು ತಿಳಿಸಿದರು.

ಮೇಳದಲ್ಲಿ ತಂತ್ರಜ್ಞಾನ ಉದ್ಯಾನವನವು ಆಕರ್ಷಣೆಯಾಗಿದ್ದು, ಇಲ್ಲಿ ವಿವಿಧ ಬೆಳೆಗಳ ನವೀನ ತಂತ್ರಜ್ಞಾನಗಳನ್ನು - ರೈತರಿಗೆ ಕಣ್ಣಿಗೆ ಕಟ್ಟುವ ರೀತಿಯಲ್ಲಿ ಪ್ರದರ್ಶಿಸಲು ಉದ್ದೇಶಿಸಿದೆ. ಅಲ್ಲದೆ ವಿವಿಧ ಸಂಸ್ಥೆಗಳು ಅಭಿವೃದ್ಧಿಪಡಿಸಿರುವಂತಹ ನಾವೀನ್ಯತೆ ನೊಂದಿರುವ ಕೃಷಿಪರಿಕರಗಳು, ಮೌಲ್ಯವರ್ಧಿತ ಉತ್ಪನ್ನಗಳು, ಕೃಷಿ ತಂತ್ರಜ್ಞಾನಗಳು, ಕೃಷಿ ಯಂತ್ರೋಪಕರಣಗಳ ಪ್ರದರ್ಶನಗಳ ಪ್ರಯೋಜನವನ್ನು ರೈತ ಬಾಂಧವರು ಪಡೆದುಕೊಳ್ಳುವಂತೆ ಅವರು ಮನವಿ ಮಾಡಿದ್ದಾರೆ.

ಈ ಮೇಳದ ವಿಶೇಷತೆ ಎಂದರೆ ಸಮಗ್ರ ಕೃಷಿ ಪದ್ಧತಿ, ಅಂತರ್ಜಲ ಮರುಪೂರಣ, ಹೈಟೆಕ್ ತೋಟಗಾರಿಕೆ. ಪುಷ್ಪ ಕೃಷಿ ಮತ್ತು ತಾರಸಿ ತೋಟ, ಜೇನುವನ ಮತ್ತು ಕೀಟ ಪ್ರಪಂಚ, ಪರಿಸರ ಕೃಷಿ ಪ್ರವಾಸೋದ್ಯಮ,
ಸಿರಿಧಾನ್ಯಗಳ ತ್ವಗಳ ಮೌಲ್ಯವರ್ಧನೆ ಮತ್ತು ತಾಂತ್ರಿಕತೆಗಳು, ಗೋಡಂಬಿ ಬೆಳೆ ಪ್ರಾತ್ಯಕ್ಷಿಕೆ, ಸಂಸ್ಕರಣೆ ಮತ್ತು ಮೌಲ್ಯವರ್ಧನೆ, ಸಹಕಾರ ಕೃಷಿ, ಮೌಲ್ಯವರ್ಧನೆ ಹಾಗೂ ಮಾರಾಟದ ಚರ್ಚಾ ಗೋಷ್ಠಿಗಳು ಇತ್ಯಾದಿ ಕಾರ್ಯಕ್ರಮಗಳ ಮೂಲಕ ಆಕರ್ಷಿಸಲು ಉದ್ದೇಶಿಸಲಾಗಿದೆ ಎಂದರು.

ಈ ವರ್ಷ ದಕ್ಷಿಣ ಭಾರತದ ಪ್ರಪ್ರಥಮ ಬಾರಿಗೆ ಸಹ್ಯಾದ್ರಿ ಸಿಂಧೂರ ಎಂಬ ಸಣ್ಣ ಕೆಂಪಕ್ಕಿ ಭತ್ತದ ತಳಿಯನ್ನು ಬಿಡುಗಡೆ ಮಾಡಿರುವುದು ಹೆಮ್ಮೆಯ ವಿಷಯವಾಗಿದೆ. ಅಲ್ಲದೆ ಕೆಹೆಚ್ ಪಿ-11 ಭತ್ತದ ತಳಿಯನ್ನು ಗುಡ್ಡಗಾಡು ಪ್ರದೇಶಕ್ಕೆ ಬಿಡುಗಡೆ ಮಾಡಿಲಾಗಿದೆ. ಅಲ್ಲದೆ ಪ್ರಸಕ್ತ ಸಾಲಿನಲ್ಲಿ ರಾಗಿ ತಳಿ ಕೆಎಂಆರ್ 630 ಮತ್ತು ಬರಗು ತಳಿ ಹಾಗೂ ಸಹ್ಯಾದ್ರಿ ಪ್ರಗತಿ ಎಂಬ ಕಡಲೆ ತಳಿಗಳನ್ನು ಅಭಿವೃದ್ಧಿಪಡಿಸಲಾಗಿದೆ. ಅಲ್ಲದೇ, ಕೃಷಿ ಮತ್ತು ಕೃಷಿ ಮತ್ತು ತೋಟಗಾರಿಕೆಯಲ್ಲಿ 13 ವಿವಿಧ ಉತ್ಪಾದನಾ ತಾಂತ್ರಿಕತೆಗಳನ್ನು ಅಭಿವೃದ್ಧಿಪಡಿಸಿ ಬಿಡುಗಡೆಗೊಳಿಸಲಾಗಿದೆ.

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ: ಅರ್ಜಿ ಸಲ್ಲಿಕೆಯ ಅವಧಿ ವಿಸ್ತರಣೆ

**ಬಳ್ಳಾರಿ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಪ್ರಸ್ತಕ ಸಾಲಿಗೆ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯಡಿ ನಾವೀನ್ಯತೆ, ಕ್ರೀಡೆ, ಕಲೆ, ಸಾಂಸ್ಕೃತಿಕ ಮತ್ತು ಸಂಗೀತ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆಯನ್ನು ಮಾಡಿರುವಂತಹ ಮಕ್ಕಳಿಗೆ ಪ್ರೋತ್ಸಾಹಿಸಲು ಜಿಲ್ಲಾ ಮಟ್ಟದ ಪ್ರಶಸ್ತಿಗೆ ಅರ್ಹ ಮಕ್ಕಳಿಂದ ಅರ್ಜಿ ಆಹ್ವಾನಿಸಲಾಗಿತ್ತು. ಅರ್ಜಿ ಸಲ್ಲಿಕೆಯ ಅವಧಿಯನ್ನು ನ.15 ರ ವರೆಗೆ ವಿಸ್ತರಿಸಲಾಗಿದೆ.
*ಷರತ್ತು:*
ಮಕ್ಕಳು 5 ರಿಂದ 18 ವರ್ಷ ವಯೋಮಿತಿ ಒಳಗಿರಬೇಕು. ನಾವೀನ್ಯತೆ, ತಾರ್ಕಿಕ ಸಾಧನೆ, ಕ್ರೀಡೆ, ಕಲೆ, ಸಾಂಸ್ಕೃತಿಕ ಮತ್ತು ಸಂಗೀತ ಕ್ಷೇತ್ರದಲ್ಲಿ ಅಸಾಧಾರಣ ಪ್ರತಿಭೆ ಹೊಂದಿರಬೇಕು. ವಯಸ್ಸಿನ ಬಗ್ಗೆ ಜನನ ಪ್ರಮಾಣ ಪತ್ರ ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಣ ಮಾಡಿಸಿದ ಪ್ರತಿ ಲಗತ್ತಿಸಬೇಕು. ಪ್ರತಿಭೆಯನ್ನು ಹೊಂದಿರುವ ಬಗ್ಗೆ ಪ್ರಮುಖ ದಿನಪ್ರತಿಕೆಯಲ್ಲಿ ಪ್ರಕಟಗೊಂಡಿರುವ ಪತ್ರಿಕೆ ತುಣುಕು, ಪ್ರಮಾಣ ಪತ್ರ ಲಗತ್ತಿಸಬೇಕು.
ಅಂತರಾಷ್ಟ್ರೀಯ, ರಾಷ್ಟ್ರೀಯ, ರಾಜ್ಯ ಮಟ್ಟದಲ್ಲಿ ಭಾಗವಹಿಸಿರುವ, ಪ್ರಶಸ್ತಿ ಪಡೆದಿರುವ ಮಾಹಿತಿ ಇರಬೇಕು. ಹಿಂದಿನ ವರ್ಷಗಳಲ್ಲಿ ಯಾವುದೇ ಕ್ಷೇತ್ರದಲ್ಲಿ ಜಿಲ್ಲಾ ಮಟ್ಟದಲ್ಲಿ ಪ್ರಶಸ್ತಿ ಪಡೆದ ಮಕ್ಕಳಿಗೆ ಪುನಃ ಪ್ರಶಸ್ತಿ ನೀಡಲು ಅವಕಾಶವಿರುವುದಿಲ್ಲ. ಅರ್ಜಿದಾರರು ಬಳ್ಳಾರಿ ಜಿಲ್ಲೆಯಲ್ಲಿ ನೆಲಸಿರಬೇಕು. ಸಾಧಿಸಿರುವ ಪ್ರತಿಭೆಯನ್ನು ಸಮರ್ಥಿಸಲು ಪೂರಕ ದಾಖಲೆಗಳನ್ನು ಸಲ್ಲಿಸಬೇಕು.
ಪ್ರಶಸ್ತಿಯು ರೂ.10,000 ಗಳ ನಗದು ಮತ್ತು ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ.
ಅರ್ಜಿ ನಮೂನೆಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರ ಕಚೇರಿಯಿಂದ ಪಡೆದು ಕನ್ನಡ ಭಾಷೆಯಲ್ಲಿ ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿ, ಅರ್ಜಿಗಳನ್ನು ನ.15 ರೊಳಗಾಗಿ ಸಲ್ಲಿಸಬೇಕು.
ಹೆಚ್ಚಿನ ಮಾಹಿತಿಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿ ಅಥವಾ ದೂ.08392-266219 ಗೆ ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೀರ ವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮ

**ಬಳ್ಳಾರಿ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ವೀರ ವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮವನ್ನು ನ.11 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣ ಸಭಾಂಗಣದಲ್ಲಿ ಆಯೋಜಿಸಲಾಗಿದೆ.
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.
ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.
ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ಜೆ.ಎನ್.ಗಣೇಶ್, ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಕರ್ನಾಟಕ ರಾಜ್ಯ ಖನಿಜ ನಿಗಮ ನಿಯಮಿತದ ಉಪಾಧ್ಯಕ್ಷ ಹೆಚ್.ಲಕ್ಷ್ಮಣ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಛಲವಾದಿ ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ಸಿ.ಶಿವಕುಮಾರ್ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.
ಬಳ್ಳಾರಿಯ ಸಾಹಿತಿ ಎನ್.ಡಿ.ವೆಂಕಮ್ಮ ಅವರು ಜಯಂತಿ ಕುರಿತು ವಿಶೇಷ ಉಪನ್ಯಾಸ ನೀಡುವರು. ಕಾರ್ಯಕ್ರಮದಲ್ಲಿ ಬಳ್ಳಾರಿಯ ಎಸ್.ಲಕ್ಷ್ಮೀ ಪವನ್ ಕುಮಾರ್ ಅವರಿಂದ ಸುಗಮ ಸಂಗೀತ ಕಾರ್ಯಕ್ರಮ ಇರಲಿದೆ.ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಮಹಾನಗರ ಪಾಲಿಕೆಯ ಆಯುಕ್ತ ಮಂಜುನಾಥ ಪಿ.ಎಸ್., ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಇತರರು ಉಪಸ್ಥಿತರಿರುವರು

# ಮ್ಯಾಂಗೋ ಲೀಫ್ ಹಾಲಿಡೇಸ್ ಸಂಸ್ಥೆಯಿಂದ ವಿದ್ಯಾರ್ಥಿಗಳಿಗೆ ಟ್ರ್ಯಾಕ್ ಶೂಟ್ ವಿತರಣೆ

**ಶಿವಮೊಗ್ಗ:** ನಗರದ ಹೊರಭಾಗದಲ್ಲಿರುವ ನಿಧಿಗೆ ಗ್ರಾಮದ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರೌಢಶಾಲೆಯ ವಿದ್ಯಾರ್ಥಿಗಳಿಗೆ ಮ್ಯಾಂಗೋ ಲೀಫ್ ಹಾಲಿಡೇಸ್ ಸಂಸ್ಥೆ ವತಿಯಿಂದ 105 ವಿದ್ಯಾರ್ಥಿಗಳಿಗೆ ಉಚಿತ ಟ್ರ್ಯಾಕ್ ಶೂಟ್‌ಗಳನ್ನು ವಿತರಿಸಲಾಯಿತು.

ವಿದ್ಯಾರ್ಥಿಗಳಲ್ಲಿ ಕ್ರೀಡಾ ಮನೋಭಾವವನ್ನು ಬೆಳೆಸುವ ಹಾಗೂ ದೈಹಿಕ ಚಟುವಟಿಕೆಗಳ ಬಗ್ಗೆ ಸ್ಫೂರ್ತಿ ಮೂಡಿಸುವ ಉದ್ದೇಶದಿಂದ ಈ ಸಾಮಾಜಿಕ ಸೇವಾ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಮ್ಯಾಂಗೋ ಲೀಫ್ ಹಾಲಿಡೇಸ್ ಸಂಸ್ಥೆಯ ಮುಖ್ಯಸ್ಥ ಮಂಜುನಾಥ್, ಶಾಲೆಯ ಮುಖ್ಯೋಪಾಧ್ಯಾಯರಾದ ಲಕ್ಷ್ಮಣಪ್ಪ, ಎಸ್‌ಡಿಎಂಸಿ ಅಧ್ಯಕ್ಷ ಮಂಜುನಾಥ್ ಕೆ., ವೆಂಕಟಾಚಲ ಗೌಡ್ರು, ನಾಗರಾಜ್ ಎಂ.ಜಿ., ಮಂಜುನಾಥ್ ಗೌಡ್ರು, ಆನಂದ್ ಸೇರಿದಂತೆ ಹಲವಾರು ಗ್ರಾಮಸ್ಥರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಮ್ಯಾಂಗೋ ಲೀಫ್ ಹಾಲಿಡೇಸ್ ಸಂಸ್ಥೆಯ ಮುಖ್ಯಸ್ಥ ಮಂಜುನಾಥ್ ಅವರು ಹೇಳಿದರು

...."ನಮ್ಮ ಸಂಸ್ಥೆ ಸಮಾಜಮುಖಿ ಚಟುವಟಿಕೆಗಳ ಮೂಲಕ ವಿದ್ಯಾರ್ಥಿಗಳ ಬೆಳವಣಿಗೆಗೆ ಸಹಕಾರ ನೀಡುವುದೇ ಧ್ಯೇಯ. ಸರ್ಕಾರಿ ಹಾಗೂ ಖಾಸಗಿ




ಶಾಲೆಯ ವಿದ್ಯಾರ್ಥಿಗಳು ಕ್ರೀಡಾ ಕ್ಷೇತ್ರದಲ್ಲಿ ಮೆರೆದಾಡಬೇಕು ಎಂಬ ಆಶಯದಿಂದ ಈ ಟ್ರ್ಯಾಕ್ ಶೂಟ್ ವಿತರಣೆ ಕಾರ್ಯ ಕೈಗೊಂಡಿದ್ದೇವೆ," ಎಂದು ಹೇಳಿದರು.......

ಕಾರ್ಯಕ್ರಮದ ಅಂತ್ಯದಲ್ಲಿ ಶಾಲಾ ಆಡಳಿತ ಮಂಡಳಿ, ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಮ್ಯಾಂಗೋ ಲೀಫ್ ಹಾಲಿಡೇಸ್ ಸಂಸ್ಥೆಗೆ ಕೃತಜ್ಞತೆ ಸಲ್ಲಿಸಿದರು.

# ಶ್ರೀ ಆದಿಚುಂಚನಗಿರಿ ಮಠ ಆರಗದಲ್ಲಿ ನಡೆಸಿದ ಪುರಂದರದಾಸರ ಕೀರ್ತನೋತ್ಸವಕ್ಕೆ ಚಾಲನೆ



**ಶಿವಮೊಗ್ಗ:** ಶಿವಮೊಗ್ಗ ಶ್ರೀ ಆದಿಚುಂಚನಗಿರಿ ಶಾಖಾ ಮಠದ 35 ನೇ ವಾರ್ಷಿಕೋತ್ಸವ ಸಮಾರಂಭವನ್ನು ಅತ್ಯಂತ ವಿಭಿನ್ನವಾಗಿ ಆಚರಿಸಲು ಆದಿಚುಂಚನಗಿರಿ ಮಠ ತೀರ್ಮಾನಿಸಿದ್ದು,

ಇದೇ ಮೊದಲ ಬಾರಿಗೆ ದಾಸವರೇಣ್ಯ ಪುರಂದದಾಸದರೊಬ್ಬರ ಕೀರ್ತನೋತ್ಸವ ಮಾಜಿ ಸಚಿವ ಆರಗಜ್ಞಾನೇಂದ್ರ ಅವರ ಹುಟ್ಟೂರಿನಲ್ಲಿ ಇಂದು ಬೆಳಿಗ್ಗೆ ಆರಂಭಗೊಂಡಿತು.

ಶಿವಮೊಗ್ಗದ ಶರಾವತಿ ನಗರದ ಶ್ರೀ ಆದಿಚುಂಚನಗಿರಿ ಸಮುದಾಯ ಭವನದಲ್ಲಿ ಪ್ರತಿವರ್ಷದಂತೆ ಈ ಬಾರಿಯೂ ಎರಡು ದಿನ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಿದ್ದು. ಇಂದು ಬೆಳಗ್ಗೆ 10ರಿಂದ ತೀರ್ಥಹಳ್ಳಿ ತಾಲ್ಲೂಕಿನ ಆರಗದಲ್ಲಿರುವ ಸಹಕಾರ ಸಂಘ ಸಭಾಭವನದಲ್ಲಿ ದಾಸವರೇಣ್ಯ ಪುರಂದರ ದಾಸರ ಕೀರ್ತನೋತ್ಸವ ಕಾರ್ಯಕ್ರಮ ದಿವ್ಯ ಸಾನಿಧ್ಯವನ್ನು ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ 72ನೇ ಪೀಠಾಧ್ಯಕ್ಷರಾದ ಪರಮಪೂಜ್ಯ ಜಗದ್ಗುರು ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿಯವರ ದಿವ್ಯ ಸಾನಿಧ್ಯದಲ್ಲಿ, ಬೆಕ್ಕಿನ ಕಲ್ಮಠದ ಡಾ. ಮಲ್ಲಿಕಾರ್ಜುನ ಮುರುಘ ರಾಜೇಂದ್ರ ಮಹಾಸ್ವಾಮಿ ಉದ್ಘಾಟಿಸಿದರು.

ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪ್ರಧಾನ ಕಾರ್ಯದರ್ಶಿಗಳಾದ ಪೂಜ್ಯ ಶ್ರೀ ಪ್ರಸನ್ನನಾಥ

ಶ್ರೀ ನಾರಾಯಣ ಗುರು ಈಡಿಗ ಮಹಾಸಂಸ್ಥಾನ ಮಠದ ಪೂಜ್ಯ ಶ್ರೀ ರೇಣುಕಾನಂದಪುರಿ ಸ್ವಾಮೀಜಿ., ಗೋಸಾಯಿ ಮಠ ಪೂಜ್ಯ ಶ್ರೀ ಮಂಜುನಾಥ ಸ್ವಾಮೀಜಿ, ಚಿತ್ರದುರ್ಗದ ಕಬೀರಾನಂದ ಆಶ್ರಮದ ಪೂಜ್ಯಶ್ರೀ ಶಿವಾನಂದ ಸ್ವಾಮೀಜಿ,

ತೀರ್ಥಹಳ್ಳಿ ಶಾಸಕರಾದ ಅರಗ ಜ್ಞಾನೇಂದ್ರ, ಮಾಜಿ ಶಿಕ್ಷಣ ಸಚಿವರಾದ ಕಿಮ್ಮನೆ ರತ್ನಾಕರ್, ಶಿವಮೊಗ್ಗ ಶಾಸಕರಾದ ಚನ್ನಬಸಪ್ಪ,ಆರ್.ಎಂ. ಮಂಜುನಾಥಗೌಡ, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕರಾದ ಧರ್ಮೇಶ್ ಸಿರಿಬೈಲು,ಇನ್ನು ಮುಂತಾದವರು ಉಪಸ್ಥಿತರಿದ್ದರು.

ಜಿಲ್ಲಾ ಹಂತದ ಪುರಂದರ ಕೀರ್ತನಗಾಯನ ಮತ್ತು ದಾಸ ಸಾಹಿತ್ಯಕ್ಕೆ ಪುರಂದರ ದಾಸರ ಕೊಡುಗೆಗಳು ಕುರಿತು ಭಾಷಣ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳಿಗೆ ತೀರ್ಥಹಳ್ಳಿ ತಾಲೂಕಿನ ಆರಗದಲ್ಲಿ ನಡೆಸಲಾದ ಕಾರ್ಯಕ್ರಮದಲ್ಲಿ ಶ್ರೀ ಆದಿ ಚುಂಚನಗಿರಿ ಮಹಾಸಂಸ್ಥಾನ ಮಠದ ಪರಮಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮಿಗಳವರ ದಿವ್ಯ ಸಾನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿಜೇತರಿಗೆ ಆಕರ್ಷಕ ಬಹುಮಾನಗಳನ್ನು ನೀಡಿ ಗೌರವಿಸಲಾಯಿತು.

ಮೊದಲ ಅವಧಿಯಲ್ಲಿ: ವಿದ್ವಾನ್ ಪಣೀಂದ್ರ ಬೆಂಗಳೂರು ಮತ್ತು ಸಂಗಡಿಗರಿಂದ ಹಾಡುಗಾರಿಕೆಯನ್ನು ನಡೆಸಿಕೊಡಲಿದ್ದಾರೆ.

2ನೇ ಅವಧಿ : ವಿದ್ವಾನ್ ಹೊಸಳ್ಳಿ. ಕೆ.ವೆಂಕಟರಾಂ,ವಿದ್ವಾನ್ ಹೊಸಳ್ಳಿ ಕೆ. ಸುಬ್ಬರಾವ್, ವಿದ್ವಾನ್ ಹೊಸಳ್ಳಿ ವಿ.ರಘುರಾಂ ಮತ್ತು ಸಂಗಡಿಗರಿಂದ ಪಿಟೀಲು ವಾದನ ನಡೆಸಿಕೊಡುವರು.

3ನೇ ಅವಧಿ: ವಿದ್ವಾನ್ ಶೃಂಗೇರಿ ನಾಗರಾಜ್ ರವರ ಶಿಷ್ಯ ವೃಂದದವರಿಂದ ಮತ್ತು ಆರಗ ಗ್ರಾಮದ ಭಜನಾ ಮಂಡಳಿಯವರಿಂದ ಹಾಡುಗಾರಿಕೆ.

4ನೇ ಅವಧಿ :ವಿದ್ವಾನ್ ಹುಮಾಯುನ್ ಹರ್ಲಾಪುರ್, ವಿದ್ವಾನ್ ನವಶಾದ್ ಹರ್ಲಾಪುರ್, ವಿದ್ವಾನ್ ನಿಶಾದ್ ಹರ್ಲಾಪುರ್ ಮತ್ತು ಸಂಗಡಿಗರಿಂದ ಹಿಂದೂಸ್ತಾನಿ ಗಾಯನ.

5ನೇ ಅವಧಿ : ರಾಷ್ಟ್ರಪತಿ ಪ್ರಶಸ್ತಿ ವಿಜೇತ ವಿದ್ವಾನ್ ಮಾರುತಿ ಪ್ರಸಾದ್ ಬೆಂಗಳೂರು ಮತ್ತು ಸಂಗಡಿಗರಿಂದ ಹಾಡುಗಾರಿಕೆ.

6ನೇ ಅವಧಿ: ಪೂಜ್ಯ ಶ್ರೀ ಶ್ರೀ ಸಾಯಿ ಕೀರ್ತಿನಾಥ ಸ್ವಾಮೀಜಿ ಹಾಗೂ ವಿದ್ವಾನ್ ಮಾರುತಿ ಪ್ರಸಾದ್ ಅವರಿಂದ ಹಾರ್ಮೋನಿಯಂ, ಕೀಬೋರ್ಡ್,ಜುಗಲ್ ಬಂದಿ ಕಾರ್ಯಕ್ರಮ ನಡೆಯುವುದು.

ಖ್ಯಾತ ಸಂಗೀತಗಾರರಿಂದ ಸಾಮೂಹಿಕ ಗಾಯನ ಹಾಗೂ ಸತ್ಸಂಗ ಕಾರ್ಯಕ್ರಮ ಆಯೋಜನೆ ಮಾಡಲಾಗಿದ್ದು, ಸಾರ್ವಜನಿಕರು, ಶ್ರೀಮಠದ ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೆ ಸಹಕರಿಸಬೇಕಾಗಿ ಕಾರ್ಯಕ್ರಮದ ಆಯೋಜಕರು ಕೋರಿದ್ದಾರೆ.

**ತೀರ್ಥಹಳ್ಳಿ ತಾಲೂಕಿನ ಆರಗದಲ್ಲಿ ಇಂದು ಆರಂಭಗೊಂಡ ವಿಶೇಷ, ವಿಭಿನ್ನವಾದ ದಾಸವರೇಣ್ಯ ಪುರಂದರ ದಾಸರ ಕೀರ್ತನೋತ್ಸವ ಸಮಾರಂಭದಲ್ಲಿ ನಾಡಿನ ಖ್ಯಾತ ಗಾಯಕರು ಆಗಮಿಸಿ ವಿವಿಧ ಕಾರ್ಯಕ್ರಮ ನಡೆಸಿಕೊಡುತ್ತಿದ್ದಾರೆ.**

## ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಂದ ಅರಿವು ನವೀಕರಣ ಸಾಲ ಪಡೆಯಲು ಅರ್ಜಿ ಆಹ್ವಾನ

**ಶಿವಮೊಗ್ಗ:** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಶಿವಮೊಗ್ಗ ಜಿಲ್ಲೆ ವತಿಯಿಂದ 2025-26 ನೇ ಸಾಲಿಗೆ ಅರಿವು ನವೀಕರಣ ಸಾಲ ಯೋಜನೆಯನ್ನು ಅನುಷ್ಠಾನಗೊಳಿಸಲು ಮುಸ್ಲಿಂ, ಜೈನ್ಸ್, ಬೌದ್ಧರು, ಸಿಖ್ಖರು, ಪಾರ್ಸಿಗಳು ಸಮುದಾಯದ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆಯಾಗಿರುವ ನವೀಕರಣ/ ಸಿಇಟಿ/ ನೀಟ್/ ಪಿಜಿಸಿಇಟಿ/ ಪಿಜಿನೀಟ್/ಡಿಸಿಇಟಿ ಮೂಲಕ ಪದವಿ ಮತ್ತು ಸ್ನಾತಕೋತ್ತರ ವೃತ್ತಿಪರ ಕೋರ್ಸ್‌ಗಳಾದ ಎಂಬಿಬಿಎಸ್, ಎಂಡಿ ಎಂಎಸ್, ಬಿಡಿಎಸ್, ಎಂಡಿಎಸ್, ಬಿ-ಆಯುಷ್, ಎಂ-ಆಯುಷ್, ಬಿಇ, ಬಿ-ಟೆಕ್, ಎಂಇ, ಎಂ-ಟೆಕ್, ಬ್ಯಾಚುಲರ್ ಆಫ್ ಆರ್ಕಿಟೆಕ್ಚರ್, ಎಂ- ಆರ್ಕಿಟೆಕ್ಚರ್, ಎಂಬಿಎ, ಎಂಸಿಎ, ಎಲ್‌ಎಲ್‌ಬಿ, ಬಿಎಸ್ಸಿ ಇನ್ ಆರ್ಟಿಕಲ್ಚರ್, ಅರ್ಗಿಕಲ್ಚರಲ್ ಇಂಜಿನಿರಿಂಗ್, ಡೈರಿ ಟೆಕ್ನಾಲಜಿ, ಫಾರೆಸ್ಟ್ರಿ, ವೆಟರ್ನರಿ ಅಂಡ್ ಅನಿಮಲ್ ಟೆಕ್ನಾಲಜಿ, ಫರ್ನಿ, ಸಿರಿಕಲ್ಚರ್, ಹೋಮ್/ಕಮ್ಯುನಿಟಿ ಎಂಬಿಬಿಎಸ್, ಎಂಡಿ ಎಂಎಸ್, ಬಿಡಿಎಸ್, ಎಂಡಿಎಸ್, ಬಿ-ಆಯುಷ್, ಎಂ-ಆಯುಷ್, ಬಿಇ, ಬಿ-ಟೆಕ್, ಎಂಇ, ಎಂ-ಟೆಕ್, ಬ್ಯಾಚುಲರ್ ಆಫ್ ಆರ್ಕಿಟೆಕ್ಚರ್, ಎಂ-ಆರ್ಕಿಟೆಕ್ಚರ್, ಎಂಬಿಎ, ಎಂಸಿಎ, ಎಲ್‌ಎಲ್‌ಬಿ, ಬಿಎಸ್ಸಿ ಇನ್ ಆರ್ಟಿಕಲ್ಚರ್, ಅರ್ಗಿಕಲ್ಚರಲ್ ಇಂಜಿನಿರಿಂಗ್, ಡೈರಿ ಟೆಕ್ನಾಲಜಿ, ಫಾರೆಸ್ಟ್ರಿ, ವೆಟರ್ನರಿ ಅಂಡ್ ಅನಿಮಲ್ ಟೆಕ್ನಾಲಜಿ, ಫರ್ನಿ, ಸಿರಿಕಲ್ಚರ್, ಹೋಮ್/ಕಮ್ಯುನಿಟಿ ಸೈನ್ಸ್ ಫುಡ್ ನ್ಯೂಟ್ರಿಶಿಯನ್ ಅಂಡ್ ಡೈಯಟಿಕ್ಸ್, ಬಿ-ಫಾರ್ಮಾ, ಎಂ-ಫಾರ್ಮಾ, ಫಾರ್ಮಾ ಡಿ ಅಂಡ್ ಡಿ ಫಾರ್ಮಾಗಳಲ್ಲಿ ಆಯ್ಕೆಯಾಗಿರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿದ್ದು, ವಿದ್ಯಾರ್ಥಿಗಳು ಹಿಂದಿನ ವರ್ಷದಲ್ಲಿ ಪಡೆದ ಸಾಲದ ಮೊತ್ತಕ್ಕೆ ಶೇ.12 ರಷ್ಟು ಹಣವನ್ನು ಪಾವತಿಸಿ ಅರ್ಜಿಯನ್ನು ಆನ್‌ಲೈನ್ ಮೂಲಕ ಸಲ್ಲಿಸಬಹುದಾಗಿದೆ.

ಅರ್ಜಿಯನ್ನು kmdconline.karnataka.gov.in ವೆಬ್‌ಸೈಟ್ ಮೂಲಕ ಆನ್‌ಲೈನ್‌ನಲ್ಲಿ ಭರ್ತಿ ಮಾಡಿ ಅರ್ಜಿ ಪ್ರಿಂಟ್‌ಔಟ್ ತೆಗೆದು ಅದಕ್ಕೆ ಸ್ಟಡಿ ಸರ್ಟಿಫಿಕೇಟ್, ಕಾಲೇಜ್ ಶುಲ್ಕ ರಶೀದಿ, ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ಹಿಂದಿನ ವರ್ಷದಲ್ಲಿ ಉತ್ತೀರ್ಣರಾಗಿರುವ ಅಂಕಪಟ್ಟಿ, ಕಾಲೇಜ್ ಬ್ಯಾಂಕ್ ಮಾಹಿತಿ, ಶೇ.12 ರಷ್ಟು ಲೋನ್ ಹಣವನ್ನು ಪಾವತಿಸಿರುವ ರಶೀದಿ, ಕೆಇಎ ಅಡ್ಮಿಶನ್ ಆರ್ಡರ್ ಕಾಪಿ, ಅಧಾರ್ ಕಾರ್ಡ್, ಜಾತಿ/ಆದಾಯ ಪ್ರಮಾಣ ಪತ್ರ(8 ಲಕ್ಷದೊಳಗೆ), ವಿದ್ಯಾರ್ಥಿ/ ಪೋಷಕರ ಭಾವಚಿತ್ರ, ಇಂಡಿಮ್ನಿಟಿ ಬಾಂಡ್ ವಿಥ್ ನೋಟರಿ ಹಾಗೂ ವಿದ್ಯಾರ್ಥಿ ಮತ್ತು ಪೋಷಕರ ಸೆಲ್ಫ್ ಡಿಕ್ಲರೇಷನ್ ಲೇಟರ್‌ಗಳ ದಾಖಲಾತಿಗಳೊಂದಿಗೆ ಜಿಲ್ಲಾ ವ್ಯವಸ್ಥಾಪಕ ಕಚೇರಿ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಅಚ್ಚುತರಾವ್ ಲೇಔಟ್ 4 ನೇ ತಿರುವು ನಂಜಪ್ಪ ಆಸ್ಪತ್ರೆ ಮುಂಭಾಗ ಶಿವಮೊಗ್ಗ ಇವರಿಗೆ ಡಿ. 03 ರೊಳಗಾಗಿ ಸಲ್ಲಿಸುವಂತೆ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಹಿಂದೆ ಕೆಇಎ ನಿಂದ ಆಯ್ಕೆಯಾಗಿದ್ದು, ಬೇರೆ ಬೇರೆ ವರ್ಷಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಅರಿವು ವಿದ್ಯಾಭ್ಯಾಸ ಸಾಲ ಪಡೆಯದಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಸಹ ಅರ್ಜಿ ಸಲ್ಲಿಸಬಹುದಾಗಿದ್ದು, ನವೀಕರಣ ಮೊತ್ತವನ್ನು ಪಾವತಿಸುವಂತಿಲ್ಲ.

ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08182-228262 ಗೆ ಸಂಪರ್ಕಿಸಬಹುದು.

# ಧರ್ಮಸ್ಥಳ ಪ್ರಕರಣಗಳ ಸಮಗ್ರ ತನಿಖೆಗೆ ಒತ್ತಾಯ

## ಎನ್‌ಎಫ್‌ಐಡಬ್ಲ್ಯೂ ನಿಂದ ಸಹಿ ಸಂಗ್ರಹ




**ದಾವಣಗೆರೆ:** ಎಸ್‌ಐಟಿ ಧರ್ಮಸ್ಥಳದ ಎಲ್ಲಾ ಅಪರಾಧ ಪ್ರಕರಣಗಳನ್ನು ಸಮಗ್ರ ತನಿಖೆ ನಡೆಸಬೇಕು ಎಂದು ಒತ್ತಾಯಿಸಿ ಎನ್‌ಎಫ್‌ಐಡಬ್ಲ್ಯೂ ಭಾರತ ರಾಷ್ಟ್ರೀಯ ಮಹಿಳಾ ಒಕ್ಕೂಟ ಜಿಲ್ಲಾ ಸಮಿತಿ ಸಹಿ ಸಂಗ್ರಹ ಚಳುವಳಿ ಮಾಡುವ ಮೂಲಕ ಸರ್ಕಾರಕ್ಕೆ ಒತ್ತಾಯಿಸಿದೆ.

ನಗರದ ಕಾಂ. ಪಂಪಾಪತಿ ಭವನದಲ್ಲಿ, ಭಾರತ ರಾಷ್ಟ್ರೀಯ ಮಹಿಳಾ ಒಕ್ಕೂಟದ ಕರೆಯ ಮೇರೆಗೆ ಕರ್ನಾಟಕ ರಾಜ್ಯೋತ್ಸವದ ಈ ದಿನದಂದು ಸಹಿ ಸಂಗ್ರಹ ಚಳವಳಿ ಆರಂಭಿಸಿದ ಮಹಿಳಾ ಮುಖಂಡರು, ಈ ನೆಲದಲ್ಲಿ ದಶಕಗಳಿಂದ ಹೆಣ್ಣು ಮಕ್ಕಳನ್ನು, ಗಂಡಸರನ್ನು ಘೋರ ಹಿಂಸೆಗೊಳಪಡಿಸಿ ಜೀವ ತೆಗೆದ ದುರುಳರು ಯಾರೆಂದು ಪತ್ತೆ ಹಚ್ಚದೆ ನೇರವಾಗಿ ಮತ್ತು ಪರೋಕ್ಷವಾಗಿ ಅವರ ರಕ್ಷಣೆಗೆ ನಿಂತಿರುವ ಸರ್ಕಾರ, ಅದರ ಸಚಿವರು ಈ ನಾಡಿನ ಸಂಸದರು, ವಿರೋಧ ಪಕ್ಷಗಳ ನಾಯಕರು, ಶಾಸಕರು, ಜನಪ್ರತಿನಿಧಿಗಳು ಎಲ್ಲರೂ ಜನತೆಗೆ ಕರ್ನಾಟಕ ರಾಜ್ಯೋತ್ಸವದ ಶುಭಾಶಯಗಳನ್ನು ಕೋರುವ ಅಧಿಕಾರವನ್ನು ನೈತಿಕವಾಗಿ ಕಳೆದುಕೊಂಡಿದ್ದಾರೆ ಎಂದರು.

ಸೌಜನ್ಯ, ಯಮುನಾ– ನಾರಾಯಣ, ಪದ್ಮಲತಾ, ವೇದವಲ್ಲಿ ಯಂತಹ ಕನ್ನಡ ನೆಲದ ಮಕ್ಕಳು ಪದಗಳಲ್ಲಿ ಹೇಳಲಾರದಷ್ಟು ನೋವುಂಡು ಮಣ್ಣಾದ ಕಹಿ ನೆನಪುಗಳು ಇಂದಿಗೂ ಜನರನ್ನು ಕಾಡುತ್ತಿವೆ.

ಧರ್ಮಸ್ಥಳದಲ್ಲಿ ಹತ್ತಾರು ವರ್ಷಗಳಿಂದ ನಡೆದಿರುವ, ಅನೇಕ ಮಹಿಳೆಯರ ನಾಪತ್ತೆ, ಅತ್ಯಾಚಾರ, ಅಸಹಜ ಸಾವು ಹಾಗೂ ಕೊಲೆ ಪ್ರಕರಣಗಳಲ್ಲಿ ಅಪರಾಧಿಗಳನ್ನು ಇನ್ನೂ ಪತ್ತೆ ಮಾಡಿಲ್ಲ, ನಿರ್ದಿಷ್ಟ ಕಾರಣ ಹೇಳದೆ ತನಿಖೆಯನ್ನು ನಿಲ್ಲಿಸಲಾಗಿದೆ, ಈ ನಿರ್ಧಾರವು ಸರಿಯಲ್ಲ ಹೀಗಾಗಿ ಧರ್ಮಸ್ಥಳ ಪ್ರಕರಣದಲ್ಲಿ ಅಪರಾಧಿಗಳು ಪತ್ತೆಯಾಗುವವರೆಗೂ ಎಸ್‌ಐಟಿ ತನಿಖೆ ಮುಂದುವರೆಯಬೇಕು, ಧರ್ಮಸ್ಥಳದ ಎಲ್ಲಾ ಪ್ರಕರಣಗಳನ್ನು ಸಂಪೂರ್ಣವಾಗಿ ಎಸ್‌ಐಟಿ ತನಿಖೆಗೆ ಒಳಪಡಿಸಬೇಕು ಎಂದು ನ್ಯಾಯಕ್ಕಾಗಿ ಆಗ್ರಹಿಸಿ ಮಹಿಳೆಯರು ಸಹಿ ಸಂಗ್ರಹ ಅಭಿಯಾನ ಆರಂಭಿಸಿದರು.

ರಾಜ್ಯ ಎಂದರೆ ಬರೀ ಗಡಿಯಲ್ಲ, ಸೀಮೆಯಲ್ಲ ಈ ನೆಲದಲ್ಲಿರುವ ಮನುಷ್ಯರು, ಜನಸಾಮಾನ್ಯರು. ಎಸ್‌ಐಟಿ ರಚಿಸಿದ್ದರೂ ನಾಡಿನ ಜನತೆಗೆ ನ್ಯಾಯ ಸಿಗದೇ, ಅತ್ಯಾಚಾರ–ಕೊಲೆಗಳ ಆರೋಪಿಗಳು ರಾಜಾರೋಷವಾಗಿ ಓಡಾಡಿಕೊಂಡಿರುತ್ತಾರೆ ಎಂದಾದರೆ ಸರ್ಕಾರ ನಡೆಸುವ ಕನ್ನಡ ನಾಡಿನ ಉತ್ಸವಕ್ಕೆ ಏನು ಅರ್ಥ ಎಂದು ಜನ ಕೇಳುತ್ತಿದ್ದಾರೆ ಎಂದರು.

ಮಹಿಳಾ ಒಕ್ಕೂಟದ ಜಿಲ್ಲಾಧ್ಯಕ್ಷರಾದ ಸರೋಜಾ, ಚಂದ್ರಮ್ಮ, ಮಂಜುಳಾ, ಮಹಿಳಾ ಮುನ್ನಡೆ ಸಂಘಟನೆ ಮುಖಂಡರಾದ ಪವಿತ್ರ ಸೇರಿದಂತೆ ಮುಖಂಡರುಗಳಾದ ಆವರಗೆರೆ ಚಂದ್ರು, ಹೆಚ್.ಜಿ. ಉಮೇಶ್ , ಜಿ.ಯಲ್ಲಪ್ಪ, ವಿ. ಲಕ್ಷ್ಮಣ, ಸತೀಶ್ ಅರವಿಂದ್, ಸುರೇಶ್ ಯರಗುಂಟೆ, ಹೆಚ್.ಪಿ. ಉಮಾಪತಿ, ನಾಗೇಂದ್ರಚಾರಿ ಸೇರಿದಂತೆ ಮಹಿಳಾ ಸಂಘಟನೆಯ ಸಹಿ ಸಂಗ್ರಹ ಚಳುವಳಿಯಲ್ಲಿ ಭಾಗವಹಿಸಿದ್ದರು.

ಬಳ್ಳಾರಿ ಜಿಲ್ಲೆಯಲ್ಲಿ ನ.13 ರಿಂದ 19 ರ ವರೆಗೆ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿ

# ಯಾವುದೇ ಲೋಪವಾಗದಂತೆ ಯಶಸ್ವಿಗೊಳಿಸೋಣ : ಜಿಲ್ಲಾಧಿಕಾರಿ

**ಬಳ್ಳಾರಿ:** ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಇದೇ ನವೆಂಬರ್ 13 ರಿಂದ 19 ರವರೆಗೆ ನಡೆಯಲಿರುವ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿಯನ್ನು ಅಧಿಕಾರಿಗಳು ಅಚ್ಚುಕಟ್ಟಾಗಿ ಆಯೋಜಿಸುವ ಮೂಲಕ ಜಿಲ್ಲೆಗೆ ಹೆಸರು ಬರುವಂತೆ ಯಶಸ್ವಿಗೊಳಿಸೋಣ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.



ಮಂಗಳವಾರ, ನಗರದ ನೂತನ ಜಿಲ್ಲಾಡಳಿತ ಭವನದ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಏರ್ಪಡಿಸಿದ್ದ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿ ಕುರಿತ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಲ್ಯಾಣ ಕರ್ನಾಟಕ ಭಾಗದ ವ್ಯಾಪ್ತಿಯಲ್ಲಿ ಸೇನಾ ನೇಮಕಾತಿ ರ್‍ಯಾಲಿಗಾಗಿ ಬಳ್ಳಾರಿ ಜಿಲ್ಲೆಯನ್ನು ಆಯ್ಕೆ ಮಾಡಿರುವುದು ಹೆಮ್ಮೆಯ ಸಂಗತಿಯಾಗಿದೆ. ಹಾಗಾಗಿ ಜಿಲ್ಲೆಯ ಎಲ್ಲಾ ರಾಜ್ಯ ಮತ್ತು ಕೇಂದ್ರ ಇಲಾಖೆಗಳ ಅಧಿಕಾರಿಗಳ ಸಹಕಾರ ಮತ್ತು ಸಹಭಾಗಿತ್ವದೊಂದಿಗೆ ಶಿಸ್ತುಬದ್ಧವಾಗಿ ಆಯೋಜನೆ ಮಾಡುವ ಮೂಲಕ ಯಾವುದೇ ರೀತಿಯ ಲೋಪವಾಗದಂತೆ ಯಶಸ್ವಿಗೊಳಿಸೋಣ ಎಂದು ತಿಳಿಸಿದರು.

ನ.13 ರಿಂದ ಆರಂಭವಾಗಿ ನ.19 ರವರೆಗೆ ನಡೆಯಲಿರುವ ಸೇನಾ ನೇಮಕಾತಿ ರ್‍ಯಾಲಿಯಲ್ಲಿ ಶಾರಿರೀಕ ದೇಹದಾರ್ಢ್ಯ ಮತ್ತು ವೈದ್ಯಕೀಯ ಪರೀಕ್ಷೆ ನಡೆಯಲಿದ್ದು, ಎಲ್ಲ ಪ್ರಕ್ರಿಯೆಗಳು ಮುಕ್ತಾಯವಾಗುವವರೆಗೆ ಸೇನಾ ಅಧಿಕಾರಿಗಳಿಗೆ ಜಿಲ್ಲೆಯ ಅಧಿಕಾರಿಗಳು ಸಹಕಾರ ನೀಡಬೇಕು ಎಂದು ತಿಳಿಸಿದರು.

ಬೆಂಗಳೂರು ಪ್ರಧಾನ ಕಚೇರಿಯ ಆರ್‌ಓ ಮತ್ತು ಸೇನಾ ನೇಮಕಾತಿ ಅಧಿಕಾರಿಯಾದ ಮೇಜರ್ ಕಪಿಲ್.ಕೆ ಅವರು ಮಾತನಾಡಿ, ಜಿಲ್ಲೆಯಲ್ಲಿ ಒಟ್ಟು 7 ದಿನಗಳ ಕಾಲ ನಡೆಯುವ ರ್‍ಯಾಲಿಯಲ್ಲಿ ಕರ್ನಾಟಕ ಮತ್ತು ಕೇರಳ ರಾಜ್ಯಗಳಿಂದ ಅಭ್ಯರ್ಥಿಗಳು ಭಾಗವಹಿಸಲಿದ್ದಾರೆ. ರ್‍ಯಾಲಿ ಪ್ರಕ್ರಿಯೆಯು ಆಯಾ ದಿನಗಳ ಬೆಳಿಗ್ಗೆ 05 ರಿಂದ ಪ್ರಾರಂಭಗೊಂಡು ಮಧ್ಯಾಹ್ನ 12 ರ ವರೆಗೆ ನಡೆಯಲಿದ್ದು, ಪ್ರತಿ ದಿನ 800 ರಿಂದ 1000 ವರೆಗೆ ಅಭ್ಯರ್ಥಿಗಳು ಭಾಗವಹಿಸುವ ಅವಕಾಶವಿದೆ. ಅದರಲ್ಲಿ ಶೇ.40 ರಷ್ಟು ಅಭ್ಯರ್ಥಿಗಳು ಅರ್ಹರಾಗುತ್ತಾರೆ. ಎರಡು ದಿನಗಳ ಕಾಲ ತಂಗಲಿದ್ದು, ಅವರಿಗೆ ಎಲ್ಲಾ ರೀತಿಯ ಅಗತ್ಯ ಸೌಲಭ್ಯ ಒದಗಿಸುವುದು ಕರ್ತವ್ಯವಾಗಿದೆ

# ಶೃಂಗೇರಿ ಕೆರೆಕಟ್ಟೆಯಲ್ಲಿ ಇಬ್ಬರ ಬಲಿ ಪಡೆದಿದ್ದ ಕಾಡಾನೆ ಸೆರೆ



**ಚಿಕ್ಕಮಗಳೂರು:** ಜಿಲ್ಲೆಯ ಶೃಂಗೇರಿ ತಾಲೂಕಿನ ಕೆರೆಕಟ್ಟೆ ಸಮೀಪದ ಕೆರೆಗದ್ದೆ ಗ್ರಾಮದಲ್ಲಿ ಇಬ್ಬರನ್ನು ಬಲಿ ಪಡೆದು, ಬೆಳೆನಾಶ ಮಾಡಿ ಆತಂಕ ಸೃಷ್ಟಿ ಮಾಡಿದ್ದ ಕಾಡಾನೆ ಕೊನೆಗೂ ಸೆರೆಯಾಗಿದೆ.

ಕಾರ್ಯಾಚರಣೆ ನಡೆಸಿದ್ದ ಅರಣ್ಯ ಇಲಾಖೆ ಕೊನೆಗೂ ಹಂತಕ ಆನೆಯನ್ನು ಸೆರೆಹಿಡಿದಿದೆ. ಕೆರೆಕಟ್ಟೆ ಸಮೀಪದ ಕೆರೆಗದ್ದೆ ಗ್ರಾಮದ 44 ವರ್ಷದ ಹರೀಶ್ ಶೆಟ್ಟಿ, 55 ವರ್ಷದ ಉಮೇಶ್‌ಗೌಡ ಅವರ ಮೇಲೆ ಕಾಡಾನೆ ದಾಳಿ ಮಾಡಿ ಭೀಕರವಾಗಿ ಕೊಂದು ಹಾಕಿತ್ತು. ಇದರಿಂದ ಆಕ್ರೋಶಗೊಂಡ ಜನರು ಸರ್ಕಾರ ಮತ್ತು ಅರಣ್ಯ ಇಲಾಖೆಯ ವಿರುದ್ಧ ಪ್ರತಿಭಟನೆ ನಡೆಸಿದ್ದರು.

ಸಾವನ್ನಪ್ಪಿದ ಸ್ಥಳದಿಂದ ಮೃತದೇಹ ತೆಗೆಯಲು ಬಿಡದೆ ಸಂಜೆಯವರೆಗೂ ಪ್ರತಿಭಟನೆ ನಡೆಸಿ ಆಕ್ರೋಶ ಹೊರಹಾಕಿದ್ದರು. ಸ್ಥಳೀಯರ ಆಕ್ರೋಶ ಹೆಚ್ಚಾಗುತ್ತಿದ್ದಂತೆ ರಾಜ್ಯ ಸರ್ಕಾರ ಹಂತಕ ಕಾಡಾನೆ ಸೆರೆಗಾಗಿ ಆದೇಶ ನೀಡಿತ್ತು. ಹಂತಕ ಕಾಡಾನೆ ಸೆರೆ ಕಾರ್ಯಾಚರಣೆಗಾಗಿ ದುಬಾರೆ ಆನೆ ಶಿಬಿರದಿಂದ ಏಕಲವ್ಯ ಟೀಮ್ ಶೃಂಗೇರಿ ತಾಲೂಕಿನ ಕೆರೆಕಟ್ಟೆ ಕ್ಯಾಂಪ್ಗೆ ಬಂದಿತ್ತು.

ಕುದುರೆಮುಖ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯಲ್ಲಿರುವ ಶೃಂಗೇರಿ ತಾಲೂಕಿನ ಭಗವತಿ ಪ್ರದೇಶದ ಸಮೀಪದಲ್ಲೇ ಕುಮ್ಕಿ ಆನಗೆಳಿದ್ದವು. ಇದೇ ಪ್ರದೇಶದ ಸಮೀಪ ಕಾಡಾನೆ ಓಡಾಟ ನಡೆಸಿದ್ದು, ಕಾರ್ಯಾಚರಣೆ ವೇಳೆ ತಿಳಿದುಬಂದಿದೆ. ಕಿಲ್ಲರ್ ಸಲಗದ ಓಡಾಟದ ಸುಳಿವು ಸಿಗುತ್ತಿದ್ದಂತೆ ಅಲರ್ಟ್ ಆದ ಅರಣ್ಯ ಇಲಾಖೆಯ ಸಿಬ್ಬಂದಿ, ರಾತ್ರಿ ವೇಳೆ ಕಾರ್ಯಾಚರಣೆ ನಡೆಸಿದ್ದಾರೆ.

# ಮಕ್ಕಳು ಜಗತ್ತು ಬೆಳಗುವ ದೀಪಗಳಾಗಲಿ

## ದೀಪಾವಳಿ ಸ್ನೇಹಮಿಲನ ಗೋಮಾತೆ ಕಾರ್ಯಕ್ರಮದಲ್ಲಿ ಸಾಹಿತಿ ಚಟ್ನಳ್ಳಿ ಮಹೇಶ್

**ಚಿಕ್ಕಮಗಳೂರು:** ದೀಪ ತಾನು ಉರಿದು ಬೇರೆಯವರಿಗೆ ಬೆಳಕನ್ನು ನೀಡುತ್ತದೆ. ಅದೇ ರೀತಿ ನಮ್ಮ ಮಕ್ಕಳು ಜಗತ್ತನ್ನು ಬೆಳಗುವ ದೀಪಗಳಾಗಬೇಕೇ ಹೊರತು ಬೇರೆಯವರ ಮನೆಗೆ ಬೆಂಕಿ ಹಚ್ಚುವ ಕಿಡಿಗಳಾಗಬಾರದು ಎಂದು ಸಾಹಿತಿ ಚಟ್ನಳ್ಳಿ ಮಹೇಶ್ ಅಭಿಪ್ರಾಯಪಟ್ಟರು.

ನಗರದ ಹೊರವಲಯದ ಇಂತಹವರದಲ್ಲಿರುವ ಶ್ರೀ ಕಾಮಧೇನು ಗೋಶಾಲೆಯಲ್ಲಿ ಜೈ ಸಮಾಜದ ಗೋಭಕ್ತರಿಂದ ಆಯೋಜಿಸಲಾಗಿದ್ದ ದೀಪಾವಳಿ ಸ್ನೇಹಮಿಲನ ಗೋಮಾತೆಯೊಂದಿಗೆ ಎಂಬ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನಮ್ಮ ಕನ್ನಡ ಮಣ್ಣಿನ ಶಕ್ತಿಯೇ ಅನನ್ಯವಾದುದು. ಈ ಮಣ್ಣಿನ ಹೆಣ್ಣು ತನ್ನ ಮಕ್ಕಳು ಆಚಾರಕ್ಕೆ ಅರಸರಾಗಲಿ, ನೀತಿಗೆ ದೊರೆಯಾಗಲಿ, ಜಗಕ್ಕೆ ಜ್ಯೋತಿಯಾಗಲಿ ಎಂದು ಬಯಸುತ್ತಾರೆ. ಇಂಥ ತಾಯಂದಿರ ಉದಾತ್ತ ಗುಣಗಳನ್ನು ಮಕ್ಕಳು ತಮ್ಮಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಭಾರತೀಯ ಸಂಸ್ಕೃತಿಯಲ್ಲಿ ಹಸುವಿಗೆ ಅನಾದಿಕಾಲದಿಂದಲೂ ವಿಶೇಷ ಸ್ಥಾನಮಾನ ನೀಡಲಾಗಿದೆ. ನಮ್ಮ ದೇಶದ ಚರಿತ್ರೆ ಮತ್ತು ಸಂಸ್ಕೃತಿಯನ್ನು ವಿಸ್ತರಿಸಿರುವಾಗ ದಾರ್ಶನಿಕರು ನೀಡುವ ಪರಮೋಚ್ಚ ಉದಾಹರಣೆ ಗೋಮಾತೆಯಾಗಿತ್ತು. ಇದಲ್ಲದೆ ಸತ್ಯ ಪರಿಪಾಲನೆಗೆ ನಮ್ಮ ಹಿರಿಯರು ಉದಾಹರಣೆ ನೀಡಿದ್ದು ಗೋ ಮಾತೆಯನ್ನೇ ಎಂಬುದು ವಿಶೇಷವಾಗಿದೆ ಎಂದು ಹೇಳಿದರು.




ಗೋವುಗಳನ್ನು ಕಸಾಯಿಖಾನೆಗೆ ಸಾಗಿಸುವವರು ಒಂದು ಹೃದಯವನ್ನು ಸುಡುವವರು. ಅದೇ ಗೋವನ್ನು ಸಂರಕ್ಷಿಸುವವರು ಇನ್ನೊಂದು ಜೀವವನ್ನು ಬದುಕಿಸಿದ ಜ್ಯೋತಿಯಾಗುತ್ತಾರೆ. ಮನುಕುಲ ಶರೀರಕವಾಗಿ ಸದೃಢ ಹಾಗೂ ಆರೋಗ್ಯಯುತವಾಗಿದೆ ಎಂದರೆ ಅದಕ್ಕೆ ಗೋಮಾತೆಯೇ ಕಾರಣ. ಹೀಗಾಗಿ ಗೋ ಸಂಕುಲ ಉಳಿಸಿ ಬೆಳೆಸಲು ಪ್ರತಿಯೊಬ್ಬರು ಪಣತೊಡಬೇಕು ಎಂದು ಕರೆ ನೀಡಿದರು.

ಮನುಷ್ಯನನ್ನು ಹೊರತುಪಡಿಸಿ ಮರ, ಗಿಡ, ನದಿ, ಪ್ರಾಣಿ, ಪಕ್ಷಿ ಹೀಗೆ ಪ್ರತಿಯೊಂದು ಜೀವಸಂಕುಲವೂ ಪರೋಪಕಾರಿ ಗುಣ ಹೊಂದಿವೆ. ಅದರಲ್ಲಿಯೂ ಗೋಮಾತೆಯಂತೂ ಪರೋಪಕಾರಕ್ಕೆ ಉತ್ತಮ ನಿದರ್ಶನವಾಗಿದೆ. ಮನುಷ್ಯನ ಹುಟ್ಟಿನಿಂದ ಹಿಡಿದು ಸಾವಿನವರೆಗೆ ಗೋಮಾತೆ ಆತನ ಉದ್ಧಾರಕ್ಕೆ ಶ್ರಮಿಸುತ್ತದೆ. ಇಂಥ ಗೋಮಾತೆಯನ್ನು ಸಾಯಿಸುವ ಮಟ್ಟಕ್ಕೆ ಇಳಿಯುವುದು ಮನುಷ್ಯನ ನೀಚತನವನ್ನು ತೋರಿಸುತ್ತದೆ ಎಂದು ಬೇಸರ ವ್ಯಕ್ತಪಡಿಸಿದರು.

ಹಾಲಿನ ಮೌಲ್ಯವರ್ಧನೆ ಮಾಡಿದಾಗ ಅದು ಮೊಸರಾಗುತ್ತದೆ. ಮೊಸರನ್ನು ಮೌಲ್ಯವರ್ಧನೆ ಮಾಡಿದಾಗ ಬೆಣ್ಣೆ, ಬೆಣ್ಣೆಯಿಂದ ತುಪ್ಪವಾಗುತ್ತದೆ. ತುಪ್ಪ ಹಳೆಯದಾದಷ್ಟೂ ಅದರ ಮೌಲ್ಯ ಹೆಚ್ಚುತ್ತದೆ. ಇದೇ ರೀತಿ ವ್ಯಕ್ತಿಯನ್ನು ಒಂದು ಸಂಸ್ಕಾರಕ್ಕೆ ಒಳಪಡಿಸಿದಾಗ ಆತ ಒಬ್ಬ ಮನುಷ್ಯನಾಗುತ್ತಾನೆ. ಆ ಮನುಷ್ಯನಿಗೆ ನಿರಂತರವಾಗಿ ಸಂಸ್ಕಾರ ನೀಡುತ್ತಾ ಹೋದಂತೆ ಆತನ ಮೌಲ್ಯವು ಹೆಚ್ಚಾಗುತ್ತದೆ ಎಂದು ಪ್ರತಿಪಾದಿಸಿದರು.

ಒಬ್ಬ ತಾಯಿ ತನಗೆ ಎಷ್ಟೇ ಮಕ್ಕಳಿದ್ದರೂ ಎಲ್ಲರಿಗೂ ಸಮಾನವಾದ ಪ್ರೀತಿ ನೀಡುತ್ತಾಳೆ. ಆದರೆ ಅದೇ ಮಕ್ಕಳು ತಮ್ಮ ತಂದೆ ತಾಯಿಯರಿಗೆ ಸಮಾನ ಪ್ರೀತಿ ನೀಡುತ್ತಾರೆಯೇ ಎಂಬ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳುವ ಅಗತ್ಯವಿದೆ ಎಂದರು.

ಕಾರ್ಯಕ್ರಮದಲ್ಲಿ ಗೋಶಾಲೆಯ ಗೋವುಗಳಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ಆರ್‌ಎಸ್‌ಎಸ್ ಮುಖಂಡ ಮಲ್ಲಿಕಾರ್ಜುನ್, ಕಾಮದೇನು ಗೋ ಸೇವಾ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಭಗವಾನ್ ರಾಮಪಂತ್, ಬಾಣವರದ ಮಹಾವೀರ ಗೋಶಾಲೆಯ ಮುಖ್ಯಸ್ಥ ಭರತ್ ಜೈನ್ ಸೇರಿದಂತೆ ಜೈನ ಸಂಘದ ವಿವಿಧ ಮುಖಂಡರು ಉಪಸ್ಥಿತರಿದ್ದರು.

# 20 ಲಕ್ಷ ರೂ. ವೆಚ್ಚದ ಪಂಚಾಯಿತಿ ಭವನ ಲೋಕಾರ್ಪಣೆ : ಪ್ರವೀಣ್




**ಕಡೂರು:** ಗರ್ಜೆ ಗ್ರಾಮದಲ್ಲಿ ನೂತನವಾಗಿ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ 20 ಲಕ್ಷ ವೆಚ್ಚದಲ್ಲಿ ನಿರ್ಮಾಣ ಮಾಡಿರುವ ಪಂಚಾಯಿತಿ ಭವನದ ಉದ್ಘಾಟನೆ ತಾಲೂಕು ಪಂಚಾಯಿತಿಯ ಕಾರ್ಯನಿರ್ವಹಣಾ ಅಧಿಕಾರಿ ಸಿ.ಅರ್.ಪ್ರವೀಣ್ ಅವರು ನೆರವೇರಿಸಿದರು.

ಪಂಚಾಯಿತಿಯ ಭವನ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮ ಪಂಚಾಯಿತಿಯ ವತಿಯಿಂದ ಗ್ರಾಮಗಳ ಸರ್ವತೋಮುಖ ಅಭಿವೃದ್ಧಿ, ವಯಕ್ತಿಕ ಕಾಮಗಾರಿಗಳಾದ ಕೃಷಿಹೊಂಡ, ಜಾನುವಾರು ಕೊಟ್ಟಿಗೆ ಮುಂತಾದ ಕಾರ್ಯಗಳಿಗೆ ಸಹಾಯ ಧನ ನೀಡಲಾಗುತ್ತಿದೆ. ಪ್ರಸ್ತುತ ಗ್ರಾಮ ಪಂಚಾಯಿತಿಯ ಕಟ್ಟಡಕ್ಕೆ 20 ಲಕ್ಷ ಹಣವನ್ನು ನರೇಗಾ ಯೋಜನೆಯಡಿ ವ್ಯಯ ಮಾಡಲಾಗಿದೆ. ನಿಮ್ಮ ಗ್ರಾಮದ ಅಭಿವೃದ್ಧಿಯನ್ನು ನೀವುಗಳು ಸಕಾಲದಲ್ಲಿ ಕಟ್ಟುವ ತೆರಿಗೆಯನ್ನು ಬಳಸಿ ಮಾಡಲಾಗುವುದು, ಇದಲ್ಲದೆ ಸರ್ಕಾರದಿಂದ ಬರುವ ಹಣವೂ ಸೇರಿ ಗ್ರಾಮಗಳಿಗೆ ಮೂಲಭೂತ ಸೌಕರ್ಯ ಒದಗಿಸುವ ಕಾರ್ಯ ಮಾಡಲಾಗುತ್ತದೆ, ಸಾರ್ವಜನಿಕರು ಸಕಾಲದಲ್ಲಿ ತೆರಿಗೆ ಪಾವತಿಸಿದಲ್ಲಿ ಎಲ್ಲ ರೀತಿಯ ಅಭಿವೃದ್ಧಿ ಸಾಧ್ಯ ಎಂದರು.ಗರ್ಜೆ ಗ್ರಾಮಪಂಚಾಯಿತಿಯ ಅಧ್ಯಕ್ಷ ಜಿ.ಬಿ.ಹರೀಶ್ ಕುಮಾರ್ ಮಾತನಾಡಿ, ಎಲ್ಲ ಸದಸ್ಯರ ಸಹಕಾರ ಮತ್ತು ಸಾರ್ವಜನಿಕರ ತೆರಿಗೆ ಹಣದಿಂದ ಇಂದು ಸುಸಜ್ಜಿತ ಕಟ್ಟಡ ಗ್ರಾಮ ಪಂಚಾಯಿತಿಯ ಭವನ ನಿರ್ಮಾಣ ಮಾಡಲು ಸಾಧ್ಯ ಆಗಿದೆ. ತಮ್ಮ ಅಧ್ಯಕ್ಷ ಅವಧಿಯಲ್ಲಿ ಈ ಕಾರ್ಯ ಆಗಿರುವುದು ಸಂತಸ ತಂದಿದೆ.

# ಸ್ತನ್ಯಪಾನ ಶಿಶುವಿಗೆ ಸಂಪೂರ್ಣ ಆಹಾರದ ಜೊತೆಗೆ ಜೈವಿಕ ಔಷಧಿ ಕೂಡ : ಡಾ. ಜಿ.ಬಿ. ರಾಜ್



**ದಾವಣಗೆರೆ:** ನೂತನ ಬಿ.ಎಡ್. ಕಾಲೇಜಿನಲ್ಲಿ ವಿದ್ಯಾನಗರ ರೋಟರಿ ಕ್ಲಬ್‌ನ ಸಹಯೋಗದೊಂದಿಗೆ ಸ್ತನ್ಯಪಾನ ಕುರಿತಾದ ಉಪನ್ಯಾಸ ಮತ್ತು ಕಾಲ್ಪನಿಕ ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಲಾಯಿತು.

ಕ್ಲಬ್‌ನ ಅಧ್ಯಕ್ಷ ಡಾ. ಜಿ.ಬಿ. ರಾಜ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸ್ತನ್ಯಪಾನವು ಶಿಶುವಿಗೆ ಸಂಪೂರ್ಣ ಆಹಾರವಾಗಿ ಕಾರ್ಯನಿರ್ವಹಿಸುವುದಲ್ಲದೆ, ಎಲ್ಲ ಬಗೆಯ ಕಾಯಿಲೆಗಳಿಗೆ ನಿರೋಧಕ ಶಕ್ತಿಯನ್ನು ಒದಗಿಸುವ ಜೈವಿಕ ಔಷಧವೂ ಆಗಿದೆ ಎಂದು ಬಿ.ಎಡ್. ಪ್ರಶಿಕ್ಷಣಾರ್ಥಿಗಳಿಗೆ ತಿಳಿಸಿದರು. ಕೇವಲ ಬಾಹ್ಯ ಶರೀರದ ಬೆಳವಣಿಗೆಗಾಗಿ ಶಿಶುವಿಗೆ ಹಾಲುಣಿಸುವುದನ್ನು ನಿಲ್ಲಿಸುವುದು. ತಾಯಿಯು ತನ್ನ ಮಗುವಿಗೆ ಮಾಡುವ ಅನ್ಯಾಯದ ಪ್ರತೀಕವೆಂದು ಅವರು ಪ್ರತಿಪಾದಿಸಿದರು.

ಸ್ತನ್ಯಪಾನದ ಮಹತ್ವ ಕುರಿತು ಮುಖ್ಯ ಉಪನ್ಯಾಸ ನೀಡಿದ ಎಸ್.ಎಸ್. ಮೆಡಿಕಲ್ ಕಾಲೇಜಿನ ಮಕ್ಕಳ ತಜ್ಞ ಡಾ. ವೀರೇಶ್ ಬಾಬು ಮಾತನಾಡಿ, ಶಿಶುವು ಗರ್ಭದಲ್ಲಿ ಇರುವ ಹಂತದಿಂದಲೇ ಜನನದ ನಂತರದವರೆಗಿನ ಎಲ್ಲ ಅಂಶಗಳನ್ನು ವಿವರವಾಗಿ ವಿಶ್ಲೇಷಿಸಿದರು. ಗೊಂಬೆಗಳ ಮೂಲಕ ಕಾಲ್ಪನಿಕ ಪ್ರಹಸನವನ್ನು ಪ್ರದರ್ಶಿಸಿ, ಸ್ತನ್ಯಪಾನವು ತಾಯಿ, ಶಿಶು ಮತ್ತು ಸಮಾಜ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ತಿಳಿಸಿದರು.

ಸ್ತನಪಾನದ ಸರಿಯಾದ ವಿಧಾನಗಳು, ತಾಯಂದಿರು ಸಾಮಾನ್ಯವಾಗಿ ಮಾಡುವ ತಪ್ಪು ಗಳು ಹಾಗೂ ಸಾಂಪ್ರದಾಯಿಕ ಪಿಡುಗುಗಳ ಬಗ್ಗೆ ಜಾಗೃತಿ ಮೂಡಿಸಬೇಕೆಂದು ಒತ್ತಿ ಹೇಳಿದರು. ತಾಯಿ–ಶಿಶು ಬಂಧನದ ಮಹತ್ವವನ್ನು ಚಿತ್ರಗಳ ಮೂಲಕ ಪ್ರದರ್ಶಿಸಿ ಪ್ರಶಿಕ್ಷಣಾರ್ಥಿಗಳ ಮನದಟ್ಟು ಮಾಡಿಸಿದರು. ಶಿಶುವಿಗೆ ಎರಡು ವರ್ಷಗಳವರೆಗೆ ಸ್ತನಪಾನ ಮಾಡಿಸಿದರೆ ಮಗು ಆರೋಗ್ಯವಂತವಾಗಿ ಬೆಳೆಯುತ್ತದೆ ಎಂದು ಅವರು ನುಡಿದರು.

ರೋಟರಿ ಸದಸ್ಯ ಮಳವಳ್ಳಿ ಮಾತನಾಡಿ, ರೋಟರಿ ಸಂಸ್ಥೆಯ ಧ್ಯೇಯೋದ್ದೇಶಗಳು ಮತ್ತು ಪ್ರಪಂಚದಾದ್ಯಂತ

ಸಾರ್ವಜನಿಕ ಸ್ಥಳಗಳಲ್ಲಿ ಖಾಸಗಿ ಸಂಸ್ಥೆಗಳ ಚಟುವಟಿಕೆಗೆ ನಿರ್ಬಂಧ

# ತಡೆಯಾಜ್ಞೆ ವಿರೋಧಿಸಿ ಸರ್ಕಾರದ ಮೇಲ್ಮನವಿ, 'ಆದೇಶ ಕಾಯ್ದಿರಿಸಿದ' ಹೈಕೋರ್ಟ್

**ಬೆಂಗಳೂರು:** ಸಾರ್ವಜನಿಕ ಸ್ಥಳಗಳಲ್ಲಿ ಖಾಸಗಿ ಸಂಸ್ಥೆಗಳು ಯಾವುದೇ ಚಟುವಟಿಕೆ ನಡೆಸುವ ಮುನ್ನಾ ಪೂರ್ವಾನುಮತಿ ಪಡೆಯುವುದನ್ನು ಕಡ್ಡಾಯಗೊಳಿಸುವ ಸರ್ಕಾರದ ಆದೇಶದ ವಿರುದ್ಧ ಏಕಸದಸ್ಯ ನ್ಯಾಯಾಧೀಶರ ಆದೇಶವನ್ನು ಪ್ರಶ್ನಿಸಿ ರಾಜ್ಯ ಸರ್ಕಾರ ಸಲ್ಲಿಸಿದ್ದ ಮೇಲ್ಮನವಿಯ ತೀರ್ಪನ್ನು ಕರ್ನಾಟಕ ಹೈಕೋರ್ಟ್ ಮಂಗಳವಾರ ಕಾಯ್ದಿರಿಸಿದೆ.

ಸರ್ಕಾರದ ಆದೇಶ ಪ್ರಾಥಮಿಕ ನಾಗರಿಕರ ಮೂಲಭೂತ ಹಕ್ಕುಗಳನ್ನು ಉಲ್ಲಂಘಿಸುತ್ತದೆ ಎಂದು ಅಕ್ಟೋಬರ್ 28 ರಂದು ಹೊರಡಿಸಿದ ಮಧ್ಯಂತರ ಆದೇಶದಲ್ಲಿ ಏಕಸದಸ್ಯ ನ್ಯಾಯಾಧೀಶರು ಹೇಳಿದ್ದರು. ಸರ್ಕಾರದ ಆದೇಶ ಉಲ್ಲಂಘಿಸಿ ನಡೆಯುವ ಯಾವುದೇ ಕಾರ್ಯಕ್ರಮ ಅಥವಾ ಮೆರವಣಿಗೆಯನ್ನು ಭಾರತೀಯ ನ್ಯಾಯ ಸಂಹಿತಾ ನಿಬಂಧನೆಗಳ ಅಡಿಯಲ್ಲಿ "ಕಾನೂನುಬಾಹಿರ ಸಭೆ" ಎಂದು ಪರಿಗಣಿಸಲಾಗುತ್ತದೆ ಎಂದು ಸರ್ಕಾರ ಆದೇಶದಲ್ಲಿ ಹೇಳಲಾಗಿದೆ.




ಈ ಆದೇಶದಲ್ಲಿ ನಿರ್ದಿಷ್ಟವಾಗಿ RSS ಎಂದು ಹೇಳದಿದ್ದರೂ ಆದೇಶದ ನಿಬಂಧನೆಗಳು ಅದರ ಪಥ ಸಂಚಲನ ಸೇರಿದಂತೆ ಹಿಂದೂ ಬಲಪಂಥೀಯ ಸಂಘಟನೆಯ ಚಟುವಟಿಕೆಗಳ ಮೇಲೆ ಪರಿಣಾಮ ಬೀರುವ ಗುರಿ ಹೊಂದಿವೆ ಎಂದು ಹೇಳಲಾಗುತ್ತಿದೆ. ನ್ಯಾಯಮೂರ್ತಿ ಎಸ್ ಜಿ ಪಂಡಿತ್ ಮತ್ತು ನ್ಯಾಯಮೂರ್ತಿ ಗೀತಾ ಕೆ ಬಿ ಅವರಿದ್ದ ವಿಭಾಗೀಯ ಪೀಠದ ಮುಂದೆ ರಾಜ್ಯದ ಪರವಾಗಿ ವಾದ ಮಂಡಿಸಿದ ಅಡ್ವೊಕೇಟ್ ಜನರಲ್ (ಎಜಿ) ಶಶಿ ಕಿರಣ್ ಶೆಟ್ಟಿ, ಈ ಆದೇಶವು ಸರ್ಕಾರಿ ಆಸ್ತಿಯ ಮೇಲಿನ ಅತಿಕ್ರಮಣವನ್ನು ಕೇವಲ ಅಪರಾಧೀಕರಿಸಿದೆಯೇ ಹೊರತು ಮೂಲಭೂತ ಸ್ವಾತಂತ್ರ್ಯಗಳನ್ನು ಮೊಟಕುಗೊಳಿಸಿಲ್ಲ ಎಂದು ವಾದಿಸಿದರು.

10 ಅಥವಾ ಅದಕ್ಕಿಂತಲೂ ಹೆಚ್ಚಿನ ಜನರು ಸೇರಿದರೆ ಅದು ಕಾನೂನುಬಾಹಿರವೇ? ಒಟ್ಟಿಗೆ ತೆರಳುವ ಸಾಮಾನ್ಯ ಜನರ ಮೇಲೂ ಸರ್ಕಾರದ ನಿರ್ಬಂಧ ಅನ್ವಯವಾಗುತ್ತದೆಯೇ ಎಂದು ನ್ಯಾಯಪೀಠ ಪ್ರಶ್ನಿಸಿತು. ಮೆರವಣಿಗೆಗಳು ಮತ್ತು ರ್‍ಯಾಲಿಗಳಿಗೆ ಮಾತ್ರ ನಿರ್ಬಂಧ ಸೀಮಿತವಾಗಿದ್ದು, ಅರ್ಜಿದಾರರು ಪೂರ್ವಾನುಮತಿ ಇಲ್ಲದೆ ಉದ್ಯಾನವನಗಳಲ್ಲಿ ಸಾರ್ವಜನಿಕ ಭಾಷಣಗಳನ್ನು ನಡೆಸಲು ಅವಕಾಶವಿಲ್ಲ ಎಂದು ಎಜಿ ಪ್ರತಿಕ್ರಿಯಿಸಿದರು. "ನಾಳೆ 30 ಸಂಸ್ಥೆಗಳು ಒಂದು ಉದ್ಯಾನವನವನ್ನು ಆಕ್ರಮಿಸಿಕೊಂಡರೆ ಅದಕ್ಕೆ ಅನುಮತಿಸಲಾಗುತ್ತದೆಯೇ ಎಂದು ಪ್ರಶ್ನಿಸಿದ ಅವರು, ನಾಗರಿಕರು ಅಂತಹ ಕಾರ್ಯಕ್ರಮಗಳಿಗಾಗಿ ನಗರದಲ್ಲಿ ಸಭಾಂಗಣಗಳು ಅಥವಾ ಫ್ರೀಡಂ ಪಾರ್ಕ್‌ನಂತಹ ಗೊತ್ತುಪಡಿಸಿದ ಸ್ಥಳಗಳನ್ನು ಬಳಸಬಹುದು ಎಂದು ಹೇಳಿದರು. ಸಾರ್ವಜನಿಕ ಆಸ್ತಿಯನ್ನು ರಕ್ಷಿಸುವ ಮತ್ತು ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳುವ ಗುರಿಯನ್ನು ಹೊಂದಿರುವ ಆದೇಶವು, ನಾಗರಿಕರ ಹಕ್ಕುಗಳನ್ನು ಉಲ್ಲಂಘಿಸುವುದಿಲ್ಲ ಎಂದು ವಾದಿಸಿದರು.

## 'ಜನಗಣಮನ' ರಾಷ್ಟ್ರಗೀತೆ ಬ್ರಿಟಿಷರಿಗಾಗಿ ರಚಿಸಿದ 'ಸ್ವಾಗತ ಗೀತೆ' – ಸಂಸದ ಕಾಗೇರಿ ವಿವಾದಾತ್ಮಕ ಹೇಳಿಕೆ

**ಕಾರವಾರ:** ಹೊನ್ನಾವರ ತಾಲೂಕಿನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ವಂದೇ ಮಾತರಂ ಗೀತೆಯನ್ನು ಹೊಗಳುವ ಭರದಲ್ಲಿ ರಾಷ್ಟ್ರಗೀತೆಗೆ ಅಪಮಾನ ಮಾಡುವಂತೆ ಉತ್ತರ ಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ವಿವಾದಾತ್ಮಕ ಹೇಳಿಕೆ ನೀಡಿದ ಘಟನೆ ನಡೆದಿದೆ.



ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರದ ಪಟ್ಟಣದ ಪೊಲೀಸ್ ಪರೇಡ್ ಮೈದಾನದಲ್ಲಿ ಮೈ ಭಾರತ್ ಕೇಂದ್ರ ಉತ್ತರ ಕನ್ನಡ ಕಾರವಾರ ಹಾಗೂ ತಾಲೂಕಾಡಳಿತದ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿದ್ದ ಆತ್ಮನಿರ್ಭರ ಭಾರತಕ್ಕಾಗಿ ರಾಷ್ಟ್ರೀಯ ಏಕತಾ ನಡಿಗೆ ಕಾರ್ಯಕ್ರಮದಲ್ಲಿ ಭಾಷಣ ಮಾಡುವಾಗ ಅವರು ಹೀಗೆ ಹೇಳಿದ್ದಾರೆ.

# ಅರಿವಿನ ಕಣ್ಣು ತೆರೆಸಲು ಧರ್ಮಗುರು ಬೇಕು : ರಂಭಾಪುರಿ ಶ್ರೀ

**ರಿಪ್ಪನ್‌ಪೇಟೆ:** ಹೊರಗಿನ ಮಾಲಿನ್ಯ ಕಳೆಯಲು ಹೊರಟ ಮನುಷ್ಯ ತನ್ನ ಅಂತರಂಗದಲ್ಲಿಯೇ ಕತ್ತಲು ತುಂಬಿಕೊಂಡಿದ್ದಾನೆ. ಗೊತ್ತುಗುರಿಗಳಿಲ್ಲದ ಜೀವನ ಮನುಷ್ಯ ಬದುಕಲು ಬೇಕಾದ ಜ್ಞಾನವನ್ನು ಪಡೆಯುತ್ತಿಲ್ಲ. ಅರಿವಿನ ಕಣ್ಣು ತೆರೆಯಿಸಲು ಧರ್ಮ ಮತ್ತು ಗುರು ಬೇಕು ಎಂಬುದನ್ನು ಅರಿತಾಗ ಬಾಳು ಸಾರ್ಥಕಗೊಳ್ಳುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸಮೀಪದ ಶ್ರೀಮದ್ ರಂಭಾಪುರಿ ಖಾಸಾ ಶಾಖಾ ಮಳಲಿ ಸಂಸ್ಥಾನ ಮಠದಲ್ಲಿ ಜರುಗಿದ ಕಾರ್ತಿಕ ದೀಪೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.



ಕಾರ್ತಿಕ ಮಾಸ ಬೆಳಕಿನ ಹಬ್ಬ. ಹೊರಗಿರುವ ಕತ್ತಲೆಯನ್ನು ದೀಪ ಹಚ್ಚಿ ಕಳೆಯಬಹುದು. ಆದರೆ ಒಳಗಿರುವ ಅಜ್ಞಾನವೆಂಬ ಕತ್ತಲೆಯನ್ನು ಗುರುವಿನ ಮಾರ್ಗದರ್ಶನ ಮತ್ತು ಸಂಸ್ಕಾರದಿಂದ ಮಾತ್ರ ಬೆಳಕು ಕಾಣಲು ಸಾಧ್ಯ. ಜ್ಯೋತಿ ಬೆಳಗುತ್ತಿದೆ ಉರಿಯುತ್ತಿಲ್ಲ. ಆದರೆ ಮನುಷ್ಯ ಉರಿಯುತ್ತಿದ್ದಾನೆ ಬೆಳಗುತ್ತಿಲ್ಲ. ಬೆಳಗುವುದಕ್ಕೂ ಉರಿಯುವುದಕ್ಕೂ ಬಹಳಷ್ಟು ಅಂತರವಿದೆ. ಒಂದು ಬಾಳಿನ ವಿಕಾಸವಾದರೆ ಇನ್ನೊಂದು ನಾಶದ ಸಂಕೇತ. ಬದುಕು ಬಲಗೊಳ್ಳಬೇಕಲ್ಲದೇ ದುರ್ಬಲಗೊಳ್ಳಬಾರದು. ಹಚ್ಚುವುದಾದರೆ ದೀಪ ಹಚ್ಚಬೇಕು. ಬೆಂಕಿ ಹಚ್ಚಬಾರದು. ಆರಿಸುವುದಾದರೆ ಬೆಂಕಿ ಆರಿಸಬೇಕು ದೀಪ ಆರಿಸಬಾರದು ಎಂಬ ನೀತಿಯ ಸಂದೇಶವನ್ನು ಅರಿತು ಬಾಳಬೇಕಾಗುತ್ತದೆ. ಜಗ ಬೆಳಗಲು ಸೂರ್ಯ ಮನ ಬೆಳಗಲು ಗುರು ಬೇಕು. ಧರ್ಮ ಅರ್ಥ ಕಾಮ ಮತ್ತು ಮೋಕ್ಷ ಎಂಬ ಚತುರ್ವಿಧ ಪುರುಷಾರ್ಥಗಳಲ್ಲಿ ಒಂದನ್ನಾದರೂ ಸಂಪಾದಿಸಿಕೊಳ್ಳದಿದ್ದರೆ ಜೀವನ ನಿರರ್ಥಕವೆಂಬ ಎಚ್ಚರಿಕೆಯನ್ನು ಶ್ರೀ ಜಗದ್ಗುರು ರೇಣುಕಾಚಾರ್ಯರು ವೀರಶೈವ ಧರ್ಮ ಸಿದ್ಧಾಂತದ ಸಂವಿಧಾನದಲ್ಲಿ ನಿರೂಪಿಸಿದ್ದಾರೆ. ಭೌತಿಕ ಸಂಪನ್ಮೂಲಗಳಾಗಲಿ ಸಿರಿ ಸಂಪತ್ತಿನ ಸಂಗ್ರಹವಾಗಲಿ ಮನುಷ್ಯನಿಗೆ ಸಂತೃಪ್ತಿ ಸಮಾಧಾನ ತರಲಾರವು. ಇದರೊಂದಿಗೆ ಒಂದಿಷ್ಟಾದರೂ ಶಿವಜ್ಞಾನದ ಹಸಿವು ಇರಬೇಕಾಗುತ್ತದೆ.

ಮಳಲಿ ಸಂಸ್ಥಾನ ಮಠದಲ್ಲಿ ಕಾರ್ತಿಕ ದೀಪೋತ್ಸವ ಧರ್ಮ ಸಮಾರಂಭ ವಿಜೃಂಭಣೆಯಿಂದ ಜರುಗುತ್ತಿರುವುದು ತಮಗೆ ಅಪಾರ ಸಂತೋಷ ತಂದಿದೆ ಎಂದ ಜಗದ್ಗುರುಗಳು ಡಾ. ನಾಗಭೂಷಣ ಶಿವಾಚಾರ್ಯ ಸ್ವಾಮಿಗಳವರ ಕ್ರಿಯಾಶೀಲ ಬದುಕು ಮತ್ತು ಆದರ್ಶ ಚಿಂತನೆಗಳು ಮಠದ ಅಭಿವೃದ್ಧಿಗೆ ಮತ್ತು ಭಕ್ತರ ಕಲ್ಯಾಣಕ್ಕೆ ಸಾಕ್ಷಿಯಾಗಿವೆ ಎಂದರು.

ಪತ್ರಕರ್ತ ರಿಪ್ಪನ್‌ಪೇಟೆಯ ಆರ್.ಎನ್.ಪ್ರಶಾಂತ ತಮ್ಮ ಪ್ರಾಸ್ತಾವಿಕ ನುಡಿಯಲ್ಲಿ ಮಳಲಿ ಸಂಸ್ಥಾನಮಠದ ಧಾರ್ಮಿಕ ಇತಿಹಾಸ ಮೂಲ ಕರ್ತೃ ನಾಗಾರ್ಜುನ ಸ್ವಾಮಿಯ ಕ್ರಿಯಾಕರ್ತೃತ್ವ ಶಕ್ತಿ ಅಪಾರವಾದುದು. ನ್ಯಾಯ ಧರ್ಮ ನೀತಿಗಳ ಅರಿವು ಇಲ್ಲದಂತಾಗಿ ಮನುಷ್ಯ ಕವಲು ದಾರಿಯಲ್ಲಿ ಸಾಗುತ್ತಿದ್ದಾನೆ. ಮಲಿನಗೊಂಡ ಮನಸ್ಸು ಪರಿಶುದ್ಧಗೊಳ್ಳಲು ಗುರುವಿನ ಅರಿವಿನ ಬೋಧ ಬಹಳ ಮುಖ್ಯ. ಮಲೆನಾಡಿನ ಪ್ರಾಂತದಲ್ಲಿರುವ ಮಳಲಿಮಠ ಭಕ್ತರ ಬಾಳಿನ ಭಾಗ್ಯೋದಯಕ್ಕೆ ಸದಾ ಶ್ರಮಿಸುತ್ತಿದೆ. ಇದಕ್ಕೆಲ್ಲ ಮಳಲಿ ಸಂಸ್ಥಾನಮಠದ ಡಾ. ನಾಗಭೂಷಣ ಶಿವಾಚಾರ್ಯರ ಪ್ರಾಮಾಣಿಕ ಪ್ರಯತ್ನ ಪರಿಶ್ರಮ ಕಾರಣವೆಂದರು.

Published and Owned by : **PRATHIBHA M.S.**, Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**